ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ    Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 140 ಸಂಚಿಕೆ- 140 | PAGE-8 ಪುಟ-8 | ಶನಿವಾರ 12.07.2025 | RS.2/- ಬೆಲೆ 2/-

# ಹಾಡುಹಗಲೇ ಚಿನ್ನದಂಗಡಿ ದರೋಡೆ

# 2-3 ಕೆಜಿ ಚಿನ್ನ ದೋಚಿದ ನಾಲ್ವರು









ಮಾಲೀಕನಿಗೆ ಗನ್ ತೋರಿಸಿ ದರೋಡೆ ಮಾಡಿದ್ದಾರೆ. ಅಂಗಡಿ ಮಾಲೀಕ ಸಬಕಾ ಮಾಲೀಕ್ ಅವರು ಈ ಹಿಂದೆ ಇದೇ ಅಂಗಡಿಯಲ್ಲಿ ಕೆಲಸ ಮಾಡಿದವರು ಕೃತ್ಯದಲ್ಲಿ ಭಾಗಿಯಾಗಿದ್ದಾರೆ ಎಂದು ಶಂಕಿಸಿದ್ದಾರೆ. ಈ ಬಗ್ಗೆ ತನಿಖೆ ನಡೆಸಲು ದರೋಡೆ ಪ್ರಕರಣದ ತನಿಖೆಗೆ ಐದು ವಿಶೇಷ ತಂಡ ರಚನೆ ಮಾಡಿದ್ದೇವೆ. ಆದಷ್ಟು ಬೇಗ ದರೋಡೆಕೋರರ ಬಂಧನ ಮಾಡುತ್ತೇವೆ. ಅಂಗಡಿಯಲ್ಲಿದ್ದ 2-3 ಕೆಜಿ ಚಿನ್ನ ದರೋಡೆಯಾಗಿದೆ. ಈ ಅಂಗಡಿಯವರು ಪ್ರತಿನಿತ್ಯ 15-20 ಗ್ರಾಂ ಚಿನ್ನಾಭರಣ ಮಾರಾಟ ಮಾಡುತ್ತಿದ್ದರು ಎಂದು ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಅವರು ತಿಳಿಸಿದ್ದಾರೆ.

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜು.11: ನಗರದ ಸರಾಫ್ ಬಜಾರ್‌ನಲ್ಲಿ ಹಾಡುಹಗಲೇ ಜ್ಯುವೆಲರಿ ಶಾಪ್‌ಗೆ ನುಗ್ಗಿದ ದ-ರೋಡೆಕೊರರು ಮಾಲೀಕನಿಗೆ ಗನ್ ತೋರಿಸಿ ಎರಡರಿಂದ ಮೂರು ಕೆಜಿ ಚಿನ್ನಾಭರಣ ದೋಚಿಕೊಂಡು ಪರಾರಿಯಾಗಿರುವ ಘಟನೆ ಶುಕ್ರವಾರ ನಡೆದಿದೆ.

ಶುಕ್ರವಾರ ಮಧ್ಯಾಹ್ನ 12:30ರ ಸುಮಾರಿಗೆ ಗ್ರಾಹಕರ ಸೋಗಿನಲ್ಲಿ ಮಾಲೀಕ್ ಜ್ಯುವೆಲರ್ಸ್ ಚಿನ್ನದ ಅಂಗಡಿಗೆ ನುಗ್ಗಿದ ನಾಲ್ವರು ದ-ರೋಡೆಕೋರರು, ಅಂಗಡಿ ಮಾಲೀಕ ಸಬಕಾ ಮಾಲೀಕ್ ಅವರಿಗೆ ಗನ್ ಹಾಗೂ ಮಾರಕಾಸ್ತ್ರಗಳನ್ನು ತೋರಿಸಿ, ನಂತರ ಆತನ ಕೈ ಕಾಲು ಕಟ್ಟಿ ಬಾಯಿಗೆ ಸೆಲ್ಲೋ ಟೇಪ್ ಸುತ್ತಿ, ಆತನ ಬಳಿಯಿದ್ದ ಅಲಮಾರಿಯ ಬೀಗವನ್ನು ತೆಗೆದುಕೊಂಡು ಅದರಲ್ಲಿದ್ದ ಚಿನ್ನಾಭರಣ ದೋಚಿ ಅಂಗಡಿಯ ಶಟರ್‌ನ್ನು ಮುಚ್ಚಿ ಪರಾರಿಯಾಗಿದ್ದಾರೆ ಎನ್ನಲಾಗಿದೆ.

ದರೋಡೆಕೋರರು ಲೂಟಿ ಮಾಡಿ ಹೋದ ನಂತರ ಚಿನ್ನದಂಗಡಿಯ ಮಾಲೀಕ ಸಬ್ ಕಾ ಮಾಲೀಕ್‌ನು ಅಂಗಡಿಯ ಶಟರ್‌ಗೆ ಬಡಿದು ಸದ್ದು ಮಾಡಿದಾಗ ಅಕ್ಕಪಕ್ಕದವರು ಬಂದು ಶಟರ್‌ನ್ನು ತೆರೆದು ನೋಡಿದಾಗ ದರೋಡೆ ನಡೆದದ್ದು ತಿಳಿದು ಬಂದಿದೆ.

ತಕ್ಷಣ ಪ್ರಕರಣದ ಕುರಿತಂತೆ ಪೊಲೀಸರಿಗೆ ತಿಳಿಸಿದಾಗ ಪೊಲೀಸರು ಬಂದು ಪರಿಶೀಲನೆ ನಡೆಸಿದ್ದಾರೆ.

ದರೋಡೆಕೋರರು ಚಿನ್ನದಂಗಡಿಗೆ ನುಗ್ಗಿರುವ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ದರೋಡೆಕೋರರು ಮುಸುಕುಧರಿಸಿರುವುದು ಕಾಣಿಸುತ್ತಿದ್ದು, ಅವರ ಚಹರೆ ಪಟ್ಟಿ ಆಧರಿಸಿ ತನಿಖೆ ನಡೆದಿದೆ. ಜನನಿಬಿಡ ಪ್ರದೇಶವಾಗಿರುವ ಸೂಪರ್ ಮಾರ್ಕೆಟ್ ನಲ್ಲಿ ಈ ರೀತಿ ಹಾಡಹಗಲೇ ದರೋಡೆ ನಡೆದಿರುವುದು ಜನತೆಯನ್ನು ಬೆಚ್ಚಿ ಬೀಳಿಸಿದೆ. ದರೋಡೆಕೋರರ ಕೃತ್ಯ ಅಲ್ಲಿನ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದ್ದು, ಪೊಲೀಸರು ಇದನ್ನು ಪರಿಶೀಲನೆ ನಡೆಸಿ, ತನಿಖೆ ಕೈಗೊಂಡಿದ್ದಾರೆ .

ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ., ಡಿಸಿಪಿ ಕನಿಕಾ ಸಿಕ್ರಿವಾಲ್, ಎಸಿಪಿ, ಪಿಐ ಹಾಗೂ ಸ್ಥಳೀಯ ಪೊಲೀಸರು, ಬೆರಳಚ್ಚು ತಜ್ಞರು, ಶ್ವಾನದಳ ಹಾಗೂ ಎಫ್ ಎಸ್ ಎಲ್ ತಂಡದವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದಾರೆ.

ಕಲಬುರಗಿ ನಗರದ ಬ್ರಹ್ಮಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು, ಪ್ರಕರಣ ದಾಖಲಿಸಿಕೊಂಡಿರುವ ಬ್ರಹ್ಮಪುರ ಠಾಣೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಇತ್ತೀಚೆಗೆ ನಗರದ ಪೂಜಾರಿ ಚೌಕ್ ಸಮೀಪದಲ್ಲಿ ಎಟಿಎಂ ನಲ್ಲಿದ್ದ ಕೋಟ್ಯಂತರ ಹಣವನ್ನು ದರೋಡೆ ಮಾಡಿದ್ದ ಪ್ರಕರಣ ಮಾಸುವ ಮುನ್ನವೇ ಇದೀಗ ನಗರದಲ್ಲಿ ಮತ್ತೊಂದು ದರೋಡೆ ನಡೆದಿದ್ದು, ಸಾರ್ವಜನಿಕರ ಆತಂಕ-ಕ್ಕೆ ಕಾರಣವಾಗಿದೆ. ಚಿನ್ನಾಭರಣ ಮಳಿಗೆಯಿಂದ ಲೂಟಿ ನಡೆದಿರುವ ವಿಷಯ ಬಹಿರಂಗವಾಗುತ್ತಲೇ ಸ್ಥಳದಲ್ಲಿ ಭಾರೀ ಸಂಖ್ಯೆಯಲ್ಲಿ ಜನರು ಜಮಾಯಿಸಿದ್ದರು.

## ವಿಜಯಪುರ ಕೆನರಾ ಬ್ಯಾಂಕ್ ದರೋಡೆ ಪ್ರಕರಣ: ಮತ್ತೆ 12 ಜನರ ಬಂಧನ

ವಿಜಯಪುರ:ಜು.11: ವಿಜಯಪುರ ಜಿಲ್ಲೆಯ ಕೆನರಾ ಬ್ಯಾಂಕಿನ ಮನಗೂಳಿ ಶಾಖೆಯಲ್ಲಿ 53.26 ಕೋಟಿ ರೂ. ಮೌಲ್ಯದ ಚಿನ್ನ ಮತ್ತು ನಗದು ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೆ 12 ಜನರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಶುಕ್ರವಾರ ತಿಳಿಸಿದ್ದಾರೆ. ಕಳೆದ ತಿಂಗಳು ವಶಕ್ಕೆ ಪಡೆದಿದ್ದ ಮಾಜಿ ಶಾಖಾ ವ್ಯವಸ್ಥಾಪಕ ವಿಜಯಕುಮಾರ್ ಮಿರಿಯಾಲ ಸೇರಿದಂತೆ ಮೂವರು ಆರೋಪಿಗಳ ವಿಚಾರಣೆಯ ನಂತರ ಈಗ ಮತ್ತೆ 12 ಆರೋಪಿಗಳನ್ನು ಬಂಧಿಸಲಾಗಿದೆ.

ಇದರೊಂದಿಗೆ ಬ್ಯಾಂಕ್ ದರೋಡೆ ಪ್ರಕರಣದಲ್ಲಿ ಬಂಧಿತರ ಸಂಖ್ಯೆ 15ಕ್ಕೆ ಏರಿಕೆಯಾಗಿದೆ. ಪೊಲೀಸರು ಇಲ್ಲಿಯವರೆಗೆ 39.26 ಕೋಟಿ ರೂ.ಗೂ ಹೆಚ್ಚು ಮೌಲ್ಯದ ಆಸ್ತಿಯನ್ನು ವಶಪಡಿಸಿಕೊಂಡಿದ್ದಾರೆ.

ಇದರಲ್ಲಿ 39 ಕೆಜಿ ಕರಗಿದ ಚಿನ್ನ 1.16 ಕೋಟಿ ರೂ. ನಗದು ಮತ್ತು ಐದು ಕಾರುಗಳು ಸೇರಿವೆ ಎಂದು ವಿಜಯಪುರ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ್ ನಿಂಬರಗಿ ತಿಳಿಸಿದ್ದಾರೆ.

ಕಳೆದ ಮೇ 25 ರಂದು ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನಲ್ಲಿರುವ ಕೆನರಾ ಬ್ಯಾಂಕಿನ ಮನಗೂಳಿ ಶಾಖೆಯಲ್ಲಿ ದರೋಡೆ ನಡೆದಿದ್ದು, ಇಲ್ಲಿ ಮಿರಿಯಾಲ ಈ ಹಿಂದೆ ಶಾಖಾ ವ್ಯವಸ್ಥಾಪಕರಾಗಿ ಸೇವೆ ಸಲ್ಲಿಸಿದ್ದರು.

## ಸರ್ಕಾರವೇ ಎಲ್ಲವನ್ನೂ ಮಾಡುವುದು ಕಷ್ಟವಾಗಬಹುದು: ಶರಣಪ್ರಕಾಶ್ ಪಾಟೀಲ್




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜು.11:ಸರ್ಕಾರವೇ ಎಲ್ಲವನ್ನೂ ಮಾಡುವುದು ಕಷ್ಟವಾಗಬಹುದು. ಯಶಸ್ವಿ ಕೈಗಾರಿಕಾ ಮಾದರಿಗಳಿಂದ ನಾವು ಕೂಡ ಕಲಿಯಬಹುದು. ಕೈಗಾರಿಕೆ ಸಂಸ್ಥೆಗಳು ನೀಡುವ ತರಬೇತಿಯನ್ನು ಶಿಕ್ಷಣಕ್ಕೆ ಮತ್ತು ಉದ್ಯೋಗಾವಕಾಶಗಳೊಂದಿಗೆ ಹೇಗೆ ಮಿಳಿತಗೊಳಿಸಬಹುದು ಎಂಬುದನ್ನು ನಾವು ಅಳವಡಿಸಿಕೊಳ್ಳಬೇಕು ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣ ಪ್ರಕಾಶ್ ಆರ್. ಪಾಟೀಲ್ ತಿಳಿಸಿದರು.

ಪಿಇಎಸ್ ವಿಶ್ವವಿದ್ಯಾಲಯದಲ್ಲಿ ಬಜಾಜ್ ಎಂಜಿನಿಯರಿಂಗ್ ಕೌಶಲ್ಯ ತರಬೇತಿ (ಬೆಸ್ಟ್) ಕೇಂದ್ರದ ಮೊದಲ ವಾರ್ಷಿಕೋತ್ಸವ ಸಮಾರಂಭದಲ್ಲಿ ಭಾಷಣ ಮಾಡಿದ ಸಚಿವರು, ಕೌಶಲ್ಯಾಭಿವೃದ್ಧಿಗೆ ಹೆಚ್ಚು ಒತ್ತು ನೀಡಲು ಹಾಗೂ ಯುವಕರನ್ನು ಸಬಲೀಕರಣಗೊಳಿಸಲು ಸಹಯೋಗದ ಪ್ರಯತ್ನಗಳಿಗೆ ಆದ್ಯತೆ ನೀಡಲಾಗುವುದು ಎಂದರು. ಈ ಯೋಜನೆಯು ವಿಶೇಷವಾಗಿ ಕಲ್ಯಾಣ ಮತ್ತು ಕಿತ್ತೂರು ಕರ್ನಾಟಕದ ವಿದ್ಯಾರ್ಥಿಗಳಿಗೆ ಸಾಕಷ್ಟು ಪ್ರಯೋಗವಾಗುತ್ತದೆ. ಮಹತ್ವಾಕಾಂಕ್ಷೆಯ ಜಿಲ್ಲೆಗಳ ಯುವಕರನ್ನು ಉನ್ನತೀಕರಿಸುವ ಮಾದರಿಯಾಗಿದೆ ಎಂದು ತಿಳಿಸಿದರು.

ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯೋಗ ಗುರಿಗಳನ್ನು ಸಾಧಿಸಲು ಬಲವಾದ ಸರ್ಕಾರಿ-ಶೈಕ್ಷಣಿಕ-ಉದ್ಯಮ ಪಾಲುದಾರಿಕೆಯನ್ನು ನಾವು ಇನ್ನಷ್ಟು ಅನ್ವೇಷಿಸಬೇಕಾಗಿದೆ ಎಂದು ಸಚಿವರು ತಿಳಿಸಿದರು.

ಬಜಾಜ್ ಆಟೋ ಮತ್ತು ಪಿಇಎಸ್ ವಿಶ್ವವಿದ್ಯಾಲಯದ ನಡುವಿನ ಈ ಸಹಯೋಗವು ಸಾರ್ವಜನಿಕ-ಖಾಸಗಿ ಸಹಭಾಗಿತ್ವಕ್ಕೆ ಅತ್ಯುತ್ತಮ ಉದಾಹರಣೆಯಾಗಿದೆ. ಶೈಕ್ಷಣಿಕ ಕ್ಷೇತ್ರದ ಬಲವು ಉದ್ಯಮದ ನಿಖರತೆಗೆ ಪೂರಕವಾಗಿದೆ. ವಿಶೇಷವಾಗಿ ಕರ್ನಾಟಕದ ಸೌಲಭ್ಯ ವಂಚಿತ ಪ್ರದೇಶಗಳ ಯುವಕರನ್ನು ಸಬಲೀಕರಣಗೊಳಿಸುವುದು ಪ್ರೋತ್ಸಾಹದಾಯಕ ಕ್ರಮವಾಗಬಾರದು. ಅದು ನಮ್ಮ ಭವಿಷ್ಯದ ಕಾರ್ಯತಂತ್ರದ ಭಾಗವಾಗಿರಬೇಕು ಎಂದು ಡಾ. ಪಾಟೀಲ್ ಹೇಳಿದರು. 320 ವಿದ್ಯಾರ್ಥಿಗಳಿಗೆ ತರಬೇತಿ ಬಜಾಜ್ ಆಟೋ ಲಿಮಿಟೆಡ್‌ನ ಸಿಎಸ್ಆರ್ ಉಪಕ್ರಮವಾದ ಪಿಇಎಸ್ ವಿಶ್ವವಿದ್ಯಾಲಯದ ಬೆಸ್ಟ್ ಕೇಂದ್ರವು ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಮೆಕಾಟ್ರಾನಿಕ್ಸ್, ಮೋಷನ್ ಕಂಟ್ರೋಲ್, ರೊಬೊಟಿಕ್ಸ್, ಇಂಡಸ್ಟ್ರಿ 4.0 ಮತ್ತು ಸ್ಮಾರ್ಟ್ ಮ್ಯಾನುಫ್ಯಾಕ್ಚರಿಂಗ್‌ನಂತಹ ಸಮಕಾಲೀನ ತಂತ್ರಜ್ಞಾನಗಳಲ್ಲಿ ಸುಧಾರಿತ ತರಬೇತಿ ನೀಡುತ್ತದೆ. ಮೊದಲ ವರ್ಷದಲ್ಲಿ, ಈ ಕಾರ್ಯಕ್ರಮವು 320 ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ತರಬೇತಿ ನೀಡಿದ್ದು, ಅವರೆಲ್ಲರೂ ಉತ್ತಮ ಸಂಬಳದೊಂದಿಗೆ ಉದ್ಯೋಗ ಪಡೆದುಕೊಂಡಿದ್ದಾರೆ. ಮುಂಬರುವ ವರ್ಷಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಯನ್ನು ದ್ವಿಗುಣಗೊಳಿಸುವ ಗುರಿ ಹೊಂದಲಾಗಿದೆ. ಪಿಇಎಸ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಡಿ. ಜವಾಹರ್, ಉಪಕುಲಪತಿ ಡಾ. ಜೆ. ಸೂರ್ಯ ಪ್ರಸಾದ್ ಮತ್ತು ಬಜಾಜ್ ಆಟೋ ಲಿಮಿಟೆಡ್‌ನ ಸಿಎಸ್ಆರ್ ಉಪಾಧ್ಯಕ್ಷ ಸುಧಾ-ಕರ್ ಗುಡಿಪತಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ನಾಯಕತ್ವ ಬದಲಾವಣೆ ಆಗಲ್ಲ, ಸಂಖ್ಯಾಬಲದ ಚರ್ಚೆ ಏಕೆ: ಪ್ರಿಯಾಂಕ್ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜು.11: ಎಐಸಿಸಿ ಅಧ್ಯಕ್ಷರು, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್, ಉಸ್ತುವಾರಿ ಸುರ್ಜೇವಾಲಾ ಅವರೇ ನಾಯಕತ್ವ ಬದಲಾವಣೆ ಇಲ್ಲ ಎಂದು ಸ್ಪಷ್ಟವಾಗಿ ಹೇಳಿರುವಾಗ ಚರ್ಚೆ ಯಾಕೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನೆ ಮಾಡಿದ್ದಾರೆ.

ನಾನೇ 5 ವರ್ಷ ಸಿಎಂ ಎಂಬ ಸಿದ್ದರಾಮಯ್ಯ ಹೇಳಿಕೆಗೆ ವಿಕಾಸಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಸಿದ್ದರಾಮಯ್ಯ ಅವರು ರಾಷ್ಟ್ರೀಯ ಮಾಧ್ಯಮದ ಜೊತೆ ಮಾತನಾಡಿ ಅಭಿಪ್ರಾಯ ಸಂಗ್ರಹವೇ ಮಾಡಿಲ್ಲ. ಯಾರೋ ಇಬ್ಬರು ಮಾತನಾಡಿದ್ದರೆ ಅದೇನು ದೊಡ್ಡದಲ್ಲ ಅಂತ ಹೇಳಿದ್ದಾರೆ. ನಾಯಕತ್ವದ ಬದಲಾವಣೆ ಅಭಿಪ್ರಾಯವೇ ತೆಗೆದುಕೊಳ್ಳದೇ ಇರುವಾಗ ಸಂಖ್ಯಾಬಲದ ಚರ್ಚೆ ಎಲ್ಲಿ ಬರುತ್ತದೆ ಎಂದು ಕೇಳಿದರು.

ನಾನು, ಡಿಕೆ ಶಿವಕುಮಾರ್ ಹೈಕಮಾಂಡ್ ಏನ್ ಹೇಳುತ್ತದೋ ಅದನ್ನು ಪಾಲನೆ ಮಾಡುತ್ತೇವೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ. ಡಿಕೆ

(2ನೇ ಪುಟ ನೋಡಿ)

## ನಿಗಮ-ಮಂಡಳಿ ಅಧ್ಯಕ್ಷರ ನೇಮಕ ಜು. 16ಕ್ಕೆ ಫೈನಲ್



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಜು.11: ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಂದೀಪ್ ಸಿಂಗ್ ಸುರ್ಜೆವಾಲಾ ಜೊತೆಯಲ್ಲಿ ನಾನು ಮತ್ತು ಡಿಸಿಎಂ ಡಿ ಕೆ ಶಿವಕುಮಾರ್ ಮಾತುಕತೆ ನಡೆಸಿದ್ದೇವೆ. ನಿಗಮ-ಮಂಡಳಿಗಳಿಗೆ ನಮ್ಮ ಕಾಂಗ್ರೆಸ್ ಕಾರ್ಯಕರ್ತರನ್ನು ಅಧ್ಯಕ್ಷರನ್ನಾಗಿ ನೇಮಿಸುವ ಕುರಿತು ಚರ್ಚೆ ಮಾಡಿದ್ದೇವೆ, ಆದರೆ ನೇಮಕ ಪ್ರಕ್ರಿಯೆ ಪೂರ್ಣವಾಗಲಿಲ್ಲ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ಇಂದು ದೆಹಲಿಯಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಜುಲೈ 16ರಂದು ಸುರ್ಜೆವಾಲಾ ಅವರು ಮತ್ತೊಮ್ಮೆ ಬೆಂಗಳೂರಿಗೆ

(2ನೇ ಪುಟ ನೋಡಿ)

## "ಗುರುಪೂರ್ಣಿಮೆ" ದಿನ "ತಂದೆ"ಯನ್ನು ನೆನೆದ ಮಕ್ಕಳು



ಮಲ್ಲಮ್ಮ ನುಡಿ ವಾರ್ತೆ ಸುರಪುರ: ತಾಲೂಕಿನ ನರಸಿಂಗಪೇಟೆ ಗ್ರಾಮದಲ್ಲಿ ಗುರುಪೂರ್ಣಿಮೆಯ ಅಂಗವಾಗಿ ನಡೆದ ವಿಶಿಷ್ಟ ಆಚರಣೆ ಎಲ್ಲರಿಗೂ ಸ್ಫೂರ್ತಿದಾಯಕವಾಗಿದೆ. ಮುಧೋಳ ಕುಟುಂಬದವರು ತಮ್ಮ ತಂದೆಯನ್ನು ತಮ್ಮ ಜೀವನದ ಮೊದಲ ಗುರು ಎಂದು ಸ್ಮರಿಸಿ, ಅವರ ಗೌರವಾರ್ಥವಾಗಿ ದೇವಸ್ಥಾನ ನಿರ್ಮಿಸಿ ದಿನಾಲು ಪೂಜಾ . ಮಾಡ್ತಾ ಬರುತ್ತಿದ್ದಾರೆ

ಈ ಸಂದರ್ಭದಲ್ಲಿ ಮಗಳು ಮಹಾದೇವಿ ಟಕ್ಕಳಕಿ ಅವರು "ಮಲ್ಲಮ್ಮ ನುಡಿ" ಪತ್ರಿಕೆಗೆ ಮಾತನಾಡುತ್ತಾ ಭಾವುಕರಾಗಿ ಹೇಳಿದರು:"ನಮ್ಮ ಜೀವನದ ಬೆಳವಣಿಗೆಯಲ್ಲಿ ತಂದೆ ತಾಯಿಯ ಪಾತ್ರ ಅಮೂಲ್ಯವಾದದ್ದು. ಅವರು ನಮಗೆ ಸತ್ಕಾರ್ಯ, ನೀತಿ ಹಾಗೂ ಸಂಸ್ಕಾರದ ಬೀಜ ಬಿತ್ತಿದವರು. ನಾವು ಸಾಧಿಸುವ ಪ್ರತಿಯೊಂದು ಹೆಜ್ಜೆಯಲ್ಲೂ ಅವರು ಇರುತ್ತಾರೆ ಗುರುಪೂರ್ಣಿಮೆಯ ಈ ದಿನದಂದು, ನನ್ನ ತಂದೆಯನ್ನು ನಾನು ನನ್ನ ಮೊದಲ ಗುರು ಎಂದು ನಾನು ಹೆಮ್ಮೆಯಿಂದ ಹೇಳುತ್ತೇನೆ ಮುಧೋಳ ಕುಟುಂಬ ಸಮಾಜಕ್ಕೆ ಆದರ್ಶ ನೀಡಿದ್ದು, ಮಕ್ಕಳಿಂದ ಪೋಷಕರಿಗೆ ಸಲ್ಲಬೇಕಾದ ನಿಜವಾದ ಗೌರವವನ್ನು ವ್ಯಕ್ತಪಡಿಸಿದ್ದಾರೆ.

## ಬಿಜೆಪಿ ವಿರುದ್ಧ ಜಾಹೀರಾತು: ಸಿಎಂ ವಿರುದ್ಧದ ಮಾನನಷ್ಟ ಮೊಕದ್ದಮೆಗೆ ಹೈಕೋರ್ಟ್ ತಡೆ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜು.11: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಬಿಜೆಪಿ, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ದಾಖಲಿಸಿರುವ ಕ್ರಿಮಿನಲ್ ಮಾನನಷ್ಟ ಮೊಕದ್ದಮೆಗೆ ಹೈಕೋರ್ಟ್ ಶುಕ್ರವಾರ ಮಧ್ಯಂತರ ತಡೆ ನೀಡಿದೆ.

2023ರ ವಿಧಾನಸಭಾ ಚುನಾವಣೆ ವೇಳೆ ಬಿಜೆಪಿ ವಿರುದ್ಧ ಭ್ರಷ್ಟಾಚಾರ ಆರೋಪ ಮಾಡಿ ದಿನ ಪತ್ರಿಕೆಗಳಲ್ಲಿ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಸಂಖ್ಯಾಬಲದ ಚರ್ಚೆ ಏಕೆ: ಪ್ರಿಯಾಂಕ್ ಖರ್ಗೆ

ಶಿವಕುಮಾರ್ ಅವರು ಸಿಎಂ ಕುರ್ಚಿ ಖಾಲಿ ಇಲ್ಲ ಅಂತ ಹೇಳಿದ್ದಾರೆ. ಹೈಕಮಾಂಡ್ ಸ್ಪಷ್ಟವಾಗಿ ನಾಯಕತ್ವದ ಬಗ್ಗೆ ಹೇಳಿದ ಮೇಲೆ ಎಲ್ಲವೂ ಮುಗಿಯಿತು ಎಂದು ಸ್ಪಷ್ಟಪಡಿಸಿದರು.

ದೆಹಲಿಗೆ ಹೋಗಬಾರದು, ಹೈಕಮಾಂಡ್ ಗೆ ಭೇಟಿಯಾಗಬಾರದು ಅಂದರೆ ಹೇಗೆ? ನವೆಂಬರ್ ಕ್ರಾಂತಿ, ಸೆಪ್ಟೆಂಬರ್ ಕ್ರಾಂತಿ, ಡಿಸೆಂಬರ್ ಶಾಂತಿ ಎನ್ನುವುದು ವಿಷಯವೇ ಅಲ್ಲ. ಮಾಧ್ಯಮಗಳ ಮುಂದೆ ಪಕ್ಷದ ವಿಚಾರ ಹೇಳಿದರೆ ತೀರ್ಮಾನ ಆಗುವುದಿಲ್ಲ. ಮಾಧ್ಯಮಗಳು ಕೇಳೋದು ನಿಲ್ಲಿಸಿ ಸರಿ ಆಗುತ್ತೆ. ಮಾಧ್ಯಮಗಳು ಎರಡು ದಿನ ಪ್ರವಾಸಕ್ಕೆ ಹೋಗಿ ಬನ್ನಿ ನಾಳೆಯೇ ಶಾಂತಿ ಆಗುತ್ತದೆ ಅಂತ ಮಾಧ್ಯಮಗಳ ಮೇಲೆ ಅರೋಪ ಮಾಡಿದರು.

ಕಾಂಗ್ರೆಸ್ ಶಾಸಕ ರಂಗನಾಥ್ ಅವರು ಡಿಕೆ ಶಿವಕುಮಾರ್ 40 ವರ್ಷ ಪಕ್ಷಕ್ಕೆ ದುಡಿದಿದ್ದಾರೆ. ಇಂದಲ್ಲ ನಾಳೆ ಸಿಎಂ ಆಗ್ತಾರೆ ಅಂತ ಹೇಳಿದ್ದಾರೆ. ಯಾವಾಗ ಅವಕಾಶ ಸಿಗುತ್ತೋ ಮಾಡೋಣ ಅಂತ ಹೇಳಿದ್ದಾರೆ. ಎಲ್ಲಾ ಕಡೆ ಹೀಗೆ ಬರುತ್ತದೆ. ಇದೇ ಎಲ್ಲರ ತೀರ್ಮಾನ ಅಲ್ಲ. ಯಾರ ಮುಂದೆ ಹೇಳಬೇಕೋ ಅವರ ಮುಂದೆ ಹೇಳಬೇಕು ಅಂತ ಕ್ರಾಂತಿ ಬಗ್ಗೆ, ನಾಯಕತ್ವ ಬದಲಾವಣೆ ಬಗ್ಗೆ ಮಾತನಾಡುವವರಿಗೆ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದರು.

ಕಾಂಗ್ರೆಸ್ ಶಾಸಕ ಸುಬ್ಬಾರೆಡ್ಡಿ ಮೇಲೆ ಇಡಿ ದಾಳಿ ಕುರಿತು ಮಾತನಾಡಿದ ಅವರು, ಇಡಿ, ಐಟಿ, ಸಿಬಿಐ ಸಂಸ್ಥೆಗಳು ಕೇಂದ್ರ ಸರ್ಕಾರದ ಕೈಗೊಂಬೆ ಆಗಿವೆ.10 ವರ್ಷಗಳಿಂದ ಅವರು ನಡೆಸಿರೋ ರೇಡ್ ತಗೊಳ್ಳಿ. ಸಂಸತ್ ನಲ್ಲಿ ಅವರ ಬಿಜೆಪಿ ಎಂಪಿ ಕೇಳಿರೋದಕ್ಕೆ ಉತ್ತರ ಕೊಟ್ಟಿದ್ದಾರೆ. ಇಷ್ಟು ರೇಡ್ ಮಾಡಿ 1.2% ಮಾತ್ರ ಕೇಸ್ ಬುಕ್ ಮಾಡಿದ್ದಾರೆ. ಐಟಿ, ಇಡಿಯನ್ನು ಇವರು ಪೊಲಿಟಿಕಲ್ ಟೂಲ್ ಆಗಿ ಬಳಸಿ ವಿಪಕ್ಷ ನಾಯಕರ ಮೇಲೆ ಬಳಸುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

# ನೇಮಕ ಜು. 16ಕ್ಕೆ ಫೈನಲ್

ಬರುತ್ತಾರೆ, ಅಂದು ನಾವು ಎಲ್ಲಾ ನಿಗಮ–ಮಂಡಳಿಗಳ ಅಧ್ಯಕ್ಷರ ನೇಮಕವನ್ನು ಅಂತಿಮಗೊಳಿಸುತ್ತೇವೆ ಎಂದರು.ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಆಗುತ್ತದೆ ಎಂಬುದು ಮಾಧ್ಯಮಗಳಲ್ಲಿ ಮಾತ್ರ ಚರ್ಚೆಯಾಗುತ್ತಿದೆ. ಪಕ್ಷದೊಳಗೆ ಅಂತಹ ಒಪ್ಪಂದವಾಗಲೀ, ಚರ್ಚೆಗಳಾಗಲೀ ಯಾವುದೂ ನಡೆಯುತ್ತಿಲ್ಲ. ದೆಹಲಿ ಭೇಟಿಯಲ್ಲಿಯೂ ಅಧಿಕಾರ ಹಂಚಿಕೆ ಕುರಿತು ಚರ್ಚೆಯಾಗಿಲ್ಲ.

ಐದೂ ವರ್ಷ ನಾನೇ ಮುಖ್ಯಮಂತ್ರಿಯಾಗಿರುತ್ತೇನೆ. ಈ ಬಗ್ಗೆ ಈಗಾಗಲೇ ನಮ್ಮ ಹೈಕಮಾಂಡ್, ರಣದೀಪ್ ಸಿಂಗ್ ಸುರ್ಜೇವಾಲಾ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಲ್ಲರೂ ಸ್ಪಷ್ಟನೆ ನೀಡಿದ್ದಾರೆ ಎಂದು ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

## ಮಾನನಷ್ಟ ಮೊಕದ್ದಮೆಗೆ ಹೈಕೋರ್ಟ್ ತಡೆ

ಜಾಹೀರಾತು ನೀಡಿದ್ದಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಕ್ರಿಮಿನಲ್ ಮಾನನಷ್ಟ ಮೊಕದ್ದಮೆ ದಾಖಲಿಸಲಾಗಿತ್ತು.

ತಮ್ಮ ವಿರುದ್ಧದ ಮಾನನಷ್ಟ ಮೊಕದ್ದಮೆ ರದ್ದು ಕೋರಿ ಸಿದ್ದರಾಮಯ್ಯ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್ ನ್ಯಾಯಮೂರ್ತಿ.ಎಸ್. ಆರ್. ಕೃಷ್ಣಕುಮಾರ್ ಅವರಿದ್ದ ಪೀಠ ಇಂದು ಮಧ್ಯಂತರ ತಡೆ ನೀಡಿದೆ.ರಾಜ್ಯದಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ಅಧಿಕಾರದಲ್ಲಿದ್ದ ಸಂದರ್ಭದಲ್ಲಿ ಸರ್ಕಾರ ವಿವಿಧ ಹುದ್ದೆಗಳಿಗೆ ದರ ನಿಗದಿಪಡಿಸಿದೆ ಎಂದು ಆರೋಪಿಸಿ ಕಾಂಗ್ರೆಸ್? ರಾಜ್ಯದ ಪ್ರಮುಖ ದಿನ ಪತ್ರಿಕೆಗಳ ಮುಖಪುಟದಲ್ಲಿ 'ಭ್ರಷ್ಟಾಚಾರ ದರ ಪಟ್ಟಿ' ಎಂಬ ಹೆಸರಿನಲ್ಲಿ ಜಾಹಿರಾತು ನೀಡಿತ್ತು.

ಈ ಜಾಹೀರಾತಿನಿಂದ ಪಕ್ಷದ ಗೌರವಕ್ಕೆ ದಕ್ಕೆಯಾಗಿದೆ ಎಂದು ಆರೋಪಿಸಿ ಬಿಜೆಪಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಕ್ರಿಮಿನಲ್ ಮಾನನಷ್ಟ ಮೊಕದ್ದಮೆ ದಾಖಲಿಸಲಾಗಿತ್ತು. ಅಲ್ಲದೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರನ್ನು ಪ್ರಕರಣದಲ್ಲಿ ಆರೋಪಿಗಳನ್ನಾಗಿ ಹೆಸರಿಸಿತ್ತು.

# ಕಲ್ಯಾಣ ಕರ್ನಾಟಕ ಭಾಗದ ಮೊಟ್ಟ ಮೊದಲ ಚೆಸ್ ಥೀಮ್ ಪಾರ್ಕ್



ಮಲ್ಲಮ್ಮ ನುಡಿ ವಾರ್ತೆ
ಹುಮನಾಬಾದ:ಜು.11:ಗ್ರಾಮೀಣ ಪ್ರದೇಶದಲ್ಲಿ ಬುದ್ಧಿವಂತಿಕೆ ಮತ್ತು ಮನೋರಂಜನೆಗೆ ವೇದಿಕೆ ಒದಗಿಸುವ ನಿಟ್ಟಿನಲ್ಲಿ, ಮಾಣಿಕನಗರ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ ಕಲ್ಯಾಣ ಕರ್ನಾಟಕದಲ್ಲಿ ಮೊದಲ ಬಾರಿಗೆ ಚೆಸ್ ಥೀಮ್ ಪಾರ್ಕ್ ಸ್ಥಾಪನೆ ಮಾಡಲಾಗಿದೆ. ಇದು ಗ್ರಾಮೀಣ ಪ್ರದೇಶದಲ್ಲಿ ಚೆಸ್ ಆಟವನ್ನು ಉತ್ತೇಜಿಸಲು ಉದ್ದೇಶಿತವಾಗಿ ನಿರ್ಮಿಸಲಾದ ಒಂದು ವಿಶಿಷ್ಟ ಹೊರಾಂಗಣ ಪಾರ್ಕ್.ಈ ಪಾರ್ಕ್ನಲ್ಲಿ ಚೆಸ್ ಆಸಕ್ತರಿಗಾಗಿ ಸುಸಜ್ಜಿತ ಮೇಜು ವ್ಯವಸ್ಥೆ, ಚೆಸ್ ಬೋರ್ಡ್ ವಿನ್ಯಾಸದ ನೆಲಹಾಸು ಹೊಂದಿರುವ ಕೇಂದ್ರ ಮಂಟಪ (ಉಚಿ–ದಜಭಿಂ),ಹಸಿರು ಹುಲ್ಲುಹಾಸಿನ ಲಾನ್ಗಳು, ಹಾಗೂ ಭಾರತೀಯ ಹಾಗೂ ಅಂತರಾಷ್ಟ್ರೀಯ ಚೆಸ್ ಚಾಂಪಿಯನ್ಗಳನ್ನು ಗೌರವಿಸುವ ಮಾಹಿತಿ ಫಲಕಗಳು ಇವೆ. ಭಾರತದ ಚೆಸ್ ಪಟು ಗ್ರಾಂಡ್ ಮಾಸ್ಟರ್ ವಿಶ್ವನಾಥನ್ ಆನಂದ್ ಅವರಿಗೆ ಗೌರವ ನೀಡುವ ಉದ್ದೇಶದಿಂದ ಈ ಪಾರ್ಕ್ ಗೆ ವಿಶ್ವನಾಥನ್ ಆನಂದ್ ಚೆಸ್ ಪಾರ್ಕ್ ಎಂದು ಗ್ರಾಮ ಪಂಚಾಯತಿ ವತಿಯಿಂದ ನಾಮಕರಣ ಮಾಡಲಾಗಿದೆ.

ಈ ಯೋಜನೆಯ ಹಿಂದೆ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀಮತಿ ಪಂಚಶೀಲ ಸಿದ್ದಪ್ಪ, ಉಪಾಧ್ಯಕ್ಷರಾದ ಶ್ರೀ ಮಾಣಿಕ ನಿಮ್ಮನೆ ಮತ್ತು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಶ್ರೀ ರಾಜಶೇಖರ ಬುಳ್ಳ ಅವರ ಬದ್ಧತೆ, ಮತ್ತು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀಮತಿ ದೀಪಿಕಾ ಬಿ ನಾಯ್ಕರ್ ಅವರ ಮಾರ್ಗದರ್ಶನ ಪ್ರಮುಖ ಪಾತ್ರವಹಿಸಿದ್ದಾರೆ.

ಈ ಪ್ರಯತ್ನದ ಭಾಗವಾಗಿ ಗ್ರಾಮೀಣ ಗ್ರಂಥಾಲಯಗಳಲ್ಲಿ ಚೆಸ್ ಸ್ಪರ್ಧೆಗಳು ನಡೆದಿದ್ದು, ತಾಲೂಕು ಮತ್ತು ಜಿಲ್ಲಾ ಮಟ್ಟದ ಪಂದ್ಯಗಳು ಕೂಡ ಹಮ್ಮಿಕೊಳ್ಳಲಾಗಿದೆ. ಹಲವಾರು ಗ್ರಾಮ ಪಂಚಾಯತ್ಗಳು ಈ ಕಾರ್ಯಕ್ರಮದಲ್ಲಿ ಚಟುವಟಿಕೆಯಿಂದ ಪಾಲ್ಗೊಂಡರೂ, ಮಾಣಿಕನಗರ ಗ್ರಾಮ ಪಂಚಾಯತ್ ಒಂದು ಹೆಜ್ಜೆ ಮುಂದೆ ಹೋಗಿ ಚೆಸ್ ಆಟಕ್ಕಾಗಿಯೇ ವಿಶಿಷ್ಟ ಪಾರ್ಕ್ ನಿರ್ಮಿಸಿ ಪ್ರೇರಣಾದಾಯಕ ಮಾದರಿಯಾಗಿದೆ.ಈ ಯೋಜನೆಯ ಬಗ್ಗೆ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀಮತಿ ದೀಪಿಕಾ ಬಿ ನಾಯ್ಕರ್ ಅವರು ಮಾತನಾಡಿ, "ಚೆಸ್ ಎಂಬುದು ಮೆದುಳಿಗೆ ತೀಕ್ಷ್ಣತೆ, ಶಿಸ್ತು, ತಾಳ್ಮೆ ಮತ್ತು ಯೋಚನೆ ಶಕ್ತಿ ಕಲಿಸುವ ಆಟ. ನಮ್ಮ ಗ್ರಾಮೀಣ ಪ್ರದೇಶದ ಮಕ್ಕಳು ಮತ್ತು ಯುವಕರು ಈ ಪಾರ್ಕ್ನ ಸದುಪಯೋಗ ಪಡೆದು–ಕೊಂಡು ಚೆಸ್ ಆಟದಲ್ಲಿ ನಿಪುಣರಾಗಿ ಪ್ರಶಸ್ತಿಗಳನ್ನು ಗೆಲ್ಲಬೇಕು ಎಂಬ ಆಶಯವಿದೆ. ಗ್ರಾಮೀಣ ಪ್ರದೇಶಗಳಲ್ಲಿ ಚೆಸ್ ಆಟಕ್ಕೆ ಉತ್ತಮ ವೇದಿಕೆ ಕಲ್ಪಿಸುವ ನಿಟ್ಟಿನಲ್ಲಿ ಈ ಚೆಸ್ ಪಾರ್ಕ್ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿಯೇ ಮೊದಲ ಹೆಜ್ಜೆಯಾಗಿದೆ" ಎಂದರು.

# ಇಂದು ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಬೀದರ ಜಿಲ್ಲಾ ಪ್ರವಾಸ

ಬೀದರ. ಜು.11: ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಸೋಮಣ್ಣ ಬೇವಿನಮರದ ಅವರು ಜುಲೈ.12 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ. ಅಂದು ಬೆಳಿಗ್ಗೆ 10.30 ಗಂಟೆಗೆ ಔರಾದ ತಾಲ್ಲೂಕಿನ ನಾಗಮಾರಪಳ್ಳಿ ಗ್ರಾಮದಲ್ಲಿ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅನುದಾನದಿಂದ ಸರ್ಕಾರಿ ಪ್ರೌಢಶಾಲೆಯಲ್ಲಿ ಅಳವಡಿಸಲಾದ ಸ್ಮಾರ್ಟ್ ಬೋರ್ಡ ಹಾಗೂ ಬೀದರ ಜಿಲ್ಲೆಯ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದಿಂದ ನೀಡಲಾದ ಅನುದಾನಕ್ಕೆ ಸಂಬಂಧಿಸಿದಂತೆ ಕಾಮಗಾರಿಗಳ ಪರಿಶೀಲನೆ ಮಾಡಲಿದ್ದಾರೆ.ನಂತರ ಮಧ್ಯಾಹ್ನ 1.30ಕ್ಕೆ ಭಾಲ್ಕಿ ತಾಲ್ಲೂಕಿನ ಮದಕಟ್ಟಿ(ಬಾಜೋಳಗಾ ಕ್ರಾಸ್) ಗ್ರಾಮದ ಬುದ್ಧಪ್ರಿಯಾ ಪ್ರೌಢ ಶಾಲಾ ಆವರಣದಲ್ಲಿ ಗಡಿ ಪ್ರಾಧಿಕಾರದ ಅನುದಾನದಲ್ಲಿ ನಿರ್ಮಾಣವಾಗಿರುವ ಶಾಲಾ ಕೊಠಡಿಗಳ ಉದ್ಘಾಟನಾ ಸಮಾರದಲ್ಲಿ ಭಾಗವಹಿಸಲಿದ್ದಾರೆ ಎಂದು ಅಧ್ಯಕ್ಷರ ಆಪ್ತ ಸಹಾಯಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರ ಯೋಜನೆಗಳ ಬಗ್ಗೆ ಅರಿವು ಮೂಡಿಸುವಲ್ಲಿ ವಸ್ತು ಪ್ರದರ್ಶನ ಸಹಕಾರಿ: ಸಿಇಓ ಡಾ.ಗಿರೀಶ್ ಬದೋಲೆ

ಮಲ್ಲಮ್ಮ ನುಡಿ ವಾರ್ತೆ
ಬೀದರ. ಜು.11: ಸರ್ಕಾರ ಯೋಜನೆಗಳ ಬಗ್ಗೆ ಅರಿವು ಮೂಡಿಸುವಲ್ಲಿ ವಸ್ತುಪ್ರದರ್ಶನ ಸಹಕಾರಿಯಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ಗಿರೀಶ್ ಬದೋಲೆ ಅವರು ತಿಳಿಸಿದರು.

ಅವರು ಶುಕ್ರವಾರ ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಏರ್ಪಡಿಸಿರುವ 3 ದಿನಗಳ ರಾಜ್ಯ ಸರ್ಕಾರದ ಎರಡು ವರ್ಷದ ಸಾಧನೆ ಬಿಂಬಿಸುವ ವಸ್ತುಪ್ರದರ್ಶನ ಕಾರ್ಯಕ್ರಮಕ್ಕೆ ಭೇಟಿ ನೀಡಿ ಮಾತನಾಡಿದರು.

ಸರ್ಕಾರ ಯೋಜನೆಗಳ ಬಗ್ಗೆ ಜನರಿಗೆ ತಿಳಿಸಲು ಈ ವಸ್ತು ಪ್ರದರ್ಶನ ಬಹಳ ಮುಖ್ಯವಾಗಿದೆ. ಕೇಂದ್ರ ಬಸ್ ನಿಲ್ದಾಣದ ಮೂಲಕ ಪ್ರಯಾಣ ಮಾಡುವ ಸಾರ್ವಜನಿಕರು ಈ ವಸ್ತು ಪ್ರದರ್ಶನ ಮಳಿಗೆಗೆ ಭೇಟಿ ನೀಡುವುದರಿಂದ ಸರ್ಕಾರದ ಯೋಜನೆಗಳ ಬಗ್ಗೆ ತಿಳಿದುಕೊಳ್ಳಲು ಸಾರ್ವಜನಿಕರಿಗೆ ಅನುಕೂಲವಾಗಲಿದೆ. ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಮಳಿಗೆಗೆ ಭೇಟಿ ನೀಡುವಂತೆ ಮಾಡಲು ನಿಲ್ದಾಣದಲ್ಲಿ ಧ್ವನಿ




ವರ್ಧಕ ಅಳವಡಿಸಬೇಕೆಂದು ವಿಭಾಗೀಯ ಸಾರಿಗೆ ಅಧಿಕಾರಿಗಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ವಿಭಾಗೀಯ ಸಂಚಾರಿ ಅಧಿಕಾರಿ ಇಂದ್ರಸೇನ ಎಂ. ಬಿರಾದಾರ, ಕರ್ನಾಟಕ ರಾಜ್ಯ ಸಾರಿಗೆ ನೌಕರ ಸಂಘ ಬೀದರ ವಿಭಾಗದ ಜಿಲ್ಲಾಧ್ಯಕ್ಷ ಕಲ್ಲಪ್ಪ ವಣಗೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಿಜಯಕೃಷ್ಣ ಸೊಲಾಪುರ, ಜಗನ್ನಾಥ ಜಮಾದಾರ, ಈಶ್ವರ ಬಡಿಗೇರ, ಅವಿನಾಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪಂಚಾಯತ ಪ್ರಗತಿ ಸೂಚ್ಯಾಂಕ 2.0 ಕಾರ್ಯಗಾರ

ಮಲ್ಲಮ್ಮ ನುಡಿ ವಾರ್ತೆ
ಬೀದರ. ಜು.11: ಪಂಚಾಯತ ಅಭಿವೃದ್ಧಿ ಸೂಚ್ಯಾಂಕ (PDI) ಅನ್ನು ಪಂಚಾಯತ್ ಪ್ರಗತಿ ಸೂಚ್ಯಂಕ Panchayat Advancement Index (PAI) ಎಂದು ಮರುನಾಮಕರಣಗೊಳಿಸಲಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಕಿಶೋರಕುಮಾರ ದುಬೆ ತಿಳಿಸಿದರು.



ಅವರು ಶುಕ್ರವಾರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಭಾರತ ಸರಕಾರ ಪಂಚಾಯತರಾಜ್ ನಿರ್ದೇಶನದಂತೆ PAI (ಪಂಚಾಯತ ಪ್ರಗತಿ ಸೂಚ್ಯಾಂಕ 2.0) ಕಾರ್ಯಾಲಯ ಜಿಲ್ಲಾ ಹಂತದಲ್ಲಿ ತಾಲ್ಲೂಕಾ ಮಟ್ಟದ ಅಧಿಕಾರಿಗಳಿಗೆ ತರಬೇತಿದಾರರ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಪಂಚಾಯ???ಗಳ ಸಮಗ್ರ ಅಭಿವೃದ್ಧಿ, ಕಾರ್ಯಕ್ಷಮತೆ ಮತ್ತು ಪ್ರಗತಿಯನ್ನು ಕಂಖ ನಿರ್ಣಯಿಸುತ್ತದೆ.ಸ್ಥಳೀಯ ಖಆಉ ಗಳನ್ನು (Localised SDG themes) ಸಾಧಿಸುವಲ್ಲಿ ಗ್ರಾಮ ಪಂಚಾಯಿತಿಗಳು ಮಾಡಿದ ಪ್ರಗತಿಯನ್ನು ಸೂಚಂಕಗಳ ಆಧಾರದ ಮೇಲೆ (Based on indicators) ಅಳೆಯುವುದು ಕಂಖ ನ ಮುಖ್ಯ ಉದ್ದೇಶವಾಗಿದೆ. ತಾಲ್ಲೂಕಾ ಹಂತದಲ್ಲಿ ಅನುಷಾ??ನ ಇಲಾಖೆಯ ಮತ್ತು ತಾಲ್ಲೂಕು ಪಂಚಾಯತಿಯ ಕರ್ತವ್ಯಗಳು :ಗ್ರಾಮ ಪಂಚಾಯತಿಗಳಿಂದ ಕಂಖ ಪೊ?ರ್ಟಲ್ನಲ್ಲಿ ಸ್ವೀಕೃತಗೊಂದ ದತ್ತಾಂಶಗಳನ್ನು ಮೌಲ್ಯಮಾಪನ ಮಾಡುವುದು. ಒಂದು ವೇಳೆ ದತ್ತಾಂಶಗಳ ವ್ಯತ್ಯಾಸಗಳು ಕಂಡುಬಂದಲ್ಲಿ ಸರಿಪಡಿಸಿ ಸಲ್ಲಿಸುವಂತೆ ಗ್ರಾಮ ಪಂಚಾಯತ PAI ಲಾಗಿನ್ಗೆ ಹಿಂದಿರುಗಿಸುವುದು. ಗ್ರಾಮ ಪಂಚಾಯತಿಗಳು ಕಂಖ ಪೊ???ಟಲ್ ಮೂಲಕ ಸಲ್ಲಿಸಿರುವ ದತ್ತಾಂಶಗಳು ಸರಿ ಇದ್ದಲ್ಲಿ ಅಂತಹ ಮಾಹಿತಿಯನ್ನು ಕಾರ್ಯನಿರ್ವಾಹಕ ಅಧಿಕಾರಿಯವರ ಲಾಗಿನ್ಗೆ ಮುಂದಿನ ಕ್ರಮಕ್ಕಾಗಿ ಸಲ್ಲಿಸುವುದು.ಕಾರ್ಯನಿರ್ವಹಕ ಅಧಿಕಾರಿಯವರು ತಮ್ಮ ಲಾಗಿನ್ ನಿಂದ ಜಿಲ್ಲಾ ಹಂತದ ಲಾಗಿನ್ಗೆ ಮುಂದಿನ ಕ್ರಮಕ್ಕಾಗಿ ಸಲ್ಲಿಸುವುದರ ಬಗ್ಗೆ ಅವರು ತಿಳಿಸಿದರು.

ಗ್ರಾಮ ಪಂಚಾಯತನ ಪಿಡಿಓ ಮಾತನಾಡಿ, ಪ್ರಾಥಮಿಕ ಪ್ರೌಢ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಆಹಾರ, ಆರೋಗ್ಯ ಮತ್ತು ಸುತ್ತಮುತ್ತಲ್ಲಿನ ಪರಿಸರವನ್ನು ಸುಸ್ಥಿರತೆಯಲ್ಲಿ ಇಟ್ಟುಕೊಂಡಿರುವ ಬಗ್ಗೆ ಪರಿಶೀಲನೆ ಮಾಡಬೇಕು. ಮಹಿಳೆಯರಿಗೆ ಆರೋಗ್ಯಕ್ಕೆ ಸಂಬಂಧಿಸಿದಂತೆ ಯಾವುದೇ ಸಂದೇಹವಿಲ್ಲದೆ ಚರ್ಚಿಸಿ, ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಆರೋಗ್ಯಧಿಕಾರಿಡಾ.ಶಂಕ್ರೆಪ್ಪಾ ಬೊಮ್ಮ ಮಾತನಾಡಿ, ಗ್ರಾಮೀಣ ಪ್ರದೇಶದಲ್ಲಿ, ಗೃಹಿಣಿಯರಿಗೆ, ಮಕ್ಕಳಿಗೆ, ವೃದ್ಧರಿಗೆ ಆರೋಗ್ಯವಾಗಿರಲು ಸುರಕ್ಷಿತ ನೀರು ಸೇವನೆ, ಸೊಳ್ಳೆ ಕಡಿತಗಳಿಂದ ರಕ್ಷಣೆ ಮಾಡಿಕೊಂಡು ಕಾಲರಾ, ಮಲೇರಿಯಾ, ಮುಂತಾದ ಸಾಂಕ್ರಮಿಕ ರೋಗಗಳಿಂದ ರಕ್ಷಣೆ ಮಾಡಿಕೊಳ್ಳಬೇಕು. ಯಾವುದೇ ರೀತಿಯ ಅನಾರೋಗ್ಯ ಕಂಡು ಬಂದಲ್ಲಿ ತಕ್ಷಣೆ ವೈದ್ಯರನ್ನು ಭೇಟಿ ಮಾಡಿ ಚಿಕಿತ್ಸೆ ಪಡೆದುಕೊಳ್ಳಲು ತಿಳಿಸಿದರು.

ಈ ಕಾರ್ಯಗಾರದಲ್ಲಿ ವಿವಿಧ ಸಂಪನ್ಮೂಲ ವ್ಯಕ್ತಿಗಳಾದ ಶಿಕ್ಷಣಾಧಿಕಾರಿ ಗೋಪಾಲರಾವ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಓಖಐಒ ಶಾಖೆಯ ಆಕಒ ರವರಾದ ನಾಗೇಂದ್ರ ಹಾಗೂ ತರಬೇತಿಯಲ್ಲಿ ಜಿಲ್ಲೆಯ ಎಲ್ಲಾ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕಿನ ಎಲ್ಲ ಸಹಾಯಕ ನಿರ್ದೇಶಕರು ಪಂ.ರಾ.,ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಗಳ ಪಿಡಿಓ ಮತ್ತು ಡಿ.ಇ.ಓ. ರವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ರತಿಕಾಂತ ನೇಳಗೆ ಕಾರ್ಯಕ್ರಮವನ್ನು ಸ್ವಾಗತಿಸಿ, ನಿರೂಪಿಸಿದರು.

# ವೈದ್ಯಕೀಯ ಆಕಾಂಕ್ಷಿಗಳೇ ಹತಾಶೆಗೊಳ್ಳಬೇಡಿ ವಿಸ್ಡಮ್ ನಿಮ್ಮ ಕನಸನ್ನು ನನಸಾಗಿಸುತ್ತದೆ




ಮಲ್ಲಮ್ಮ ನುಡಿ ವಾರ್ತೆ
ಬೀದರ. ಜು.11 : ವಿಸ್ಡಮ್ ಕಾಲೇಜು ಮತು ನೀಟ್ ಅಕಾಡೆಮಿ, ಬೀದರನ ಸಿ.ಇ.ಒ ಪ್ರೊಫೆಸರ್ ಶ್ರೀ ಮದಾರ ಅವರ ಪ್ರಕಾರ 2026ರ ನೀಟ್ ರಿಪೀಟರ್ ಬ್ಯಾಚನ್ನು ಇತ್ತೀಚಿಗೆ ಉದ್ಘಾಟಿಸಲಾಯಿತು. ಐ.ಎಂ.ಎ ಮಾಜಿ ಅಧ್ಯಕ್ಷ ಮತ್ತು ಎಂ.ಆರ್.ಎಫ್.ನ ಹಾಲಿ ಅಧ್ಯಕ್ಷ ಡಾ. ಮಕ್ಸೂದ ಚಂದಾ ಅವರು ಈ ಅದ್ದೂರಿ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಉದ್ಘಾಟಿಸಿದರು. ಈ ಉದ್ಘಾಟನಾ ಕಾರ್ಯಕ್ರಮದ ವಿಶೇಷ ಅತಿಥಿಗಳಾಗಿದ್ದ ಶ್ರೀ ರಾಜೇಂದ್ರ ಮಣಗೆರೆ ಅರುಣೋದಯ ಪ್ರೌಢಶಾಲೆ ಮತ್ತು ಖಾಸಗಿ ಶಾಲೆಗಳ ಸಂಘ, ಬೀದರನ ಜಿಲ್ಲಾ ಅಧ್ಯಕ್ಷ. ಶ್ರೀ ಮುಹಮ್ಮದ ಗೌಸ ಸಿ.ಎಮ್.ಸಿ ಬೀದರನ ಅಧ್ಯಕ್ಷರು ಮತ್ತು ಡಾ. ರಫೀಕ್ ಅಹ್ಮದ ಭಾಗವಹಿಸಿದ್ದರು.

ವಿಸ್ಡಮ್ ಕಳೆದ ಎರಡು ದಶಕಗಳಿಂದ ಯಶಸ್ಸಿನ ಗು–ರಿಯತ್ತ ಸಾಗುತ್ತಿದೆ. ವಿಸ್ಡಮ್ ಆಡಳಿತ ಮಂಡಳಿ ಬೀದರ್‌ಗೆ ಮಾತ್ರವಲ್ಲದೆ ದೇಶಕ್ಕೂ ಒಂದು ಉಡುಗೊರೆಯಾಗಿದೆ ಎಂದು ಶ್ರೀ ರಾಜೇಂದ್ರ ಮಣಗೆರೆ ಹೇಳಿದರು.ಇವರು ವಿದ್ಯಾರ್ಥಿಗಳಿಗೆ ಒಂದು ಕೋಟಿಗೂ ಹೆಚ್ಚು ಮೌಲ್ಯದ ವಿದ್ಯಾರ್ಥಿವೇತನವನ್ನು ನೀಡುತ್ತಿದ್ದಾರೆ ಎಂದರು.

ಡಾ. ರಫೀಕ ಅಹ್ಮದ್ (ಪಿ.ಎಚ್.ಡಿ) ವಿದ್ಯಾರ್ಥಿಗಳಿಗೆ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಉದಾಹರಣೆಯನ್ನು ನೀಡಿದರು ಮತ್ತು ಅವರು ಮೊದಲ ಬಾರಿಗೆ ಕ್ಷಿಪಣಿಯನ್ನು ತಯಾರಿಸಿದಾಗ ಅವರು ಯಶಸ್ಸನ್ನು ಪಡೆಯಲಿಲ್ಲ, ಅವರು ಆತ್ಮವಿಶ್ವಾಸವನ್ನು ಕಳೆದುಕೊಳ್ಳಲಿಲ್ಲ. ಅವರು ಎರಡನೇ ಬಾರಿಗೆ ಪ್ರಯತ್ನ ಮಾಡಿ ಯಶಸ್ವಿಯಾದರು ಎಂದು ಹೇಳಿದರು. ಇದು ಅವರನ್ನು ಕ್ಷಪಣಿಮನುಷ್ಯನನ್ನಾಗಿ ಮಾಡಿತು. ಅದೇ ರೀತಿ ವೈದ್ಯಕೀಯ ಅಕಾಂಕ್ಷಿಗಳಿಗೆ ನಾನು ಹೇಳುವುದೇನೆಂದರೆ ಅವರು ನಿರಾಶೆಗೊಳ್ಳಬಾರದು ಅವರು ಮತ್ತೋಮ್ಮೆ ವಿಸ್ಡಮನಲ್ಲಿ ನೀಟ್ ರಿಪೀಟ ಮಾಡಿ ಖಂಡಿತವಾಗಿಯೂ ಯಶಸ್ಸು ಅವರ ಪಾದಗಳಿಗೆ ಮುತ್ತಿಡುತ್ತದೆ ಎಂದು ನುಡಿದರು.

ಈ ಸಂದರ್ಭದಲ್ಲಿ ನೀಟ್‌ನಲ್ಲಿ 545 ಅಂಕಗಳನ್ನು ಗಳಿಸಿದ ಮತ್ತು ರಾಜ್ಯ ವೈದ್ಯಕೀಯ ಶ್ರೇಣಿ 786 ಹೊಂದಿರುವ ಮುಹಮ್ಮದ ಇಸ್ಮಾಯಿಲ್ ತಂದೆ ಮುಹಮ್ಮದ ಅಖೀಲ್ ಬಗ್ದಲ್, ಇವರು ವಿಸ್ಡಮ್ ನೀಟ್ ತರಬೇತಿಗಾಗಿ ಸಂಘಟಿ–ತ ಯೋಜನೆ, ಸಾಪ್ತಾಹಿಕ ಪರೀಕ್ಷೆಗಳು, ನುರಿತ ತಜ್ಞ ಮತ್ತು ಅನುಭವಿ ನೀಟ್ ಉಪನ್ಯಾಸಕರ ತಂಡವನ್ನು ವಿಸ್ಡಮ್ ಸಂಸ್ಥೆ ಹೊಂದಿದೆ ಎಂದು ಹೇಳಿದರು. ಅಧ್ಯಕ್ಷ ಮುಹಮ್ಮದ ಆಸಿಫುದ್ದೀನ್ ಮತು ಎಲ್ಲಾ ಸಿಬ್ಬಂದಿಗೆ ನಾನು ಕೃತಜ್ಞನಾಗಿದ್ದೇನೆ ಎಂದರು.

ಹುಮಾ ನಶ್ರಾ ತಂದೆ ಮಿರ್ಜಾ ಇಶ್ರತ್ ಉಲ್ಲಾ ಬೇಗ, ಮುನಝ್ಝಾ ಶಾಹ್ಜರೀನ ತಂದೆ ಚಾಂದ ಶರೀಫ್ ಅವರು ವೈದ್ಯರಾಗುವುದು ನಮ್ಮ ಕನಸು ಅದಕ್ಕಾಗಿ ನಾವು ವಿಸ್ಡಮ್‌ನ ನೀಟ್ ರಿಪೀಟರ್ ಬ್ಯಾಚ್‌ನಲ್ಲಿ ಪ್ರವೇಶ ಪಡೆದಿದ್ದೇವೆ ಮತ್ತು ಮುಂದಿನ ವರ್ಷ ನಮಗೆ ಉಚಿತ ಸರ್ಕಾರಿ ವೈದ್ಯಕೀಯ ಸೀಟು ಸಿಗುತ್ತದೆ ಎಂಬ ವಿಶ್ವಾಸವಿದೆ ಎಂದು ಹೇಳಿದರು.

ಅದೇ ರೀತಿ ಪ್ರಿಯಂಕಾ ತಂದೆ ಅಶೋಕ, ಮುಹಮ್ಮದ ನೋಮಾನ ಹುಸೇನ್ ತಂದೆ ಮುಹಮ್ಮದ ಮಾಜೀದ ಹುಸೇನ, ಮುಹಮ್ಮದ ತಲ್ಹಾ ಹುಸೇನ ತಂದೆ ತಜಮ್ಮುಲ ಹುಸೇನ್, ಸಾಯಿ ಹರ್ಶಿಕ ತಂದೆ ಶ್ರೀಧರ ಸೇರಿದಂತೆ ಅನೇಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಿಂದ ಪ್ರೇರಿತರಾಗಿ ಸ್ಥಳದಲ್ಲೆ ವಿಸ್ಡಮ್ 2026ರ ನೀಟ್ ರಿಪೀಟರ್ ಬ್ಯಾಚಗೆ ಪ್ರವೇಶ ಪಡೆದಿರುತ್ತಾರೆ.

ಈ ಸಂದರ್ಭದಲ್ಲಿ ಶ್ರೀ ಮುಹಮ್ಮದ ಆಸಿಫುದ್ದೀನ್ ಅಧ್ಯಕ್ಷರು ವಿಶೇಷ ಅತಿಥಿಗಳು ಮತ್ತು ನೀಟ್‌ನಲ್ಲಿ ವಿಶಿಷ್ಟ ಯಶಸ್ಸನ್ನು ಸಾಧಿಸಿದ ವಿದ್ಯಾರ್ಥಿಗಳನ್ನು ಅಭಿನಂದಿಸಿದರು ಮತು ಎಲ್ಲಾ ಅತಿಥಿಗಳು, ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿಗಳ ಪೋಷಕರನ್ನು ಸ್ವಾಗತಿಸಿದರು.

ಈ ವರ್ಷ ವಿಸ್ಡಮ್ 2026ರ ನೀಟ್ ರಿಪೀಟರ ಬ್ಯಾಚ್‌ಗಾಗಿ 200 ವಿದ್ಯಾರ್ಥಿಗಳಿಗೆ (100 ಹುಡುಗಿಯರು ಮತ್ತು 100 ಹುಡುಗರು) ಒಂದು ಕೋಟಿಗೂ ಹೆಚ್ಚು ವಿದ್ಯಾರ್ಥಿವೇತನವನ್ನು ನೀಡಲಿದೆ ಎಂದು ಅವರು ಹೇಳಿದರು. ಹೆಚ್ಚಿನ ವಿವರಗಳಿಗಾಗಿ, ವಿಸ್ಡಮ್‌ನ ವೆಬ್‌ಸೈಟ್ ತಿತಿತಿ. ಥಿಜಂಟುಟಣುಣಾಣುಬಂಟ. ಛಿಂಟ ನಲ್ಲಿ ಅಥವಾ ಕಿಖ ಕೋಡ್ ಸ್ಕಾ ??ನ್ ಮಾಡುವ ಮೂಲಕ ವಿವರಗಳನ್ನು ಪಡೆದುಕೊಳ್ಳಬಹುದು.

ಈ ಉದ್ಘಾಟನಾ ಸಮಾರಂಭದಲ್ಲಿ ಮುಹಮ್ಮದ ಸಲಾವುದ್ದೀನ್ ಫರ್ಹಾನ್ ಕಾರ್ಯದರ್ಶಿ ಅವರು ವಿಸ್ಡಮನಲ್ಲಿ ನಾವು ಮೊಬೈಲ್ ಮುಕ್ತವಾದ ಉತ್ತಮ ಆರೋಗ್ಯಕರ ಶೈಕ್ಷಣಿಕ ವಾತಾವರಣವನ್ನು ಸೃಷ್ಟಿಸಿದ್ದೇವೆ ಎಂದು ಹೇಳಿದರು.

ಅವರು ಅಂತಿಮವಾಗಿ ಎಲ್ಲಾ ಅತಿಥಿಗಳು, ವಿದ್ಯಾರ್ಥಿಗಳು, ವಿದ್ಯಾರ್ಥಗಳ ಪೋಷಕರು ಮತ್ತು ಎಲ್ಲಾ ಸಿಬ್ಬಂಧಿ ವರ್ಗದವರಿಗೆ ಧನ್ಯವಾದಗಳನ್ನು ಅರ್ಪಿಸಿದರು.

## ದೇಶದ ಗಮನವನ್ನು ತನ್ನತ್ತ ಸೆಳೆಯುತ್ತಿದೆ ನಾಡೋಜ ಪೂಜ್ಯ ಶ್ರೀ ಬಸವಲಿಂಗ ಪಟ್ಟದ್ದೇವರ ಕೈಗೊಂಡ ಕಾರ್ಯ ಗಳು : ಬಿ ಆರ್ ಕವಟೆ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ,ಹುಲಸೂರ ಜು 11– ಆರು ನೂರು ವರ್ಷಗಳ ಇತಿಹಾಸ ಹೊಂದಿರುವ ಭಾಲ್ಕಿಯ ಹಿರೇಮಠ ಸಂಸ್ಥಾನದ ನಾಡೋಜ ಪೂಜ್ಯಶ್ರೀ ಬಸವಲಿಂಗ ಪಟ್ಟದೇವರ ಸಾಮಾಜಿಕ,ಶೈಕ್ಷಣಿಕ,ಧಾರ್ಮಿಕ ಸಾಹಿತ್ಯಿಕ ,ಸಾಂಸ್ಕೃತಿಕ , ಆರ್ಥಿಕವಾಗಿ ಕೈಗೊಂಡ ಅಭಿವೃದ್ಧಿ ಕಾರ್ಯಗಳು ಇಡೀ ದೇಶವೇ ತಮ್ಮತ್ತ ಸೇಳೆಯುತ್ತಿರುವುದು ಎಂದು ಇತಿಹಾಸ ಉಪನ್ಯಾಸಕ ಬಿ ಆರ್ ಕವಟೆ ತಿಳಿಸಿದರು .



ಹುಲಸೂರ ಪಟ್ಟಣದ ಸ್ವಾತಂತ್ರ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಭಾಲ್ಕಿಯ ಶಬನಮ್ ಎಜುಕೇಷನ್ ಮತ್ತು ಚಾರಿಟೇಬಲ್ ಟ್ರಸ್ಟ್ ವತಿಯಿಂದ 'ನಾಡೋಜ ಪೂಜ್ಯಶ್ರೀ ಬಸವಲಿಂಗ ಪಟ್ಟದೇವರ ಜೀವನ ಮತ್ತು ಸಾಧನೆ 'ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಅವರು ರಾಜ್ಯದ ರಾಜಧಾನಿಯಿಂದ ಬಹುದೂರ ಇರುವ ಬೀದರ್ ಜಿಲ್ಲೆಯ ಭಾಲ್ಕಿ ಹಿರೇಮಠದ ಪೂಜ್ಯರು ಇಂದು ಸಾಮಾಜಿಕವಾಗಿ ಹಿಂದುಳಿದ ಡೊಂಬರ ಆಟ ದವರ ಮಕ್ಕಳು ತಮಗೆ ಅಗತ್ಯವಿರುವ ಶಿಕ್ಷಣ ತೊರೆದು ಪಾಲಕರ ಜೋತೆ ಡೊಂಬರ ಆಟ ಆಡುವ ಮೂಲಕ ತಮ್ಮ ಹೊಟ್ಟೆಪಾಡಿಗಾಗಿ ತಮ್ಮ ಭವಿಷ್ಯ ಹಾಳು ಮಾಡಿಕೊಳ್ಳುವುದನ್ನು ಕಂಡ ಪೂಜ್ಯರು ಈ ಮಕ್ಕಳನ್ನು ಶಿಕ್ಷಣ ಪಡೆಯುವಂತೆ ಮಾಡುವ ಮೂಲಕ ಅವರನ್ನು ಸಮಾಜಮುಖಿಯಾಗಿ ಮಾಡಿದ್ದು, , ವಿಧವೆಯರನ್ನು ಉಡಿ ತುಂಬುವ ಕಾರ್ಯಕ್ರಮ, ತಂದೆ ತಾಯಿ ಗೆ ಬೇಡವಾದ, ಅನೈತಿಕ ಸಂಬಂಧದಿಂದ ಜನಿಸಿದ ಮಕ್ಕಳನ್ನು ಕಸದ ಗುಂಡಿಗೆ ಬಿಸಾಕಿದ ನವಜಾತ ಶಿಶುಗಳನ್ನು ಸಾಕಿ ಬೆಳೆಸುವ ಮೂಲಕ ಅವರಲ್ಲಿ ಕಲಾ ಪ್ರತಿಭೆ ವೃದ್ದಿಗೆ ನೆರವಾಗಿದ್ದು ಪೂಜ್ಯರು,

ಶೈಕ್ಷಣಿಕವಾಗಿ ಹೇಳುವುದಾದರೆ ಗಡಿ ಜಿಲ್ಲೆ ಬೀದರ್ ಅದರಲ್ಲೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವ ಮೂಲಕ ಶೈಕ್ಷಣಿಕವಾಗಿ ಜಿಲ್ಲೆ ಹಿಂದುಳಿದೆ ಎಂಬ ಹಣೆ ಪಟ್ಟಿ ಕಳಚಿ ಹಾಕಿದ್ದು ಇಂದು ಐಐಟಿ, ಎನ್ ಇ ಇ ಟಿ, ಎನ್ ಐ ಟಿ, ಇಂಜಿನಿಯರಿಂಗ್, ಡೆಂಟಲ್, ಫಾರ್ಮಸಿ,ಐ ಎಸ್ ಎಮ್ ಹೆಚ್, ವೆಟರ್ನರಿ,ಯು ಪಿ ಎಸ್ ಸಿ, ಕೆ ಪಿ ಎಸ್ ಸಿ , ಪೈಲೆಟ್, ಹುದ್ದೆ ಗೆ ಆಯ್ಕೆ ಆಗುವಂತೆ ಮಾಡಿರುವುದು ಪೂಜ್ಯರು ಆರಂಭಿಸಿದ ಶ್ರೀ ಚನ್ನಬಸವೇಶ್ವರ ಗುರುಕುಲ ಶಿಕ್ಷಣ ಸಂಸ್ಥೆ .

ಹಿರೇಮಠ ಸಂಸ್ಥಾನದ ಕಾರ್ಯವೈಖರಿ ಕಂಡು ರಾಷ್ಟಪತಿ ಶಂಕರ ದಯಾಳ್ ಶರ್ಮಾ, ಇಸ್ರೋ ಅಧ್ಯಕ್ಷ ಡಾ.ಕಿರಣ್ ಕುಮಾರ್ 2016 ರಲ್ಲಿ ಭೇಟಿ ನೀಡಿದ್ದರು ಎಂದು ತಿಳಿಸಿದರ

ಬಸವಾದಿ ಶರಣರ ವಿಚಾರಗಳನ್ನು ವಚನಗಳಲ್ಲಿ ಅಡಗಿರುವುದರಿಂದ ವಚನಗಳನ್ನು ತೆಲುಗು, ಮರಾಠಿ ಭಾಷೆಯಲ್ಲಿ ಅನುವಾದಿಸಿ ಬಸವ ತತ್ವವನ್ನು ತೆಲಂಗಾಣ, ಮಹಾರಾಷ್ಟ ದಲ್ಲಿ ಬೆಳೆಸುವಲ್ಲಿ ಇವರ ಧಾರ್ಮಿಕ ಕಾರ್ಯ ಸಾಕ್ಷಿ ಎಂದು ತಿಳಿಸಿದ ಅವರು ಲಿಂಗಾಯತ ಧರ್ಮ ದ ಕುರುಹು ಲಿಂಗದೀಕ್ಷೆ ಮನೆ ಮನೆ ಗೆ ನೀಡುವ ನಿಟ್ಟಿನಲ್ಲಿ ಪೂಜ್ಯರ ಬಹುಮುಖ್ಯ ಪಾತ್ರ ಇದೆ.

ಪ್ರವಚನವು ಸಮಾಜದ ಮನಸ್ಸನ್ನು ರೂಪಿಸುವ ಮಾಧ್ಯಮವಾಗಿದೆ .ಅಪ್ಪಾಜಿಯವರು ಈ ಮೂಲಕ

ತಮ್ಮ ಭಾರತೀಯ ಅದರಲ್ಲೂ ವಿಶೇಷವಾಗಿ ಶರಣರ ಸಂಸ್ಕೃತಿ ವಿಭೂತಿ,ರುದ್ರಾಕ್ಷಿ, ಇಷ್ಟ ಲಿಂಗ ಪೂಜೆ, ಉಡುಗೆ ತೊಡುಗೆ ಆಹಾರ ಪದ್ಧತಿ ಈ ಹಿರೇಮಠ ಸಂಸ್ಥಾನದ ವತಿಯಿಂದ ಜನರಿಗೆ ಲಭಿಸುವಂತೆ ಮಾಡಿದ್ದಾರೆ.

ಕಲೆ,ಸಾಹಿತ್ಯ ಕ್ರೀಡೆ ಹೀಗೆ ವಿವಿಧ ಕ್ಷೇತ್ರಗಳಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ತರಬೇತಿ ಕೇಂದ್ರ ಪೂಜ್ಯರು ಆರಂಭಿಸಿದ ಗುರುಕುಲ ಎಂದು ತಿಳಿಸಿದ ಅವರು ಈಗಾಗಲೇ ಆರ್ಥಿಕ ಸ್ಥಿತಿ ಚಿಂತಾಜನಕ ಸ್ಥಿತಿಯಲ್ಲಿ ಇರುವ ಜನರಿಗೆ ನೇರವಾಗಲು ಡಾ.ಚನ್ನಬಸವ ಪಟ್ಟದೇವರ ಸಹಕಾರ ಬ್ಯಾಂಕ್ ಅಲ್ಪ ಬಡ್ಡಿ ಗೆ ಸಾಲ ನೀಡುವ ಮೂಲಕ ಆರ್ಥಿಕ ನೆರವಾಗಿದೆ ಎಂದು ತಿಳಿಸಿದರು.

ಪ್ರಾಸ್ತಾವಿಕ ಶಬನಮ್ ಎಜುಕೇಷನ್ ಮತ್ತು ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷೆ ಡಾ.ಮಕ್ತುಂಬಿ ಎಂ ಮಾತನಾಡಿದ ಅವರು ಕಲ್ಯಾಣ ಕರ್ನಾಟಕ ಭಾಗದಲ್ಲಿ ನಾಡೋಜ ಪೂಜ್ಯಶ್ರೀ ಬಸವಲಿಂಗ ಪಟ್ಟದ್ದೇವರ ಕೈಗೊಂಡ ಅಭಿವೃದ್ಧಿ ಕಾರ್ಯಗಳು ಶ್ಲಾಘನೀಯ, ನಮ್ಮ ಶಬನಮ್ ಎಜುಕೇಷನ್ ಮತ್ತು ಚಾರಿಟೇಬಲ್ ಟ್ರಸ್ಟ್ ಹಲವು ಜನರಿಗೆ ಹೊಲಿಗೆ ತರಬೇತಿ, ಶಿಕ್ಷಣ, ಸೌಂದರ್ಯ ವರ್ಧಕ ತರಬೇತಿ ನೀಡುವ ಮೂಲಕ ಅವರನ್ನು ಸ್ವಂತ ಉದ್ಯೋಗ ಕೈಗೊಳ್ಳಲು ನೇರವಾಗುತ್ತಿದೆ ಎಂದು ತಿಳಿಸಿದರು. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾಗೂ ಕಸಾಪ ತಾಲೂಕು ಅಧ್ಯಕ್ಷ ನಾಗರಾಜ ಹಾವಣ್ಣ ಉದ್ಘಾಟಿಸಿ ಮಾತನಾಡಿದ ಅವರು ಕಲ್ಯಾಣ ಕರ್ನಾಟಕ ಅಭಿವೃದ್ಧಿಯ ಗುರಿ ಹೊಂದಿರುವ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಈ ಭಾಗದಲ್ಲಿ ಈ ಹಿಂದೆ ಬಸವಣ್ಣನವರ ಕೈಗೊಂಡ ಕಾರ್ಯಗಳನೇ ಮಾದರಿಯಾಗಿಟ್ಟುಕೊಂಡು ಮುಂದುವರಿಸಿದ್ದಾರೆ ಎಂದು ತಿಳಿಸಿದರು.

ಸ್ವಾತಂತ್ರ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯರು ಮಲ್ಲಮ್ಮ ಆರ್ ಪಾಟೀಲ್ ಅಧ್ಯಕ್ಷತೆ ವಹಿಸಿ ಮಾತನಾಡಿ ನಾಡೋಜ ಬಸವಲಿಂಗ ಪಟ್ಟದೇವರು ಪ್ರಗತಿಪರರು, ಶೋಷಿತ ವರ್ಗಗಳ ಅಭಿವೃದ್ಧಿ ನೆರವಾಗುವ ನಿಟ್ಟಿನಲ್ಲಿ ಪ್ರಯತ್ನ ಮಾಡಿದ್ದಾರೆ, ಅವರು ಸ್ಥಾಪಿಸಿದ ಗುರುಕುಲದಲ್ಲಿ ಶಿಕ್ಷಣ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳು ರಾಜ್ಯಾದ್ಯಂತ,ದೇಶ,ವಿದೇಶಗಳಲ್ಲಿ ಉನ್ನತ ಹುದ್ದೆ ಹೊಂದಿದ್ದಾರೆ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಧರ್ಮ ಸಂಸ್ಕಾರಗಳು ವೈಚಾರಿಕ ಚಿಂತನೆಗೆ ಹೆಸರಾದ ಹಿರೇಮಠ ಸಂಸ್ಥಾನ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಬನಮ್ ಎಜುಕೇಷನ್ ಮತ್ತು ಚಾರಿಟೇಬಲ್ ಟ್ರಸ್ಟ್ ಕಾರ್ಯದರ್ಶಿ ಶಬನಮ್, ಉಪನ್ಯಾಸಕ ಅಶೋಕ, ಪೂಜಾ ಮೊರೆ, ವಿದ್ಯಾರ್ಥಿಗಳು ಸೇರಿದಂತೆ ಸಿಬ್ಬಂದಿ ಉಪಸ್ಥಿತರಿದ್ದರು.



ಬಸವಕಲ್ಯಾಣ :– ತಾಲೂಕಿನ ರಾಜೇಶ್ವರ್ ಗ್ರಾಮದ ಹುಬಳಿ ನಾಡ ಕಛೇರಿಯಲ್ಲಿ ಶರಣ ಶ್ರೀ ಹಡಪದ ಅಪ್ಪಣ್ಣನವರ ಜಯಂತಿಯ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಉಪ ತಹಸೀಲ್ದಾರ ಸುನೀಲ ಕುಮಾರ್. ಗಣಕಯಂತ್ರ ನಿರ್ವಾಹಕ ರಾಜು ರೆಡ್ಡಿ. ವಿಷಯ ನಿರ್ವಾಹಕರು ಅರ್ಚನಾ. ಗ್ರಾಮ ಸಹಾಯಕರ. ಸಿಬ್ಬಂದಿ ವರ್ಗದವರು ಹಾಗೂ ಹುಮನಾಬಾದ ತಾಲೂಕಿನ ಬ್ರಾಹ್ಮಣ ಸಮಾಜದ ಉಪಾಧ್ಯಕ್ಷರಾದ ಮಿಲಿಂದ್ ಮುರಳಿಧರ್ ರಾವ್ ಕುಲಕರ್ಣಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)



ಹುಮನಾಬಾದ್ ಪಟ್ಟಣದಲ್ಲಿ ಶುಕ್ರವಾರ ಸಾಮಾಜಿಕ ಕಾರ್ಯಕರ್ತ ಸತೀಷ ಸಾಗ್ಯೆಯ ಅವರ ಜನ್ಮನದಿನ ಕಾರ್ಯಕ್ರಮ ಅದ್ದೂರಿಯಾಗಿ ಆಚರಿಸಲಾಯಿತು. ಶಿವಶರಣ ಚಾಂಗಲೇರಿ ಮಾತನಾಡಿ, ಜೀವನ ಕಾಂತಿಯಿಂದ ಹೊಳೆಯಲಿ, ಸಂತೋಷ ಮತ್ತು ಯಶಸ್ಸು ನಿಮ್ಮ ಪಾಲಿಗೆ ಸದಾ ಹರಿಯಲಿ. ನೀವು ನಂಬಿದಂತ ದೇವರು ನಿಮಗೆ ಸದಾ ಆಯಸ್ಸು ಆರೋಗ್ಯ ಕೊಟ್ಟು ಕಾಪಾಡಲಿ, ನಿಮ್ಮ ಎಲ್ಲಾ ಹೆಜ್ಜೆಯಲ್ಲೂ ಯಶಸ್ಸು ನಿಮ್ಮದಾಗಲಿ ಎಂದು ಹಾರೈಸುತ್ತಾ ಹುಟ್ಟುಹಬ್ಬದ ಶುಭಾಶಯ ಕೋರಿದರು. ಈ ವೇಳೆ ಉಮೇಶ ರಾಯಣ್ಣ ಶಂಭುಶಂಕರ, ಶಶಿ ಹುಮನಾಬಾದ, ಪ್ರಭು, ಮಧುಸೂದನ, ರೀಶಿಕೇಶ, ಸಚೀನ, ಮಲ್ಲುರೆಡ್ಡಿ ಹುಮನಾಬಾದ ಸೇರಿ ಅನೇಕರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಜಿಲ್ಲೆಯಲ್ಲಿ ಕಾರ್ಯನಿವಹಿಸಿದ್ದು ಉತ್ತಮ ಅನುಭವವಾಗಿದೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 11– ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಯಶಸ್ವಿಯಾಗಿ ಕಾರ್ಯನಿರ್ವಹಿಸಿ ಈಗ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರಾಗಿ ವರ್ಗಾವಣೆಯಾದ ರಾಹುಲ್ ತುಕಾರಾಂ ಪಾಂಡ್ವೆ ಅವರಿಗೆ ಬೀಳ್ಕೊಡುಗೆ ಹಾಗೂ ರಾಯಚೂರು ಜಿ.ಪಂಗೆ ನೂತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾಗಿ ನಿಯುಕ್ತಿಗೊಂಡ ಈಶ್ವರ ಕುಮಾರ ಕಾಂದೂ ಅವರಿಗೆ ಸ್ವಾಗತ ಕಾರ್ಯಕ್ರಮವನ್ನು ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಯಿತು.

ಈ ವೇಳೆ ನಿರ್ಗಮಿತ ಸಿಇಓ ರಾಹುಲ್ ತುಕಾರಾಂ ಪಾಂಡ್ವೆ ಅವರು ಮಾತನಾಡಿ, ನಾನು ಸುಮಾರು 23 ತಿಂಗಳುಗಳ ಕಾಲ ಈ ಜಿಲ್ಲೆಯಲ್ಲಿ ಸೇವೆ ಸಲ್ಲಿಸಿದ ನನಗೆ ಉತ್ತಮ ಅನುಭವ ಮತ್ತು ಜಿಲ್ಲೆಯ ವಿವಿಧ ಇಲಾಖೆಯ ಅಧಿಕಾರಿಗಳು ಒಳ್ಳೆಯ ಕೆಲಸ ಮಾಡುತ್ತಾರೆ. ಆದರೆ ಅದರ ಸಂಪೂರ್ಣ ಮಾಹಿತಿ ನೀಡುವಲ್ಲಿ ವಿಫಲರಾಗುತ್ತಿದ್ದಾರೆ. ಅದು ಸ್ವಲ್ಪ ಅಬಿವೃದ್ದಿ ಪಡಿಸಿಕೊಳ್ಳಬೇಕು ಎಂದರು. ಎಲ್ಲಾ ಇಲಾಖೆಯ ಅಧಿಕಾರಿಗಳು ಹೆಚ್ಚೆತ್ತುಕೊಂಡು ಕೆಲಸ ಮಾಡಿದರೆ ಜಿಲ್ಲೆಯ ಅಭಿವೃದ್ಧಿ ಸಾಧ್ಯವೆಂದು ಹೇಳಿದರು.

ಕೃಷಿ ಇಲಾಖೆ ಮತ್ತು ವಿವಿಧ ಇಲಾಖೆಗಳು ಸಹ ಒಳ್ಳೆಯ ಕೆಲಸವನ್ನು ಮಾಡುತ್ತಿದೆ ಮತ್ತು ಎಲ್ಲಾ ಇಲಾಖೆಯ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದರು. ರಾಯಚೂರು ಜಿಲ್ಲೆಯು ತುಂಬಾ ಒಳ್ಳೆಯ ಜಿಲ್ಲೆ ಹಾಗೂ ಜಿಲ್ಲೆಯ ಪೋಲಿಸ್ ವರಿಷ್ಠಾಧಿಕಾರಿಗಳೊಂದಿಗೆ ಒಡನಾಟವನ್ನು ಹಂಚಿಕೊಂಡರು.

ಈ ವೇಳೆ ನೂತನ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ ಕಾಂದೂ ಅವರು ಮಾತನಾಡಿ, ರಾಯಚೂರಿನ ಜಿ.ಪಂನ ಸಿಇಓಗಳ ಸೇವೆಯನ್ನು ನೋಡಿದಾಗ 2 ವರ್ಷ ಸೇವೆಯನ್ನು ಪೂರ್ತಿ ಮಾಡಿದ ಹೆಗ್ಗಳಿಕೆ ರಾಹುಲ್ ತುಕಾರಾಂ ಅವರಿಗೆ ಸಲ್ಲುತ್ತದೆ. ಅವರು ಜಿಲ್ಲೆಯ ಎಲ್ಲಾ ಇಲಾಖೆಯ ಅಧಿಕಾರಿಗಳ ಕಾರ್ಯಕ್ಷಮತೆಯಲ್ಲಿ ತುಂಬಾ ಸಹಕಾರ ನೀಡಿರುವುದು ತಿಳಿಯುತ್ತಿದೆ.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ಪುಟ್ಟಮಾದಯ್ಯ ಅವರು ಮಾತನಾಡಿ, ಜಿಲ್ಲಾ ಕೇಂದ್ರದ ನಿರ್ವಹಣೆಯಲ್ಲಿ ಡಿಸಿ, ಎಸ್ಪಿ, ಹಾಗೂ ಸಿಇಓ ಈ ಮೂರು ಹುದ್ದೆಗಳು ಅತ್ಯಂತ ಮುಖ್ಯವಾದವು ಪಾಂಡ್ವೆ ಅವರು ಈ ಮೂರು ಪೈಕಿ ಒಂದಾದ ಮುಖ್ಯ ಕಾರ್ಯನಿರ್ವಾಹಕರ ಹುದ್ದೆಯನ್ನು ಅತ್ಯಂತ ಸಮರ್ಪಕವಾಗಿ ನಿಭಾಯಿಸಿದರು. ಯಾವುದೇ ಸರ್ಕಾರಿ ಕಾರ್ಯಕ್ರಮದಲ್ಲಿ ಅವರೊಂದಿಗೆ ವೇದಿಕೆ ಹಂಚಿಕೊಳ್ಳುವುದು ನನಗೆ ಗೌರವವಾಗಿತ್ತು.

ಸಿಬ್ಬಂದಿಗಳ ಮೇಲಿನ ಕ್ರಮ ಕೈಗೊಳ್ಳುವ ಸಂದರ್ಭದಲ್ಲಿ ಅವರು ನೀಡುತ್ತಿದ್ದ ಸೂಕ್ತ ಸಲಹೆಗಳು ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯಿಂದ ಕೆಲಸ ಮಾಡಲು ಹಾದಿಯಾಗಿದ್ದವು ಎಂದು ತಿಳಿಸಿದರು. ಅವರ ನಿರ್ವಹಣಾ ಶೈಲಿ ಶಿಸ್ತಿನ ಜೊತೆ ಮನುಷ್ಯತ್ವವನ್ನೂ ಒಳಗೊಂಡಿತ್ತು. ಅವರು ಅಧಿಕಾರಿಯಾಗಿದ್ದಷ್ಟೇ ಅಲ್ಲದೇ ತಮ್ಮ ಸರಳತೆಯಿಂದ ಜಿಲ್ಲೆಯಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದರು. ಜಿಲ್ಲೆಯಲ್ಲಿ ಯಾವುದೇ ಸಮಸ್ಯೆ ಬಂದರೂ ಅವುಗಳನ್ನು ಪರಿಹರಿಸುವ ನಿಟ್ಟಿನಲ್ಲಿ ತಮ್ಮದೇ ಜ್ಞಾನದಿಂದ ಸಲಹೆಗಳನ್ನು ನೀಡುತ್ತಿದ್ದರು. ಅವರ ಮುಂದಿನ ಹುದ್ದೆಯಲ್ಲಿ ಅವರು ಇನ್ನೂ ಹೆಚ್ಚಿನ ಜನರಿಗೆ ಉತ್ತಮ ಸೇವೆ ನೀಡಲಿ ಎಂದರು.

ಈ ವೇಳೆ ಸಹಾಯಕ ಆಯುಕ್ತ ಗಜಾನನ ಬಾಲೆ ಅವರು ಮಾತನಾಡಿ, ಪಾಂಡ್ವೆ ಅವರು ಜೆಸ್ಕಾಂ ಎಂ–ಡಿಯಾಗಿ ಕಲಬುರ್ಗಿಯಲ್ಲಿ ಸೇವೆ ಸಲ್ಲಿಸಿದ ಸಂದರ್ಭದಲ್ಲಿ ಅವರೊಂದಿಗೆ ನಾನು ಕೆಲಸ ಮಾಡಿದ್ದೇನೆ. ಅವರು ಈಗ ಶಿಕ್ಷಣ ಇಲಾಖೆಯ ಆಯುಕ್ತರಾಗಿರುವುದು ಖಾಲಿಯಿರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ಮಹತ್ವದ ಪಾತ್ರ ವಹಿಸಲಿದ್ದಾರೆ. ಅವರ ಕಾರ್ಯನಿಷ್ಠೆ ಹಾಗೂ ಸ್ಪಷ್ಟತೆ ಎಲ್ಲರಿಗೂ ಮಾದರಿಯಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಯೋಜನಾ ನಿರ್ದೇಶಕ ಶರಣಬಸವರಾಜ, ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಇದ್ದರು.

## ಕಾಣೆಯಾಗಿರುವ ವ್ಯಕ್ತಿ ಪತ್ತೆಗಾಗಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜುಲೈ.11–ಬೀದರನ ಚಿದ್ರಿ ರೋಡ ಭದ್ರೋದ್ದಿನ್ ಕಾಲೋನಿಯ 66 ವರ್ಷ ವಯಸ್ಸಿನ ಜ್ಞಾನಿ ಲಕ್ಷ್ಮಣ ಮಹಿಮಾಕರ ಎಂಬ ವ್ಯಕ್ತಿ ದಿನಾಂಕ: 13–06–2025 ರಂದು ಮನೆಯಿಂದ ಹೊರಗಡೆ ಹೋಗಿ ಕಾಣೆಯಾಗಿರುತ್ತಾನೆ.

ಕಾಣೆಯಾದ ವ್ಯಕ್ತಿ 5 ಅಡಿ 5 ಇಂಚ್ ಎತ್ತರ ಇದ್ದು, ಕಪ್ಪು ಮೈಬಣ್ಣ, ದುಂಡು ಮುಖ, ಸಾಧಾರಣ ಮೈಕಟ್ಟು ಇದ್ದು, ಮೈಮೇಲೆ ಬಿಳಿ ಬಣ್ಣದ ಶರ್ಟ, ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುವ ಇವರು ಕನ್ನಡ, ಹಿಂದಿ ಹಾಗೂ ಮರಾಠಿ ಭಷೆಯಲ್ಲಿ ಮಾತನಾಡುತ್ತಾರೆ. ಕಾಣೆಯಾದ ವ್ಯಕ್ತಿಯ ಬಗ್ಗೆ ಯಾರಿಗಾದರೂ ಮಾಹಿತಿ ಸಿಕ್ಕಲ್ಲಿ ಗಾಂಧಿ ಗಂಜ್ ಪೊಲೀಸ್ ಬೀದರ ದೂರವಾಣಿ ಸಂಖ್ಯೆ: 08482–226233, 9480803448 ಹಾಗೂ ಕಂಟ್ರೋಲ್ ರೂಮ್ ಬೀದರ ದೂರವಾಣಿ ಸಂಖ್ಯೆ: 08482–226704 ಗೆ ಸಂಪರ್ಕಿಸಬಹುದಾಗಿದೆ ಎಂದು ಬೀದರ ಗಾಂಧಿ ಗಂಜ್ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸಪೇಕ್ಟರ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ವ್ಯಕ್ತಿ ಕಾಣೆ: ಪತ್ತೆಗಾಗಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜುಲೈ.11– ಬೀದರನ ಕೈಲಾಸ ನಗರದ 75 ವರ್ಷ ವಯಸ್ಸಿನ ಶಂಕ್ರೆಪ್ಪ ಸಂಗಪ್ಪ ಪವಾಡಶೆಟ್ಟಿ ಎಂಬ ವ್ಯಕ್ತಿ ದಿನಾಂಕ: 27–06–2025 ರಂದು ಮನೆಯಿಂದ ಹೊರಗಡೆ ಹೋಗಿ ಕಾಣೆಯಾಗಿರುತ್ತಾನೆ.

ಕಾಣೆಯಾದ ವ್ಯಕ್ತಿ 5 ಅಡಿ 5 ಇಂಚ್ ಎತ್ತರ ಇದ್ದು, ಗೋದಿ ಮೈಬಣ್ಣ, ಸಾಧಾರಣ ಮೈಕಟ್ಟು ಇದ್ದು, ಮನೆಯಿಂದ ಹೊರಗಡೆ ಹೋಗುವಾಗ ಮೈಮೇಲೆ ಬಿಳಿ ಖಮೀಸ್, ಧೋತುರ ಧರಿಸಿರುವ ಇತನು ಕನ್ನಡ ಭಾಷೆಯಲ್ಲಿ ಮಾತನಾಡುತ್ತಾನೆ. ಕಾಣೆಯಾದ ವ್ಯಕ್ತಿಯ ಬಗ್ಗೆ ಯಾರಿಗಾದರೂ ಮಾಹಿತಿ ಸಿಕ್ಕಲ್ಲಿ ಗಾಂಧಿ ಗಂಜ್ ಪೊಲೀಸ್ ಬೀದರ ದೂರವಾಣಿ ಸಂಖ್ಯೆ: 08482–226233, 9480803448 ಹಾಗೂ ಕಂಟ್ರೋಲ್ ರೂಮ್ ಬೀದರ ದೂರವಾಣಿ ಸಂಖ್ಯೆ: 08482–226704 ಗೆ ಸಂಪರ್ಕಿಸಬಹುದಾಗಿದೆ ಎಂದು ಬೀದರ ಗಾಂಧಿ ಗಂಜ್ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸಪೇಕ್ಟರ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಹೊಸ ಉದ್ಯೋಗ ಆಧರಿತ ಪ್ರೋತ್ಸಾಹಧನ: ನೀರಜ್ ಕುಮಾರ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 11–: ದೇಶದ ಪ್ರಧಾನಮಂತ್ರಿಗಳಾದ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ದೇಶದ ಎಲ್ಲಾ ವಲಯಗಳಲ್ಲಿ ಉದ್ಯೋಗ ಸೃಷ್ಟಿ, ಉದ್ಯೋಗಾರ್ಹತೆ ಹಾಗೂ ಸಾಮಾಜಿಕ ಭದ್ರತೆಯನ್ನು ವಿಸ್ತರಿಸುವ ನಿಟ್ಟಿನಲ್ಲಿ ಹೊಸ ಉದ್ಯೋಗ ಆಧರಿತ ಪ್ರೋತ್ಸಾಹಧನ (ಇಎಲ್ಐ) ಯೋಜನೆಗೆ ಅನುಮೋದನೆ ನೀಡಿದೆ ಎಂದು ರಾಯಚೂರು ವಿಭಾಗೀಯ ಇಪಿಎಫ್ ಪ್ರಾದೇಶಿಕ ಆಯುಕ್ತರಾದ ನೀರಜ್ ಕುಮಾರ್ ಪ್ರಸಾದ್ ಅವರು ಹೇಳಿದರು.

ಜುಲೈ 10ರ ಗುರುವಾರದಂದು ನಗರದ ಪ್ರಾದೇಶಿಕ ನೌಕರರ ಭವಿಷ್ಯ ನಿಧಿ ಸಂಸ್ಥೆಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾ ಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಉತ್ಪಾದನಾ ವಲಯದ ಮೇಲೆ ವಿಶೇಷ ಒತ್ತು ನೀಡುವಂತೆ ಈ ಯೋಜನೆಯನ್ನು ರೂಪಿಸಲಾಗಿದ್ದು, ಇದರಿಂದ ಉದ್ಯೋಗಾರ್ಹತೆಯು ಹೆಚ್ಚುವುದರ ಜೊತೆಗೆ ಮೂಲಕ ಇಪಿಎಫ್ಒ ನೇರವಾಗಿ ಹೊಸ ಉದ್ಯೋಗಿಗಳಿಗೆ ಹಾಗೂ ಉದ್ಯಮಿಗಳಿಗೆ ಹಣಕಾಸಿನ ನೆರವು ದೊರೆಯಲಿದೆ ಎಂದರು.

ಕೇಂದ್ರ ಸರ್ಕಾರವು 99,446 ಕೋಟಿ ರೂ. ವೆಚ್ಚದೊಂದಿಗೆ ಈ ಯೋಜನೆಯನ್ನು ಜಾರಿಗೆ ತರುವ ಮೂಲಕ ಮುಂದಿನ ಎರಡು ವರ್ಷಗಳಲ್ಲಿ 3.5 ಕೋಟಿ ಹೊಸ ಉದ್ಯೋಗ ಸೃಷ್ಟಿಸುವ ಗುರಿಯನ್ನು ಹೊಂದಿದೆ ಎಂದರು. ಈ ಯೋಜನೆಯಡಿಯಲ್ಲಿ ಸುಮಾರು 1.92 ಕೋಟಿ ಹೊಸದಾಗಿ ಉದ್ಯೋಗಕ್ಕೆ ಪ್ರವೇಶಿಸುವವರು, ಅಂದರೆ ಇದೆ ಮೊದಲ ಬಾರಿಗೆ ನೋಂದಾಯಿಸಿ ಕೊಳ್ಳುವವರು ಲಾಭ ಪಡೆಯಲಿದ್ದಾರೆ. ಈ ಯೋಜನೆಯ ಪ್ರಯೋಜನಗಳು 2025ರ ಆಗಸ್ಟ್ 1ರಿಂದ 2027ರ ಜುಲೈ 31ರೊಳಗೆ ಹೊಸ ಉದ್ಯೋಗಗಳು ಸೃಷ್ಟಿಯಾದ ಸಂದರ್ಭ ಅನ್ವಯವಾಗಲಿವೆ ಎಂದು ಹೇಳಿದರು.

ಇದರಲ್ಲಿ ಎರಡು ಪ್ರಮುಖ ಭಾಗಗಳಿವೆ. ಮೊದಲ ಭಾಗದಲ್ಲಿ ಇಪಿಎಫ್ಒನೋಂದಾಯಿತ ಹೊಸ ಉದ್ಯೋಗಿಗಳಿಗೆ ಒಂದು ತಿಂಗಳ ವೇತನದಷ್ಟು 15,000 ಗರಿ ಮೊತ್ತವನ್ನು ಎರಡು ಹಂತಗಳಲ್ಲಿ ಪಾವತಿಸಲಾಗುವುದು. ಮೊದಲ ಕಂತು 6 ತಿಂಗಳ ಸೇವೆಯ ನಂತರ ಹಾಗೂ ಎರಡನೇ ಕಂತು 12 ತಿಂಗಳ ಸೇವೆಯ ನಂತರ ಹಣಕಾಸು ಸಾಂಸ್ಕೃತಿಕ ಶಿಬಿರದಲ್ಲಿ ಭಾಗವಹಿಸಿದ ಬಳಿಕ ಪಾವತಿಸಲಾಗುತ್ತದೆ. ಈ ಹಣದ ಒಂದು ಭಾಗವನ್ನು ನಿಗದಿತ ಅವಧಿಗೆ ಉಳಿತಾಯ ಖಾತೆಯಲ್ಲಿ ಇರಿಸುವ ವ್ಯವಸ್ಥೆಯು ಕೂಡ ಕೈಗೊಳ್ಳಲಾಗಿದೆ. ಇದರಿಂದ ಉಳಿತಾಯದ ಚಟದ ಉತ್ತೇಜನ ದೊರೆಯಲಿದೆ ಎಂದರು.


ಯೋಜನೆಯ ಎರಡನೇ ಭಾಗದಲ್ಲಿ ಉದ್ಯಮಿಗಳು ಉದ್ಯೋಗದಾರರನ್ನು ಪ್ರೋತ್ಸಾಹ ನೀಡಲಾಗುವುದು. ಉದ್ಯಮಿಗಳು ಹೊಸ ಉದ್ಯೋಗಿಗಳನ್ನು ನೇಮಕ ಮಾಡಿದರೆ 1 ಲಕ್ಷದವರೆಗೆ ವೇತನ ಹೊಂದಿರುವ ಉದ್ಯೋಗಿಗಳ ಮೇಲೆ ಮಾಸಿಕ ಪ್ರೋತ್ಸಾಹಧನ ನೀಡಲಾಗುವುದು.

ಉದ್ಯೋಗಿಗಳ ವೇತನ 10,000 ರೂ.ವರೆಗೆ ಇದ್ದರೆ ತಿಂಗಳಿಗೆ 1,000ರೂ. 10,000–20,000 ರೂಪಾಯಿಗಳ ನಡುವೆ ಇದ್ದರೆ 2,000 ರೂ. ಹಾಗೂ 20,000–1 ಲಕ್ಷದವರೆಗೆ ಇದ್ದರೆ ತಿಂಗಳಿಗೆ 3,000 ರೂ ನೀಡಲಾಗುತ್ತದೆ. ಉದ್ಯಮಿಗಳು ಕನಿಷ್ಠ 6 ತಿಂಗಳು ನಿರಂತರವಾಗಿ ಈ ಉದ್ಯೋಗಿಗಳನ್ನು ಉದ್ಯೋಗದಲ್ಲಿಡಬೇಕು.

ಈ ತಯಾರಿಕಾ ವಲಯದಲ್ಲಿ ಈ ಪ್ರಯೋಜನವನ್ನು ಮೂರನೇ ಮತ್ತು ನಾಲ್ಕನೇ ವರ್ಷಗಳಿಗೂ ವಿಸ್ತರಿಸಲಾಗಿದೆ, ಮತ್ತು 50 ಕ್ಕಿಂತ ಕಡಿಮೆ ಉದ್ಯೋಗಿಗಳಿರುವ ಸಂಸ್ಥೆಗಳು ಕನಿಷ್ಠ 2 ಹಾಗೂ 50 ಕ್ಕಿಂತ ಹೆಚ್ಚು ಉದ್ಯೋಗಿಗಳಿರುವ ಸಂಸ್ಥೆಗಳು ಕನಿಷ್ಠ 5 ಹೊಸ ಉದ್ಯೋಗಿಗಳನ್ನು ನೇಮಿಸಬೇಕೆಂಬ ಷರತ್ತು ವಿಧಿಸಲಾಗಿದೆ ಎಂದರು.

ಅಂತಿಮವಾಗಿ, ಯೋಜನೆಯಡಿ ಹೊಸ ಉದ್ಯೋಗಿಗಳಿಗೆ ನೇರವಾಗಿ ಆಧಾರ್ ಬ್ರಿಡ್ಜ್ ಪೇಮೆಂಟ್ ವ್ಯವಸ್ಥೆ ಮೂಲಕ ಡಿಬಿಟಿ (ನೇರ ಲಾಭ ಪಾವತಿ) ಮೂಲಕ ಹಣ ಪಾವತಿಸಲಾಗುವುದು. ಉದ್ಯಮಿಗಳಿಗೆ ಪಾನ್ ಅಂಕಿತ ಬ್ಯಾಂಕ್ ಖಾತೆಗೆ ನೇರವಾಗಿ ಹಣ ವರ್ಗಾಯಿಸುವುದರ ಮೂಲಕ ಯೋಜನೆಯ ಜಾರಿ ಸುಗಮವಾಗಲಿದೆ ಎಂದು ಹೇಳಿದರು. ಈ ಯೋಜನೆಯು "ಪ್ರಧಾನಮಂತ್ರಿ ಘೋಷಿಸಿದ ಅಮೃತ ಕಾಲದ ಈ ಯೋಜನೆ ಮೂಲಕ ಯುವಕರಿಗೆ ಉದ್ಯೋಗ, ಕೌಶಲ್ಯಾಭಿವೃದ್ಧಿ ಹಾಗೂ ಉಳಿತಾಯದ ಮನೋಭಾವನೆ ಬೆಳೆಯಲಿದ್ದು, ಉದ್ಯಮ ವಲಯವೂ ಹೊಸ ರೀತಿಯಲ್ಲಿ ಬಲಪಡಲಿದೆ" ಎಂದು ಹೇಳಿದರು. ಸಭೆಯಲ್ಲಿ ಲೆಕ್ಕಾಧಿಕಾರಿಗಳಾದ ಪಿ. ರಾಘವೇಂದ್ರ ರಾವ್ ಮತ್ತು ಮುಕೇಶ್ ತುಳಸಿರಾಮ್ ಅವರು ಯೋಜನೆಯ ಕಾರ್ಯಚಟುವಟಿಕೆಗಳ ಬಗ್ಗೆ ವಿವರವಾಗಿ ಮಾತನಾಡಿದರು.

ಈ ಸಭೆಯಲ್ಲಿ ಲೆಕ್ಕಾಧಿಕಾರಿಗಳಾದ ಪಿ. ರಾಘವೇಂದ್ರ ರಾವ್ ಮತ್ತು ಮುಕೇಶ್ ತುಳಸಿರಾಮ್ ಇನ್ನಿತರರು ಭಾಗಿಯಾಗಿದ್ದರು.



ಬಸವಕಲ್ಯಾಣ :– ತಾಲೂಕಿನ ಶಾಸಕರಾದ ಶರಣು ಸಲಗರ ಅವರು ಗುರು ಪೂರ್ಣಿಮೆ ನಿಮಿತ್ಯ ಹಾರಕೂಡ ಶ್ರೀಮಠಕ್ಕೆ ಆಗಮಿಸಿ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರಿಗೆ ಸತ್ಕರಿಸಿ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಹಿರಿಯ ಮುಖಂಡರಾದ ಮೇಘರಾಜ ನಾಗರಾಳೆ, ರಾಜಕುಮಾರ ಬಿರಾದರ ಸಿರಗಾಪೂರ, ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ.ಕೆ. ಹಿರೇಮಠ, ರತಿಕಾಂತ ಕೋಹಿನೂರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಸಂಗನಹಾಲ ಗ್ರಾಮದಲ್ಲಿ ಅಥಣಿ ಮುರುಗೇಂದ್ರ ಶಿವಯೋಗಿಗಳ ಪುರಾಣ ಪ್ರವಚನ ಪ್ರಾರಂಭ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆ ಯಲಬುರ್ಗಾ ತಾಲೂಕಿನ ಸಂಗನ ಹಾಲ ಗ್ರಾಮದಲ್ಲಿ ಶ್ರೀ ನಿರಂಜನ ಪ್ರಣವ ಸ್ವರೂಪಿ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠ ಹಾಲಕೆರೆ ಇವರ ಅಪ್ಪಣೆಯ ಮೇರೆಗೆ ಹಾಗೂ ದಿವ್ಯ ಸಾನಿಧ್ಯದಲ್ಲಿ ಶ್ರೀ ವಿಶ್ವೇಶ್ವರ ದೇವರು ಅನ್ನದಾನೇಶ್ವರ ಶಾಖಾಮಠ ಸಂಗನಹಾಲ ಇವರ ನೇತೃತ್ವದಲ್ಲಿ ಶ್ರೀಮದ್ ಅಥಣಿ ಮುರುಗೇಂದ್ರ ಮಹಾ ಶಿವಯೋಗಿಗಳವರ ಪುರಾಣ ಪ್ರವಚನ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಪುರಾಣ ಪ್ರವಚನಕಾರರಾದ ನಿರಂಜನ ದೇವರು ಮೈಸೂರ ಇವರು ಯುಗಕ್ಕೊಂದು ಪ್ರಬೇಉದಯಿಸಿ ಜಗವನ್ನು ಬೆಳಗುವಂತೆ ತನುಕರುಣದಿಗಳ ಕರ್ಮವಾಸನೆಯ ಕತ್ತಲೆಯನ್ನು ಕಳೆದು ಅದನ್ನು ಲಿಂಗಾರ್ಪಿತವ ಮಾಡಿ ಬೆಳಗಿದ ಮಹಾಪುರುಷರು ಶ್ರೀ ಅಥಣಿಯ ಮುರುಗೇಂದ್ರ ಶಿವಯೋಗಿಗಳು ಎಂದು ಹೇಳಿದರು.

ಶ್ರೀ ಶರಣಬಸವ ಕೆ ಸೋಮನಾಳ ಶ್ರೀ ಪಂಚಾಕ್ಷರಿ ಹಿರೇಮಠ ಗದಗ ಇವರಿಂದ ಸಂಗೀತ ಕಾರ್ಯಕ್ರಮ ನಡೆಯಿತು ಶ್ರೀಗಳ ಕತೃಗದ್ದೆಗೆ ರುದ್ರಾಭಿಷೇಕ ಹಾಗೂ ಪ್ರಸಾದ ಸೇವೆಯನ್ನು ಶ್ರೀ ಗುರುಲಿಂಗಪ್ಪ ಕಳಕಪ್ಪ ಕುಂಬಾರ ನಡೆಸಿಕೊಟ್ಟರು ಮಲ್ಲಪ್ಪ ಕಿನ್ನಾಳ, ಗ್ರಾಮ ಪಂಚಾಯತಿ ಸದಸ್ಯರು ಅಂದಪ್ಪ ಸೋಂಪುರ, ಗಣೇಶಪ್ಪ ಕಂಬಾರ, ಬಸನಗೌಡ ಗಿರಡ್ಡಿ, ಶಿವಮೂರ್ತಪ್ಪ ತೆ–ೂಟಗಂಟಿ, ವಿಜಯಕುಮಾರ ಕವಲೂರ, ಸೋಮಶೇಖರ ಗಡಾದ, ಹನುಮಂತಪ್ಪ ಕೊಣ್ಣೂರ, ಶರಣಯ್ಯ ಶಾಸ್ತ್ರಿ ಮಠ, ಸಂಗಪ್ಪ ಸಿಂದೋಗಿ, ಯಲ್ಲಪ್ಪ ಗಿರೆಡ್ಡಿ, ಹಾಗೂ ಇತರರು ಉಪಸ್ಥಿತರಿದ್ದರು.

## ಆರ್ಟ್ ಆಫ್ ಲಿವಿಂಗ್‌ನಿಂದ ಗುರು ಪೂರ್ಣಿಮೆ ಆಚರಣೆ 108 ಜನರ ಗುರು ಪೂಜೆ ಸಂಕಲ್ಪ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 11: ಗುರು ಪೂರ್ಣಿಮೆನಿಮಿತ್ತಆರ್ಟ್ಆಫ್ ಲಿವಿಂಗ್ ಬೀದರ್ ತಂಡದಿಂದ ಇಲ್ಲಿಯ ಗುಂಪಾ ರಸ್ತೆಯಲ್ಲಿ ಇರುವ ಸಿದ್ಧಾರೂಢ ಮಠದ ಎದುರಿನ ಪೋಲಾ ಫಂಕ್ಷನ್ ಹಾಲ್‌ನಲ್ಲಿ ಗುರುವಾರ 108 ಜನರ ಸಾಮೂಹಿಕ ಗುರು ಪೂಜೆ ಸಂಕಲ್ಪ ಹಾಗೂ ಮಹಾ ಸತ್ಸಂಗ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಪಾಲ್ಗೊಂಡವರು ರವಿಶಂಕರ ಗುರೂಜಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಭಕ್ತಿ ಅರ್ಪಣೆ ಮಾಡಿದರು.

ಆರ್ಟ್ ಆಫ್ ಲಿವಿಂಗ್ ಬೀದರ್ ಜಿಲ್ಲಾ ಅಭಿವೃದ್ಧಿ ಸಮಿತಿಯ ಸದಸ್ಯ ಕಾಮಶೆಟ್ಟಿ ಚಿಕ್ಕಬಸೆ ಮಾತನಾಡಿ, ಗುರು ಒಬ್ಬರು ವ್ಯಕ್ತಿಯಲ್ಲ. ಅವರೊಬ್ಬ ಶಕ್ತಿ ಎಂದು ಬಣ್ಣಿಸಿದರು.

ಗುರು ನಮ್ಮ ಬದುಕು ಹಸನಾಗಿಸುತ್ತಾರೆ. ಮುಕ್ತಿಯ ಮಾರ್ಗ ತೋರುತ್ತಾರೆ. ಗುರುವನ್ನು ಎಲ್ಲರೂ ಗೌರವಿಸಬೇಕು ಎಂದು ಹೇಳಿದರು.

ಡಾ. ಲೋಕೇಶ ಹಿರೇಮಠ, ಶಿವಲೀಲಾ ಚಿದ್ರೆ, ದಾನೇಶ್ವರಿ ಸತ್ಸಂಗ ನಡೆಸಿಕೊಟ್ಟರು.

ಆರ್ಟ್ ಆಫ್ ಲಿವಿಂಗ್ ಜಿಲ್ಲಾ ಸಂಯೋಜಕ ಶಿವಾನಂದ, ಜಿಲ್ಲಾ ಅಭಿವೃದ್ಧಿ ಸಮಿತಿ ಸದಸ್ಯ ರಾಮಕೃಷ್ಣ ಸಾಳೆ, ಯೋಗ ಶಿಕ್ಷಕ ಅಶೋಕ, ಸ್ವರೂಪಾ ದಿಗಂಬರ ಪೋಲಾ, ಸಂಗೀತಾ ಅಶೋಕ ರೇಜಂತಲ್, ಉಮಾದೇವಿ ಶ್ರೀನಿವಾಸ್ ಗಾದಾ, ರಜನಿ ಸಿಂಗಾ, ಮಂಜುಳಾ ಲಾಲಜಿ ಪಟೇಲ್, ಬಸವಶ್ರೀ ಸ್ವಾಮಿ, ಮಂಗಲಾ

ಹಿರೇಗೌಡ, ಮಲ್ಲಿಕಾರ್ಜುನ ಅಲಿಯಂಬರ್, ಬಸವಶ್ರೀ ಸ್ವಾಮಿ, ರೇಣುಕಾ ರಾಜಶೇಖರ ತೆಲಗಾಣಿ, ಗಂಗಾ ಸ್ವಾಮಿ, ಲಲಿತಾ ಮೋಳಕೇರಿ, ಜ್ಯೋತಿ ದಾಡಗೆ, ಉಮಾದೇವಿ ಹೂಗಾರ್, ರಾಕೇಶ್ ಚಿಲ್ಲಶೆಟ್ಟಿ, ಕೇದಾರನಾಥ ವೀರಶೆಟ್ಟಿ ರಿಕ್ಕೆ, ರತ್ನಪ್ಪ ಕಲಬುರಗಿ, ಅನಿಲಕುಮಾರ, ಅರುಣಾ ರಾಜಕುಮಾರ ಅಳ್ಳೆ, ದೀಪ್ತಿ ಪಾಂಡುಂಗ, ತುಳಸಿ, ರುಕ್ಮಿಣಿ, ಹುಲೆಪ್ಪ ರೆಡ್ಡಿ, ಶಿವರಾಜ, ಸತ್ಯಪ್ರಕಾಶ್, ಶೈಲಜಾ ಸಿಂಗ್ ಮತ್ತಿತರರು ಇದ್ದರು.

# ಸುಂದರ ಬದುಕಿನ ಸೂತ್ರ ನೀಡುವವನೇ ಗುರು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 11 : ಎಲ್ಲರೂ ಮೆಚ್ಚುವಂತಹ ಸುಂದರ ಬದುಕಿನ ಸೂತ್ರ ನೀಡುವವನೇ ನಿಜವಾದ ಗುರು ಎಂದು ಪತಂಜಲಿ ಯೋಗ ಸಮಿತಿಯ ಜಿಲ್ಲಾ ಘಟಕದ ಅಧ್ಯಕ್ಷರೂ ಆದ ಯೋಗ ಗುರು ಯೋಗೇಂದ್ರ ಯದಲಾಪುರೆ ಹೇಳಿದರು.



ಪತಂಜಲಿ ಯೋಗ ಸಮಿತಿಯ ಜಿಲ್ಲಾ ಘಟಕದ ವತಿಯಿಂದ ಇಲ್ಲಿಯ ಚಿಟ್ಟಾ ರಸ್ತೆಯಲ್ಲಿ ಇರುವ ದತ್ತಗಿರಿ ಮಹಾರಾಜ ಪದವಿಪೂರ್ವ ಕಾಲೇಜಿನಲ್ಲಿ ಗುರುವಾರ ಆಯೋಜಿಸಿದ್ದ ಗುರುಪೂರ್ಣಿಮೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಸತ್ಯವನ್ನು ಅರಿತವರು, ಲೌಕಿಕದ ಸೆಳೆತಗಳಿಂದ ಮುಕ್ತರಾದವರು, ಭಕ್ತರ ದುಃಖಗಳನ್ನು ಪರಿಹರಿಸುವವರು ಶ್ರೇಷ್ಠ ಗುರುಗಳೆನಿಸುತ್ತಾರೆ ಎಂದು ತಿಳಿಸಿದರು.

ಗುರು ದೇವರಿಗೆ ಸಮಾನ. ಹೀಗಾಗಿ ಕಣ್ಣಿಗೆ ಕಾಣುವ ಗುರುವಿಗೆ ಶ್ರದ್ಧೆ, ಭಕ್ತಿಯಿಂದ ನಮಿಸಬೇಕು. ಅವರಿಗೆ ಶರಣು ಹೋಗಬೇಕು. ಹಿಂದೆ ಗುರುವಿದ್ದರೆ ಸಾಕು ಮನುಷ್ಯ ಎಂತಹ ಗುರಿಯನ್ನೂ ತಲುಪಬಹುದು ಎಂದು ಹೇಳಿದರು.

ಭಾರತ ಶರಣರು, ಸಂತರು, ಮಹಾ ಪುರುಷರು ಆಗಿ ಹೋದ ಪುಣ್ಯ ಭೂಮಿ. ಈ ದೇಶದ ಇತಿಹಾಸ, ಪರಂಪರೆ, ಸಂಸ್ಕೃತಿ ಶ್ರೇಷ್ಠವಾದದ್ದು. ಈ ಭೂಮಿಯಲ್ಲಿ ಜನಿಸಿದ ನಾವು ಧನ್ಯರು ಎಂದರು. 12ನೇ ಶತಮಾನದ ಶರಣರು ಸಮಾಜಕ್ಕೆ ಅನೇಕ ಮೌಲ್ಯಗಳನ್ನು ಕೊಟ್ಟಿದ್ದಾರೆ. ಅವರ ತತ್ವ, ಸಿದ್ಧಾಂತ ಹಾಗೂ ಆದರ್ಶಗಳನ್ನು ಪ್ರತಿಯೊಬ್ಬರೂ ಮೈಗೂಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಸಮಾಜದಲ್ಲಿ ಗುರುವಿನ ಸ್ಥಾನ ಬಹಳ ದೊಡ್ಡದು. ಜೀವನ ಹೇಗೆ ಸಾರ್ಥಕ ಮಾಡಿಕೊಳ್ಳಬೇಕು ಎನ್ನುವುದನ್ನು ಗುರು ಕಲಿಸಿಕೊಡುತ್ತಾರೆ ಎಂದು ಶಿವಮೂರ್ತಿ ಬಟನಾಪುರೆ ಹೇಳಿದರು. ಅಂಧಕಾರದಿಂದ ಬೆಳಕಿನೆಡೆಗೆ, ಅಸತ್ಯದಿಂದ ಸತ್ಯದೆಡೆಗೆ ಕರೆದೊಯ್ಯುವವನೇ ಗುರು ಎಂದು ಚಂದ್ರಕಾಂತ ಪಟ್ನೆ ಬಣ್ಣಿಸಿದರು.

ಯೋಗ ಸಾಧಕರು ಹಾಗೂ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಯೋಗೇಂದ್ರ ಯದಲಾಪುರೆ ಅವರಿಗೆ ಶಾಲು ಹೊದಿಸಿ ಗೌರವಿಸಿದರು. ರಾಮದೇವ ಬಾಬಾ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಭಕ್ತಿ ಸಮರ್ಪಿಸಿದರು.

ಪ್ರಮುಖರಾದ ಡಾ. ವೈಜಿನಾಥ ಬಿರಾದಾರ, ವಿಶ್ವನಾಥ ಮಠಪತಿ, ರಾಘವೇಂದ್ರ ಕುಲಕರ್ಣಿ, ಕೃಷ್ಣರೆಡ್ಡಿ, ಅಶೋಕ ರೆಡ್ಡಿ, ಶಿವಾಜಿ ಭೋಸ್ಲೆ, ಸತ್ಯವಾನ್ ಚಾಂಡೇಶ್ವರ, ಶಿವಶರಣಪ್ಪ ಮೂಲಗೆ, ಗುರಪ್ಪ ಗಿರಮಲ್, ರಮೇಶ ಬಿರಾದಾರ, ಶಿವಶರಣಪ್ಪ ದಾನಾ, ನಾಗರಾಜ ಸ್ವಾಮಿ, ಮಲ್ಲಿಕಾರ್ಜುನ ನೆಲವಾಡ, ವೀರಭದ್ರ ಮಾಳಗೆ, ಶಿವಾನಂದ ದೊಣ್ಣೆ, ಸಂಜೀವ ರೆಡ್ಡಿ, ವಿನೀತ್ ರೆಡ್ಡಿ, ಉಮಾದೇವಿ ಹೂಗಾರ್, ರಾಜೇಶ್ವರಿ ಕಲೀಮ್, ಅನಿತಾ ಮಡಿವಾಳ, ಜಗದೇವಿ ಮಡಿವಾಳ, ಮಹಾನಂದ ಬರದಾಬಾದೆ, ಕಾವೇರಿ, ಶ್ರುತಿ ಅಶೋಕ ಗೋರ್ಟೆ, ಅಶ್ವಿನಿ ಪಾಟೀಲ, ಶಾರದಾ ಮೋದಿ, ನಾಗಮಣಿ ಗೋರ್ಟೆ, ವಿದ್ಯಾವತಿ ಸಜ್ಜನಶೆಟ್ಟಿ, ಪೂಜಾ, ಶಕುಂತಲಾ ಮಡಿವಾಳ, ಪುಷ್ಪಾ ಮಡಿವಾಳ, ಭದ್ರಮ್ಮ, ಗೀತಾ ಪಟ್ನೆ, ನಾಗಮ್ಮ ಗಿರಿಮಲ್ ಹಾಜರಿದ್ದರು.

ನವೀನ್ ಘುಳೆ ಸ್ವಾಗತಿಸಿದರು. ಹುಲೆಪ್ಪ ಬರದಾಬಾದೆ ನಿರೂಪಿಸಿದರು. ಲಲಿತಾ ಎನ್. ಗಾದಗೆ ವಂದಿಸಿದರು.

# ಶಾದಿ ಮಹಲ್ ಅನುದಾನ ದುರುಪಯೋಗ: ದೂರು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.11: ತಾಲ್ಲೂಕಿನ ಅಷ್ಟೂರು ಗ್ರಾಮದಲ್ಲಿ ಶಾದಿ ಮಹಲ್ ನಿರ್ಮಿಸದೆ ಸರ್ಕಾರದ ಅನುದಾನ ದುರುಪಯೋಗ ಪಡಿಸಿಕೊಳ್ಳಲಾಗಿದೆ ಎಂದು ನಮ್ಮ ಕರ್ನಾಟಕ ಸೇನೆ ಆರೋಪಿಸಿದೆ.



ಸೇನೆಯ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಸಂಜು ಯಾದವ್ ಈ ಕುರಿತು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ದೂರು ಸಲ್ಲಿಸಿದ್ದಾರೆ.

ಶಾದಿ ಮಹಲ್‌ಗೆ ರೂ. 50 ಲಕ್ಷ ಮಂಜೂರಾಗಿದ್ದು, 2017–18 ರಲ್ಲಿ ರೂ. 20 ಲಕ್ಷ ಬಿಡುಗಡೆ ಮಾಡಲಾಗಿದೆ. ಆದರೆ, ಏಳು ವರ್ಷ ಕಳೆದರೂ ಕಟ್ಟಡ ನಿರ್ಮಾಣ ಮಾಡಲಾಗಿಲ್ಲ ಎಂದು ಆರೋಪಿಸಿದ್ದಾರೆ.

ಶಾದಿಮಹಲ್‌ಗೆ ಸಂಬಂಧಿಸಿದಂತೆ ಸೇನೆಯಿಂದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿ ಅವಿನಾಶ್ ಅವರ ವಿರುದ್ಧ ದೂರು ಕೊಡಲಾಗಿತ್ತು.

ಈ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯಿತಿ ಸಿಇಒ ತನಿಖಾಧಿಕಾರಿಯನ್ನು ನೇಮಕ ಮಾಡಿದ್ದರು. ಅಷ್ಟೂರಿನಲ್ಲಿ ಯಾವುದೇ ಶಾದಿ ಮಹಲ್ ನಿರ್ಮಿಸಲಾಗಿಲ್ಲ ಎಂದು ತನಿಖಾಧಿಕಾರಿ ವರದಿ ನೀಡಿದ್ದಾರೆ. ಆದರೂ, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಆಪಾದಿಸಿದ್ದಾರೆ.

ಪ್ರಕರಣ ಸಂಬಂಧ ಕೂಡಲೇ ಅಧಿಕಾರಿಗಳನ್ನು ಅಮಾನತುಗೊಳಿಸಬೇಕು. ಇಲ್ಲವಾದಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.

# ಆಧುನಿಕ ಯುಗದಲ್ಲಿ ಪುಸ್ತಕ ಸಂಸ್ಕೃತಿ ಹೆಚ್ಚಿಸಲು ಇದು ಸಹಕಾರಿ: ಮುಕ್ಕಣ್ಣ ಕರಿಗಾರ

ಬೀದರ. ಜು.11: ಮಕ್ಕಳನ್ನು ಮತ್ತು ಯುವಕರನ್ನು ಮೊಬೈಲ್ ಗೀಳಿನಿಂದ ಹೊರತಂದು ಪುಸ್ತಕ ಓದುವ ಹವ್ಯಾಸ ಬೆಳೆಸಲು ತಿಂಗಳ ಪುಸ್ತಕ ಪರಿಚಯ ಕಾರ್ಯಕ್ರಮ ಸಹಕಾರಿಯಾಗಿದೆ ಎಂದು ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಮುಕ್ಕಣ್ಣ ಕರಿಗಾರ ತಿಳಿಸಿದರು.



ಕರ್ನಾಟಕ ಬರಹಗಾರರ ಮತ್ತು ಕಲಾವಿದರ ಸಂಘ ಬೀದರ, ಕನ್ನಡ ಪುಸ್ತಕ ಪ್ರಾಧಿಕಾರದ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆ ಇವರ ಸಂಯುಕ್ತಾಶ್ರಯದಲ್ಲಿ ಮಳಿಗೆ ಆವರಣದಲ್ಲಿ ಆಯೋಜಿಸಿದ ಎಂ.ಜಿ.ದೇಶಪಾಂಡೆ ವಿರಚಿತ "ಶ್ರೀ ಶಂಭುಲಿಂಗೇಶ್ವರ, ಮಾತೆ ಬಸಮ್ಮ, ಪೂಜ್ಯ ಸದ್ಗುರು ಮಹಾತ್ಮೆ" ತಿಂಗಳ ಪುಸ್ತಕ ಪರಿಚಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಶ್ರೀ ಶಂಭುಲಿಂಗೇಶ್ವರರು ಹಾಗೂ ಅವರ ಆಪ್ತ ಶಿಷ್ಯೆ ಬಸಮ್ಮ ತಾಯಿಯವರು ನಡೆ–ನುಡಿಗಳನ್ನು ಒಂದಾಗಿಸಿಕೊಂಡು ಬದುಕಿದ ಮಹಾತ್ಮರು. ಕುಟುಂಬದ ಹಂಗು ತೊರೆದು ವಿರಕ್ತರಾಗಿ ಬದುಕಿದವರು. ಅವರು ನಡೆದದ್ದೇ ಪಾವನದಾರಿ, ನುಡಿದದ್ದೇ ವೇದ ಮಂತ್ರಗಳಾಗಿದ್ದವು.

ಅವರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಬದುಕು ಸಾರ್ಥಕವಾಗುತ್ತದೆ. ಮೊಬೈಲ್ ನೋಡುವುದರಿಂದ ನರಗಳು ಅಶಕ್ತವಾಗುತ್ತವೆ. ಇಂತಹ ಮಹಾತ್ಮರ ಪುಸ್ತಕ ಓದುವುದರಿಂದ ನರಗಳು ಉದ್ದೀಪನಗೊಳ್ಳುತ್ತವೆ. ಇಂತಹ ಪುಸ್ತಕ ರಚಿಸಿದ ಸಾಹಿತಿ ಎಂ.ಜಿ.ದೇಶಪಾಂಡೆ ಕಾರ್ಯ ಸ್ತುತ್ಯಾರ್ಹ ಎಂದು ಶ್ಲಾಘಿಸಿದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಬರಹಗಾರರ ಮತ್ತು ಕಲಾವಿದರ ಸಂಘದ ಅಧ್ಯಕ್ಷ ಡಾ. ಜಗನ್ನಾಥ ಹೆಬ್ಬಾಳೆ ಮಾತನಾಡಿ ಪುಸ್ತಕದ ಲೇಖ–ಕರಾದ ದೇಶಪಾಂಡೆಯವರು 1977ರ ಸಂದರ್ಭದಲ್ಲಿ ಕೈಬರಹದಿಂದ ಖ್ಯಾತಿ ಎನ್ನುವ ಪತ್ರಿಕೆ ನಡೆಸುತ್ತಿದ್ದರು.

ನಂತರ ಬ್ಯಾಂಕ್ ಅಧಿಕಾರಿಗಳಾಗಿ ಸಾಹಿತ್ಯ ಕೃಷಿ ಮಾಡುತ್ತ ಸುಮಾರು 60ಕ್ಕೂ ಹೆಚ್ಚು ಪುಸ್ತಕ ರಚನೆ ಮಾಡಿದ್ದಾರೆ. ಅನೇಕ ಮೌಲ್ಯಿಕ ಕೃತಿಗಳನ್ನು ನೀಡಿದ ಅವರು ಸರಳವಾಗಿ ಅರ್ಥವಾಗುವಂತೆ ಶ್ರೀ ಶಂಭುಲಿಂಗೇಶ್ವರ ಮಾತೆ ಬಸಮ್ಮ ತಾಯಿ ಬಗ್ಗೆ ಗ್ರಂಥ ರಚಿಸಿದ್ದು ಓದುಗರ ಮನದಲ್ಲಿ ಭಕ್ತಿ ಹುಟ್ಟಿಸುವಂತಿದೆ ಎಂದರು. ಪುಸ್ತಕಗಳ ಪರಿಚಯದಿಂದ ಸಾಹಿತಿಗಳ ಮತ್ತು ಓದುಗರ ಸಂಖ್ಯೆ ಹೆಚ್ಚುತ್ತದೆ. ಕನ್ನಡ ಭಾಷೆ, ಸಂಸ್ಕೃತಿ ಬೆಳೆಸಲು ಸಾಧ್ಯವಾಗುತ್ತದೆ ಎಂದರು.

ಪ್ರಾಸ್ತಾವಿಕ ಮಾತನಾಡಿದ ತಿಂಗಳ ಪುಸ್ತಕ ಪರಿಚಯ ಸಮಿತಿ ಅಧ್ಯಕ್ಷೆ ಡಾ. ಸುನಿತಾ ಕೂಡ್ಲಿಕರ್ ಮಾತನಾಡಿ ಯುವಪೀಳಿಗೆ ಗ್ರಂಥಾಲಯದ ಕಡೆಗೆ ವಾಲಬೇಕು. ಓದುವ ಗೀಳು ಹೆಚ್ಚಿಸಬೇಕೆಂಬುದು ನಮ್ಮ ಮೂಲ ಉದ್ದೇಶ. ಹೀಗಾಗಿ ಇದು ಮೂರನೇ ಪುಸ್ತಕ ಪರಿಚಯವಾಗಿದೆ ಎಂದರು.

ಸಾಹಿತಿ ಎಂ.ಜಿ.ದೇಶಪಾಂಡೆ ಮಾತನಾಡಿ ನಾನು ಪುಸ್ತಕ ಬರೆಯಲು ಆರಂಭ ಮಾಡಿದಾಗ ಸ್ವತಃ ಶಂಭುಲಿಂಗರೇ ನನ್ನ ಕಣ್ಣ ಮುಂದೆ ಓಡಾಡಿದ ಅನುಭವವಾಗಿದೆ. ಸದ್ಗುರು ಎನ್‌ಬಿ ರೆಡ್ಡಿಯವರ ಮಾರ್ಗದರ್ಶನದಿಂದ ಗ್ರಂಥ ರಚಿಸಲು ಸಾಧ್ಯವಾಯಿತು ಎಂದರು.

ಸಾಹಿತಿ ಡಾ. ಶ್ರೇಯಾ ಮಹೇಂದ್ರಕರ್ "ಶ್ರೀ ಶಂಭುಲಿಂಗೇಶ್ವರ, ಮಾತೆ ಬಸಮ್ಮ, ಪೂಜ್ಯ ಸದ್ಗುರು ಮಹಾತ್ಮೆ" ಪುಸ್ತಕ ಪರಿಚಯ ಮಾಡಿಕೊಟ್ಟರು.

ವಿಶ್ರಾಂತ ಪ್ರಾಂಶುಪಾಲರಾದ ಪ್ರಭುಶೆಟ್ಟಿ ಮೂಲಗೆ ಮಾತನಾಡಿದರು. ಕು. ಆಸ್ತಾ ಬಚ್ಚಾ ನೃತ್ಯ ನಡೆಸಿಕೊಟ್ಟರೆ, ವೈಜಿನಾಥ ಪಾಟೀಲ ಸ್ವಾಗತಿಸಿದರು. ಸ್ವರೂಪರಾಣಿ ನಾಗೂ–ರೆ ನಿರೂಪಿಸಿದರು. ಡಾ. ರಾಜಕುಮಾರ ಹೆಬ್ಬಾಳೆ ವಂದಿಸಿದರು. ಇದೇ ವೇಳೆ ಕಾರ್ಯಕ್ರಮದಲ್ಲಿ ಪ್ರೊ. ಎಸ್.ಬಿ.ಬಿರಾದಾರ, ಡಾ. ಸಾವಿತ್ರಿಬಾಯಿ ಹೆಬ್ಬಾಳೆ, ಡಾ.ಅಶೋಕ ಕೋರೆ, ಶಿವಶರಣಪ್ಪ ಗಣೇಶಪುರ, ಶಿವಕುಮಾರ ನಾಗವಾರ, ಶಾಂತಕುಮಾರ ಪಾಟೀಲ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಕಲ್ಯಾಣ ಕ್ರಾಂತಿಯಲ್ಲಿ ಹಡಪದ ಅಪ್ಪಣ್ಣ ಪಾತ್ರ ಮಹತ್ವದ್ದು



ಬೀದರ. ಜು. 11 : ಹಡಪದ ಅಪ್ಪಣ್ಣನವರು ಕಲ್ಯಾಣ ಕ್ರಾಂತಿಯಲ್ಲಿ ಮಹತ್ವದ ಪಾತ್ರ ವಹಿಸಿದ್ದರು ಎಂದು ಸಾಹಿತಿ ರಮೇಶ ಮಠಪತಿ ಹೇಳಿದರು. ಲಿಂಗಾಯತ ಮಹಾಮಠದ ವತಿಯಿಂದ ಇಲ್ಲಿಯ ಬಸವಗಿರಿಯಲ್ಲಿ ಗುರುವಾರ ಆಯೋಜಿಸಿದ್ದ ಗುರು ಪೂರ್ಣಿಮೆ ಹಾಗೂ ಹಡಪದ ಅಪ್ಪಣ್ಣನವರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. 12ನೇ ಶತಮಾನದ ಪ್ರಮುಖ ಶರಣರಲ್ಲೊಬ್ಬರಾಗಿದ್ದ ಅಪ್ಪಣ್ಣನವರು ಬಸವಣ್ಣನವರ ಪರಮಾಪ್ತರಾಗಿದ್ದರು. ಬಸವಣ್ಣನವರ ಆರಂಭದಿಂದ ಕೊನೆವರೆಗೂ ಅವರ ಜತೆಗಿದ್ದರು. ಅನೇಕ ಸಂದರ್ಭಗಳಲ್ಲಿ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಬಸವಣ್ಣನವರಿಗೆ ನಿರಾಳತೆಯನ್ನಿತ್ತ ಮಹಾನುಭಾವರು ಅವರು ಎಂದು ತಿಳಿಸಿದರು. ಮಹಾಮನೆ ಹಾಗೂ ಅನುಭವ ಮಂಟಪದಲ್ಲಿ ಅವರ ಕಾರ್ಯ ಹಿರಿದಾಗಿತ್ತು ಎಂದು ತಿಳಿಸಿದರು.

ಅಪ್ಪಣ್ಣನವರ 250 ಹಾಗೂ ಅವರ ಸತಿ ಲಿಂಗಮ್ಮನವರ 251 ವಚನಗಳು ಲಭ್ಯವಾಗಿವೆ. ಮಾನವ ಘನತೆಯಿಂದ ಹೇಗೆ ಬದುಕಬೇಕು ಎಂಬುದ್ದನ್ನು ಅಪ್ಪಣ್ಣ ತಮ್ಮ ವಚನಗಳಲ್ಲಿ ವಿವರಿಸಿದ್ದಾರೆ ಎಂದು ಹೇಳಿದರು.

ಕಾಯಕ ನಿಷ್ಠೆ, ದಾಸೋಹ ಹಾಗೂ ಮೂಢಾಚಾರಗಳ ವಿಡಂಬನೆ ಅವರ ವಚನಗಳಲ್ಲಿ ಹಾಸು ಹೊಕ್ಕಿವೆ ಎಂದು ತಿಳಿಸಿದರು. ಅಪ್ಪಣ್ಣನವರ ಸತಿ ಲಿಂಗಮ್ಮ ಶಿವಯೋಗ ಶಿಖರಕ್ಕೇರಿದ ಶರಣೆ. ಯೋಗ ಸಾಧಿಸಬಯಸುವವರು ಲಿಂಗಮ್ಮನವರ ವಚನಗಳ ಅಧ್ಯಯನ ಮಾಡಬೇಕು ಎಂದು ತಿಳಿಸಿದರು.

ಅಪ್ಪಣ್ಣ ಹಾಗೂ ಲಿಂಗಮ್ಮ ಅವರು ಸಮಾಜಕ್ಕೆ ಆದರ್ಶಪ್ರಾಯರು. ಅವರ ತತ್ವಗಳನ್ನು ಅನುಸರಿಸಿದಾಗ ಮಾತ್ರ ಅವರಿಗೆ ನಿಜ ಗೌರವ ಸಲ್ಲಿಸಿದಂತಾಗುತ್ತದೆ. ಅವರ ಜಯಂತಿ ಆಚರಣೆಯು ಸಾರ್ಥಕವಾಗುತ್ತದೆ ಎಂದು ಹೇಳಿದರು. ನಿವೃತ್ತ ಶಿಕ್ಷಕ ರೇವಣಪ್ಪ ಮೂಲಗೆ ವಚನ ಪಠಣಗೈದು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ನೇತೃತ್ವ ವಹಿಸಿದ್ದ ಪರುಷ ಕಟ್ಟೆಯ ಚನ್ನಬಸವಣ್ಣ ವಚನ ಗಾಯನ ಮಾಡಿದರು. ಹುಮನಾಬಾದನ ಮಲ್ಲಿಕಾರ್ಜುನ ರಟಕಲ್ ಅಪ್ಪಣ್ಣನವರ ವಚನ ವಾಚಿಸಿದರು.

ಆರ್. ಕೆ. ಪಾಟೀಲ, ಅಶೋಕ್ ಎಲಿ, ವೈಜಿನಾಥ ಹುಣಸಗೇರಿ, ಪ್ರಕಾಶ್ ಮಠಪತಿ, ನೀಲಮ್ಮ ರೂಗನ್, ಸಂಗೀತಾ ಗಣಾಚಾರಿ, ಜಗದೇವಿ ಚಿಮಕೋಡೆ, ಶಿವಕುಮಾರ ಪಾಖಾಲ್ ಉಪಸ್ಥಿತರಿದ್ದರು. ಚನ್ನಬಸಪ್ಪ ಹಂಗರಗಿ ಸ್ವಾಗತಿಸಿದರು. ಕದಳಿಶ್ರೀ ಅವಿನಾಶ್ ವಂದಿಸಿದರು.

# ಪಾಂಡುರಂಗ ದಿಂಡಿ

ಬೀದರ. ಜು. 11 : ಪ್ರತಿ ವರ್ಷದಂತೆ ಈ ವರ್ಷವು ಬೀದರ ನಗರದ ಚೌಬಾರಾ ಹತ್ತಿರದ ಶ್ರೀ ಪಾಂಡುರಂಗ ದೇವಸ್ಥಾನದಲ್ಲಿ ಆಷಾಡ ಏಕಾದಶಿ ನಿಮಿತ್ಯ ಶ್ರೀ ಪಾಂಡುರಂಗ ಪಲ್ಲಕ್ಕಿ ಮೆರವಣಿಗೆ ಪ್ರಾರಂಭವಾಗಿ ಸಾಯಂಕಾಲ ಶಹಾಗಂಜ ದ್ವಾರಕ್ಕೆ( ದಾಮಾಜಿ ಪಂಥ ಅಗಸಿ) ಆಗಮಿಸಿ ಮೊಸರಿನ ಗಡಗಿ(ದಹಿ ಹಂಡಿ) ಒಡೆಯಲಾಯಿತು.

ನಂತರ ಮಹಿಳೆಯರು, ಪುರುಷರು ಹಾಗೂ ಮಕ್ಕಳಿಂದ ಫುಗ್ಗಡಿ ಆಟ ಆಡಲಾಯಿತು.

ಮೆರವಣಿಗೆ ಸಮಯದಲ್ಲಿ ಅನೇಕ ಕಡೆಯಿಂದ ಭಜನೆ ಮಂಡಳಿರಿಂದ ಪಾಂಡುರಂಗನ ಭಜನೆಯೊಂದಿಗೆ ಸಾಗಿತು.

ಮುಖ್ಯರಸ್ತೆ, ವಿನಾಯಕ ಚೌಕ, ಚೌಬಾರಾ ಮೂಲಕ ಶ್ರೀ ಪಾಂಡುರಂಗ ದೇವಾಸ್ಥನದ ಮುಖ್ಯದ್ವಾರದಲ್ಲಿ ದಹಿ ಹಂಡಿ ಒಡೆದು ದೇವಸ್ಥಾನದ ಒಳಗಡೆ ಪ್ರವೇಶಿಸಲಾಯಿತು.

ಭಕ್ತರಿಗಾಗಿ ಸರಕಾರಿ ಬಾಲಕ ಬಾಲಕಿಯರ ಶಾಲಾ ಮೈದಾನದಲ್ಲಿ ಮಧ್ಯಾಹ್ನ 3:00 ಗಂಟೆಯಿಂದ 5:00 ಗಂಟೆಯವರೆಗೆ ಪ್ರಸಾದ ವಿತರಣೆ ಮಾಡಲಾಯಿತು.



ಈ ಸಂದರ್ಭದಲ್ಲಿ ದೇವಸ್ಥಾನದ ಅಧ್ಯಕ್ಷರಾದ ಡಿ.ವ್ಹಿ.ಸಿಂಧೋಲ, ಪ್ರಧಾನ ಕಾರ್ಯದರ್ಶಿಗಳಾದ ಶ್ರೀನಿವಾಸ ಪೋಲಾ, ಆಡಳಿತ ಮಂಡಳಿ ಮತ್ತು ಆರ್ಯ ವೈಶ್ಯ ಸಂಘದ ಪದಾಧಿಕಾರಿಗಳು, ಬಿಜೆಪಿ ನಗರ ಅಧ್ಯಕ್ಷ ಶಶಿ ಹೊಸಳ್ಳಿ, ನರೇಶ ಗೌಳಿ, ವಿರೇಶ ಸ್ವಾಮಿ, ಪ್ರಕಾಶ, ಸುನೀಲ ಗೌಳಿ, ಸುಭಾಷ ಪೋಲಾ, ಚಂದ್ರಶೇಖರ ಗಾದಾ, ಸಂಜು ಘನಾತೆ ಮುಂತಾದವರಿಗೆ ಶಾಲು ಹೊದಿಸಿ ಸನ್ಮಾನಿಸಲಾಯಿತು.

# ಯಾದಗಿರಿ ಮತಕ್ಷೇತ್ರದ ವಿದ್ಯುತ್ ಸಮಸ್ಯೆಗಳಿಗೆ ಕೂಡಲೇ ಸ್ಪಂದಿಸಿ: ಶಾಸಕ ತುನ್ನೂರು ಕಡಕ್ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ತಮ್ಮ ಕ್ಷೇತ್ರದ ವ್ಯಾಪ್ತಿಯ ಅನೇಕ ಊರುಗಳಲ್ಲಿ ವಿದ್ಯುತ್ ಸಮಸ್ಯೆಗಳು ಅನೇಕ ರೀತಿಯಲ್ಲಿ ಕಾಡುತ್ತಿವೆ. ಕೂಡಲೇ ಅಧಿಕಾರಿಗಳು ಎಚ್ಚುತ್ತು ಸಮಸ್ಯೆಗಳಿಗೆ ಸ್ಪಂದಿಸಬೇಕೆಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಜೆಸ್ಕಾಂ ಮತ್ತು ಕೆಪಿಟಿಸಿಎಲ್ ಅಧಿಕಾರಿಗಳಿಗೆ ಕಡಕ್ ಸೂಚನೆ ನೀಡಿದರು.

ಶುಕ್ರವಾರ ಇಲ್ಲಿನ ಜೆಸ್ಕಾಂ ಕಚೇರಿಯಲ್ಲಿ ಯಾದಗಿರಿ ವಿಧಾನ ಸಭಾ ಮತಕ್ಷೇತ್ರಕ್ಕೆ ಸಂಬಂಧಪಟ್ಟ ವಿದ್ಯುತ್ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಕರೆದಿದ್ದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ರೈತರಿಗೆ ಏಳು ತಾಸು ವಿದ್ಯುತ್ ಕಡ್ಡಾಯವಾಗಿ ನೀಡಬೇಕು, ವಿದ್ಯುತ್ ಕಂಬ, ತಂತಿಗಳು ಹಳೆಯದಾದಲ್ಲಿ ಹೊಸ ದನ್ನು ಅಳವಡಿಸುವ ಮೂಲಕ ಜನರಿಗೆ ಅನುಕೂಲಮಾಡಿಕೊಡಬೇಕೆಂದು ಹೇಳಿದರು.

ಟಿಸಿ ಸುಟ್ಟ ಕಡೆ ಕೂಡಲೇ ಅಳವಡಿಸಬೇಕು, ವಡಗೇರಾ ತಾಲೂಕು ಜೆಸ್ಕಾಂ ಕಚೇರಿಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ಅಧಿಕಾರಿ,ಸಿಬ್ಬಂದಿಗಳನ್ನು ನೇಮಕ ಮಾಡುವ ಮೂಲಕ ಜನರ ಸಮಸ್ಯೆಗಳಿಗೆ ಸ್ಪಂಧಿಸುವಂತೆ ಶಾಸಕರು ಸೂಚಿಸಿದರು.

ಹೊಸ ತಾಲೂಕು ವಡಗೇರಾದಲ್ಲಿ ಉಪವಿಭಾಗ ಕಚೇರಿ ಆರಂಭಿಸುವ ಕುರಿತು ಪ್ರಸ್ತಾವನೆ ಸಲ್ಲಿಸಿ ಅನೇಕ ತಿಂಗಳುಗಳೇ ಕಳೆದಿವೆ.ಅದು ಕೂಡಲೇ ಕಾರ್ಯಗತವಾಗುವಂತೆಯೇ ಕ್ರಮ



ತೆಗೆದುಕೊಳ್ಳಬೇಕು, ಗುರುಸಣಗಿ ಸಮೀಪದ ಗಡ್ಡೆಸೂಗುರು ಮತ್ತು ಅಡಕಬಂಡಲ್ ಗ್ರಾಮಗಳಲ್ಲಿ 110 ಕೆವಿ ಉಪ ಕೇಂದ್ರಗಳ ಕುರಿತಾದ ಪ್ರಸ್ತಾವನೆಯೂ ಬಹಳ ದಿನಗಳಿಂದ ಪೆಂಡಂಗ್ ಇದ್ದು ಅದು ಕೂಡಾ ಮಾಡುವಂತೆಯೇ ಶಾಸಕ ಪಾಟೀಲ್ ಕೆಪಿಟಿಸಿಎಲ್ ಮತ್ತು ಜೆಸ್ಕಾಂ ಅಧಿಕಾರಿಗಳಿಗೆ ಹೇಳಿದರು.

ಕೆಇಬಿ ಅಧಿಕಾರಿಗಳು ಯಾಕೆ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸುವುದಿಲ್ಲ, ಇರುವ ಸಮಸ್ಯೆಯನ್ನು ಬಿಟ್ಟು ಮಾಡುವ ಕೆಲಸವಾದರು ಬೇರೆ ಏನಿದೆ ನಿಮಗೆ, ಲೈನ್ ಮ್ಯಾನ್ ಗಳ ನಿರ್ವಹಣೆ, ಲೋಡ್ ಶೆಡ್ಡಿಂಗ್ ಸೇರಿದಂತೆ ನಗರ ವಿದ್ಯುತ್ ಕಂಬಗಳ, ವೈಯರ್ ಗಳ ಮೆಂಟೆನೆಸ್ ಮಾಡುವಲ್ಲಿ ಇಲಾಖೆ ದಾರಿತಪ್ಪುತ್ತಿದೆ ಎಂದು ಶಾಸಕರು ತಮ್ಮ ಅಸಮಾದಾನ ವ್ಯಕ್ತಪಡಿಸಿದರು.

ಸಭೆಯಲ್ಲಿ ಎಸ್ ಇ ಖಂಡಪ್ಪ, ಎಇಇಗಳಾದ ರಾಘವೇಂದ್ರ, ರಾಜೇಶ ಹಿಪ್ಪರಗಿ, ಶಂಕರ ಗುತ್ತಿ, ಸಂಜೀವಕುಮಾರ ಸೇರಿದಂತೆಯೇ ಕೆಪಿಟಿಸಿಎಲ್ ಮತ್ತು ಜೆಸ್ಕಾಂ ಅಧಿಕಾರಿ,ಸಿಬ್ಬಂದಿ ಇದ್ದರು.

**ಜನರ ಸಮಸ್ಯೆಗಳಿಗೆ ಸ್ಪಂದಿಸಿ:**ಬಾಕಿ ಇರುವ ಟೆ-ಂಡರ್ ಗಳನ್ನು ಶೀಘ್ರವಾಗಿ ಕರೆದು, ಉಳಿದ ಕಾರ್ಯಗಳನ್ನು ಪೂರೈಸಬೇಕು, ವಿನಾಕಾರಣ ವಿಳಂಬ ಮಾಡಿದ್ದಲ್ಲಿ ನಾನಂತು ಸುಮ್ಮನೆಕುರುವವನಲ್ಲ, ಯಾದಗಿರಿ ತಾಲೂಕು ಸೇರಿದಂತೆ ವಡಗೇರಾ, ನಾಯ್ಕಲ್ ಇತರೆ ಗ್ರಾಮಗಳಲ್ಲಿ ಇರುವ ಟಿಸಿ ಸಮಸ್ಯೆಗಳನ್ನು ಬಗೆಹರಿಸಿ, ವರದಿ ಸಲ್ಲಿಸಿ ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ ತುನ್ನೂರ್ ಅಧಿಕಾರಿಗಳಿಗೇ ಕಡಕ್ ಸೂಚನೆ ನೀಡಿದರು.


**ಪ್ರಶ್ನೆಗಳ ಸುರಿಮಳೆಗೈದ ಶಾಸಕರು:**ಪ್ರಗತಿ ಹೊಂದದೆ ಇರುವ ಕಾರ್ಯಗಳ ಬಗ್ಗೆ ಬೆಳಕು ಚೆಲ್ಲದ ನೀವು, ನಗರಕ್ಕೆ ಹೇಗೆ ಬೆಳಕು ನೀಡುತ್ತೀರಾ ಎಂದು ಶಾಸಕ ತನ್ನೂರ್ ಗರಂ ಆದರು.

ಅಧಿಕಾರಿಗಳ ಉತ್ತರಕ್ಕೆ ಸಮಾಧಾನವಾಗದ ಶಾಸಕ ತುನ್ನೂರ್ ಸ್ವತಃ ತಾವೇ ಕ್ಷೇತ್ರ ಮಾಡಿರುವ ವರದಿಯನ್ನು ಅಧಿಕಾರಿಗಳ ಮುಂದಿಟ್ಟು ಗ್ರಾಮೀಣ ಭಾಗದಲ್ಲಿ ವಿದ್ಯುತ್ ಸಮಸ್ಯೆಗಳ ಕುರಿತು ಪ್ರಶ್ನಿಸಿದರು.

**ಜನರ ಸಮಸ್ಯೆಗೆ ಧ್ವನಿಯಾದರು:**ಇನ್ನು ಸಭೆಯಲ್ಲಿ ಹಾಜರಿದ್ದ ಕೆಲ ಮುಖಂಡರು, ಯಾದಗಿರಿ ನಗರ ಸೇರಿದಂತೆ ಗ್ರಾಮೀಣ ಭಾಗದ ವಿದ್ಯುತ್ ಸಮಸ್ಯೆಗಳ ಬಗ್ಗೆ ಶಾಸಕರಲ್ಲಿ ಹಾಗೂ ಸಭೆಗೆ ತಿಳಿಸಿದಾಗ ತಕ್ಷಣ ಶಾಸಕ ತುನ್ನೂರ್ ಅಧಿಕಾರಿಗಳಿಗೆ ಸೂಚಿಸಿ ಒಂದು ವಾರದಲ್ಲಿ ಸಮಸ್ಯೆಗಳನ್ನು ಪರಿಹರಿಸಿ ವರದಿ ಸಲ್ಲಿಸಬೇಕು, ಬಗೆಹರಿಯದೆ ಸಮಸ್ಯೆಗಳಿಗೆ ತಾತ್ಕಾಲಿಕ ಪರಿಹಾರವನ್ನು ನೀಡಿ ಎಂದರು.

**ಕೂಡಲೇ ದುರಸ್ತಿಮಾಡಿ:**ಯಾದಗಿರಿ ನಗರದ ಅಜೀಜ್ ಕಾಲೋನಿಯ ಉರ್ದು ಹಿರಿಯ ಪ್ರಾಥಮಿಕ ಶಾಲೆಯ ಹಿಂದುಗಡೆ ರಸ್ತೆ ನಡುವೆ ಇರುವ ವಿದ್ಯುತ್ ಕಂಬ ತೆರವಿಗೆ ವ್ಯಕ್ತಿಯೊಬ್ಬರು ನೀಡಿದ ಮಾಹಿತಿಯನ್ನು ಪರಿಶೀಲನೆ ನಡೆಸುವಂತೆ ಜೆಇ ದೇವಪ್ಪ ಅವರಿಗೆ ಶಾಸಕರು ಸೂಚಿಸಿದರು.

# ದೇವರು ಸರ್ವೋತ್ತಮ ಎಂಬ ಅರಿವೇ ಗುರು : ಎಸ್.ಎಸ್ ಜುಗೇರಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಪ್ರಾಚೀನ ಕಾಲದಿಂದ ನಾವೆಲ್ಲರೂ ಹಿಂದೂ ಸನಾತನ ಸಂಸ್ಕೃತಿಯಲ್ಲಿ ಗುರುವನ್ನು ದೇವರು ಎಂದು ಪರಿಗಣಿಸುತ್ತೇವೆ, ಗುರು-ಶಿಷ್ಯರ ಸಮ್ಮಿಲನವೇ ಗುರು ಪೂರ್ಣಿಮಾ ದಿನವಾಗಿದೆ ಎಂದು ನಿವೃತ್ತ ಪ್ರಾಂಶುಪಾಲ ಎಸ್.ಎಸ್ ಜುಗೇರಿ ಹೇಳಿದರು.

ಇಲ್ಲಿಗೆ ಸಮೀಪದ ಸೂಗೂರ (ಎನ್) ಗ್ರಾಮದಲ್ಲಿರುವ ಶ್ರೀ ಭೋಜಲಿಂಗೇಶ್ವರ ಮಠದ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ ಗುರುಪೂರ್ಣಿಮೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಗುರು-ಶಿಷ್ಯರ ಸಂಬಂಧ ಅಗಾದವಾದ ಮಹತ್ವವಿದೆ, ಗುರು ಸದಾ ಶಿಷ್ಯರಿಗೆ ಸನ್ಮಾರ್ಗ ಬೋಧನೆ ಜೊತೆಗೆ ಕಾಲ-ಕಾಲಕ್ಕೆ ಅಗತ್ಯ ಮಾರ್ಗದರ್ಶನ ನೀಡುತ್ತಿರುವ ಪರಿಣಾಮ ಇಂದು ಸಮಾಜದಲ್ಲಿ ಮಠ-ಮಾನ್ಯಗಳಿಗೆ ಹೆಚ್ಚಿನ ಮಾನ್ಯವಿದೆ ಎಂದು ತಿಳಿಸಿದರು.

ಗುರುಗಳು ಕೊಟ್ಟ ಜ್ಞಾನಕ್ಕೆ ನಾವೂ ಏನನ್ನಾದರೂ ಹಿಂತಿರುಗಿ ಕೊಡುವುದಾದರೇ ಅದು ನಮ್ಮ ಆತ್ಮಸಮರ್ಪಣೆ ಕೃತಜ್ಞತಾಪೂರ್ವಕ ನಮಸ್ಕಾರಗಳು, ಗುರುಗಳು ಪ್ರಸನ್ನರಾಗಿ ಆಶೀರ್ವದಿಸಿದರೇ ಅದರಿಂದ ಸಿಗುವ ಫಲವೇ ಜ್ಞಾನ, ಆ ತತ್ವಜ್ಞಾನವೇ ಪ್ರಪಂಚಕ್ಕೆ ಬೆಳಕಾಗಿ ಪಸರಿಸಿ, ಬದಲಾವಣೆಗೆ ಪ್ರೇರಣೆ ಸಿಗುತ್ತದೆ ಎಂದು ಅಭಿಪ್ರಾಯಪಟ್ಟರು. ಸಾಮರಸ್ಯದ ಧಾರ್ಮಿಕ ಕ್ಷೇತ್ರವಾಗಿರುವ ಭೋಜಲಿಂಗೇಶ್ವರ ಮಠ ಇಲ್ಲಿಗೆ ಶ್ರದ್ದೆಯಿಂದ ಆಗಮಿಸುವ ಭಕ್ತರ ಸಂಕಷ್ಟಗಳನ್ನು ಭೋಜಲಿಂಗೇಶ್ವರರು ದೂರ ಮಾಡುವ ಮೂಲಕ ಸಮಾನತೆಯ ಸಮಾಜ ನಿರ್ಮಾಣಕ್ಕೆ ಯತ್ನಿಸಿದರು, ಅವರ ಆಶಯದಂತೆ ಹಿರಗಪ್ಪ ತಾತನವರು ಸದಾ ಕ್ರೀಯಾಶೀಲರಾಗಿ ತ್ರಿವಿಧ ದಾಸೋಹಗಳ ಮೂಲಕ ಸಮಾಜದಲ್ಲಿ ಜಾಗೃತಿ ಮೂಡಿಸಿ, ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ ಎಂದು ತಿಳಿಸಿ, ಶ್ರೀ ಮಠದ ಚಟುವಟಿಕೆಗಳನ್ನು ವಿವರಿಸಿದರು.

ಶ್ರೀ ಮಠದ ಪೀಠಾಧಿಪತಿ ಹಿರಗಪ್ಪತಾತನವರು ಆರ್ಶೀವಚನ ನೀಡಿ, ಇಂದು ನಾವೆಲ್ಲರೂ ನಿಸರ್ಗದೊಂದಿಗೆ ಸಮನ್ವಯತೆಯಿಂದ, ಶಾಂತಿ-ಸಾಮರಸ್ಯದಿಂದ ಜೀವನ ಸಾಗಿಸಿದಾಗ ಮಾತ್ರ ನಮ್ಮೆಲ್ಲರ ಬದುಕು ಶಾಂತಿ, ನೆಮ್ಮದಿ, ಸಂತಸ ಭಾವನೆಯಿಂದ ಕೂಡಿರುತ್ತದೆ ಎಂದು ನುಡಿದರು.

ಇಂದು ನಾವೂ ಸಮಾಜದಲ್ಲಿರುವ ಯುವ ಜನತೆಯನ್ನು ಒಳ್ಳೆಯ ಮಾರ್ಗದಲ್ಲಿ ಅವರ ಬದುಕು ಸಾಗಿಸಲು ಶ್ರಮಿಸುವುದು ಅಗತ್ಯವಾಗಿದೆ, ಅವರು ಮಾಡುವ ಸಮಾಜಮುಖಿ ಕಾರ್ಯಗಳಿಂದ ಮಾತ್ರ ಎಲ್ಲರಿಗೂ ಗೌರವ ಸಿಗುತ್ತದೆ, ಅವರು ಕೂಡ ಜಾಗೃತರಾಗಿ ತಮ್ಮ ಜವಾಬ್ದಾರಿಗಳನ್ನು ಅರಿತು ಬದುಕು ಸಾಗಿಸಲಿ ಎಂದು ಸಲಹೆ ನೀಡಿದರು. ವೇದಿಕೆ ಮೇಲೆ ಮಾತೋಶ್ರೀ ತುಳುಜಮ್ಮ, ಭೀಮರಡ್ಡಿ ಪಾಟೀಲ್ ಕುರಾಳ, ಈರಣ್ಣ ಎಲ್ಐಸಿ ಬಲಕಲ್, ಹೊನ್ನಪ್ಪ ಮುಸ್ಟೂರ, ಮಹಾಂತೇಶ ಗೌಡ ಗೌಡರ್ ಲಿಂಗಸೂಗೂರ, ಬಸವರಾಜಪ್ಪ ಸಾಹು ಕುರಕುಂದಾ, ಮಲ್ಲಿಕಾರ್ಜುನ ಕಿವಿಡೇರಬಂದಳ್ಳಿ, ಭೀರೇಶ ಚಿರತೆನೋರ, ಶರಣಪ್ಪ ಚಟಗೇರಾ, ಶರಣು ಬೋಳಾರಿ, ರಾಜು ಹತ್ತಿಕುಣಿ, ವಿಶ್ವನಾಥರಡ್ಡಿ ಸೂಗೂರ, ಸಿದ್ದು ನಾಯಕ ಹತ್ತಿಕುಣಿ, ಬಸವರಾಜ ಹವಾಲ್ದಾರ. ರವಿ ಶೀಲವಂತ, ಪ್ರಭು ಹೂಗಾರ, ಮೋಹನ ರಾಠೋಡ, ಸುರೇಶ ಆಕಳ, ಮಲ್ಲಯ್ಯ ಕಸಬಿ, ಮಲ್ಲಣ್ಣ ಗುಳಗಿ ಸೇರಿದಂತೆ ಸಹಸ್ರಾರು ಭಕ್ತರು ಭಾಗವಹಿಸಿದ್ದರು.

# ಜನಸಂಖ್ಯೆ ನಿಯಂತ್ರಿಸುವಲ್ಲಿ ಸಮುದಾಯದ ಪಾತ್ರ ಮುಖ್ಯ : ಡಾ. ಬಿರಾದರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಪ್ರಸಕ್ತ ದಿನಗಳಲ್ಲಿ ನಾವೂ ದೇಶದಲ್ಲಿ ಹಲವಾರು ಕ್ಷೇತ್ರಗಳಲ್ಲಿ ಪ್ರಗತಿ ಸಾಧಿಸುತ್ತಿದ್ದರು, ಒಂದು ಕಡೆ ನಮ್ಮ ಆರೋಗ್ಯ ನಿರ್ಲಕ್ಷ ಹಾಗೂ ಹೆಚ್ಚುತ್ತಿರುವ ಜನಸಂಖ್ಯೆಯಿಂದ ಮಾನವ ಸಂಪನ್ಮೂಲ ಕುಸಿಯುತ್ತಿದೆ, ಕಾರಣ ಜನಸಂಖ್ಯೆ ನಿಯಂತ್ರಿಸಲು ಗಮನ ಹರಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ಡಾ. ಮಹೇಶ ಬಿರಾದರ ಹೇಳಿದರು.

ತಾಲ್ಲೂಕಿನ ಕೌಳೂರ ಗ್ರಾಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಾಲ್ಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ (ಇಇಸಿ) ವಿಭಾಗ ಯಾದಗಿರಿ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಸಂಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಜನಸಂಖ್ಯಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ದೇಶದಲ್ಲಿ ಇಂದು 140 ಕೋಟಿಗೂ ಅಧಿಕ ಜನಸಂಖ್ಯೆಯಿಂದ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ನಿರುದ್ಯೋಗ ಸಮಸ್ಯೆಗಳು ಉದ್ಭವಿಸುತ್ತವೆ, ಕಾರಣ ಎಲ್ಲರೂ 1-2 ಮಕ್ಕಳನ್ನು ಪಡೆದು ಅವರಿಗೆ ಉತ್ತಮ ಶಿಕ್ಷಣ ಒದಗಿಸಿ ಎಂದು ತಿಳಿಸಿ, ಇನ್ನೂ ಗ್ರಾಮೀಣ ಭಾಗದಲ್ಲಿ ಲಿಂಗ ಸಮಾನತೆ ಕಾಣಬೇಕು, ಹೆಣ್ಣು ಮಕ್ಕಳ ಬಗ್ಗೆ ತಾತ್ಸಾರ ಮನೋಭಾವನೆಪೋಷಕರಲ್ಲಿರುವುದನ್ನು ಕಾಣುತ್ತಿದ್ದೇವೆ, ಇದು ಸರಿಯಲ್ಲ, ಇಂದು ದೇಶದಲ್ಲಿ ಮಹಿಳೆಯರು ಕೂಡ ಪುರುಷ ಸಮಾನರಾಗಿ ಎಲ್ಲಾ ಕ್ಷೇತ್ರಗಳಲ್ಲಿ ಅಭಿವೃದ್ಧಿ ಸಾಧಿಸಿದ್ದಾರೆ, ಅವರಿಗೆ ತಪ್ಪದೇ ಶಿಕ್ಷಣ ಒದಗಿಸಿ ಎಂದು ಸಲಹೆ ನೀಡಿದರು.

ಜಿಲ್ಲೆಯಲ್ಲಿ ಅನಕ್ಷರತೆ ಪರಿಣಾಮ ಅಲ್ಲಲ್ಲಿ ನಾವೂ ಇನ್ನೂ ಬಾಲ್ಯವಿವಾಹ ನಡೆಯುತ್ತಿರುವ ಘಟನೆಗಳನ್ನು ಗಮನಿಸಿದ್ದೇವೆ, ದಯವಿಟ್ಟು ಯಾವುದೇ ಕಾರಣ-ಕ್ಕೂ ನಿಮ್ಮ ಹೆಣ್ಣು ಮಕ್ಕಳಿಗೆ 20 ವಯಸ್ಸು ತುಂಬುವ ಮೊದಲು ಮದುವೆ ಮಾಡಬೇಡಿ, ಇದರಿಂದ ಅವರ ಹಾಗೂ ಅವರು ಹೆತ್ತ ಮಕ್ಕಳ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ, ಕೆಲ ಸಂದರ್ಭಗಳಲ್ಲಿ ಅವರು ಪ್ರಾಣ ಕಳೆದುಕೊಳ್ಳುತ್ತಾರೆ, ಈ ನಿಟ್ಟಿನಲ್ಲಿ ಇದರ ಬಗ್ಗೆ ಆರೋಗ್ಯ ಇಲಾಖೆ ಸಿಬ್ಬಂದಿಗಳು ಜನರಲ್ಲಿ ಮೂಡಿಸಬೇಕು ಎಂದು ಸೂಚಿಸಿದರು.

ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಸಂಜೀವಕುಮಾರ ಮಾತನಾಡಿ, ಇಂದು ನಾವೂ ನಿಸರ್ಗದೊಂದಿಗೆ ಹೊಂದಾಣಿಕೆ ಮಾಡಿಕೊಂಡು ಕ್ರೀಯಾಶೀಲವಾಗಿ ಜೀವನ ಸಾಗಿಸುವದು ಅಗತ್ಯವಾಗಿದೆ, ಕ್ಷಯರೋಗ ನಿಯಂತ್ರಣಕ್ಕೆ ನಾವೂ ಸಾಕಷ್ಟು ಪ್ರಯತ್ನ ಪಟ್ಟರು ಜಿಲ್ಲೆಯಲ್ಲಿ ಇಲ್ಲಿಯವರೆಗೆ 60 ಜನರು ಮರಣ ಹೊಂದಿದ್ದಾರೆ, ಜನರು ಇದರ ಬಗ್ಗೆ ನಿರ್ಲಕ್ಷವಹಿಸದೇ ವೈಧ್ಯರ ಬಳಿ ತಪಾಸಣೆ ಮಾಡಿಕೊಂಡು ಸೂಕ್ತ ಚಿಕಿತ್ಸೆ ಪಡೆದು, ರೋಗ ಕುಟುಂಬದವರಿಗೆ ಹಾಗೂ ನೆರೆ-ಹೊರೆಯವರಿಗೆ ಹರಡದಂತೆ ಎಚ್ಚರಿಕೆವಹಿಸಬೇಕೆಂದು ತಿಳಿದರು.

ತಾಲ್ಲೂಕಾ ಆರೋಗ್ಯ ಅಧಿಕಾರಿ ಡಾ. ಹಣಮಂತರಡ್ಡಿ ಮದ್ನಿ ಮಾತನಾಡಿ, ಆರೋಗ್ಯ ಇಲಾಖೆಯಿಂದ ಉತ್ತಮ ಸೇವೆ ಒದಗಿಸುವ ದೃಷ್ಟಿಯಿಂದ ಗ್ರಾಮದಲ್ಲಿ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರ ನಿರ್ಮಾಣ ಮಾಡಲಾಗಿದೆ, ಬರುವ ದಿನಗಳಲ್ಲಿ ಸೂಕ್ತ ಸಿಬ್ಬಂದಿಗಳು ಸೇರಿದಂತೆ ಎಲ್ಲಾ ಸೌಕರ್ಯಗಳನ್ನು ಒದಗಿಸಲಾಗುವುದು ಎಂದು ತಿಳಿಸಿ, ಹೆಚ್ಚುತ್ತಿರುವ ಜನಸಂಖ್ಯೆಯಿಂದ ಆಗುತ್ತಿರುವ ಪರಿಣಾಮಗಳನ್ನು ವಿವರಿಸಿದರು.

ಮಳೆಗಾಲದಲ್ಲಿ ಗ್ರಾಮೀಣ ಭಾಗದಲ್ಲಿ ಜನರು ಪರಿಸರ ಸ್ವಚ್ಚತೆಗೆ ಆದ್ಯತೆ ನೀಡಿ, ಆರೋಗ್ಯ ಇಲಾಖೆಯ ನಿಯಮಗಳನ್ನು ಪಾಲಿಸಿ, ಕಾಲರಾ, ಮಲೇರಿಯಾ, ಡೆಂಗ್ಯೂ ರೋಗಗಳಿಂದ ದೂರವಿರುವ ಮೂಲಕ ಪೌಷ್ಟಿಕ ಆಹಾರ ಸೇವಿಸಿ ಎಂದು ತಿಳಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರ ವೈಧ್ಯಾಧಿಕಾರಿ ಡಾ. ಜ್ಯೋತಿ ಕಟ್ಟಿಮನಿ ಮಾತನಾಡಿ, ಯುವತಿಯರು ಹಾಗೂ ಮಹಿಳೆಯರಿಗೆ ಆರೋಗ್ಯ ರಕ್ಷಣೆ ಬಗ್ಗೆ ವಿವರಿಸಿದರು.

ವೇದಿಕೆ ಮೇಲೆ ಗ್ರಾಮ ಪಂಚಾಯತ ಅಧ್ಯಕ್ಷೆ ಹಣಮಂತಿ, ಡಾ. ಸುಪ್ರಜಾ, ಡಾ. ಸುನೀಲಕುಮಾರ, ಲಕ್ಷ್ಮೀ ಮುಂಡಾಸ್, ಪಿಡಿಒ ಜಯಶ್ರೀ, ಬಸವರಾಜಪ್ಪ ಮರಲಿಂಗಪ್ಪ ಜಿನಕೇರಾ, ಮಲ್ಲಪ್ಪ, ಶರಣಪ್ಪ, ಸಾಬರಡ್ಡಿ ಕೌಳೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ವೈಧ್ಯರ ತಂಡ ಜನರ ಆರೋಗ್ಯ ತಪಾಸಣೆ ಮಾಡಿ, ಸಲಹೆ ಸೂಚನೆ ನೀಡಿದರು.

ಸಿಹೆಚ್ಒ ಕ್ರಿಸ್ಟೋಫರ್ ಸ್ವಾಗತಿಸಿದರೇ, ತಾಲ್ಲೂಕಾ ಆರೋಗ್ಯ ಶಿಕ್ಷಣಾಧಿಕಾರಿ ತುಳಸಿರಾಮ ನಿರೂಪಿಸಿ, ವಂದಿಸಿದರು.

# ನಿವೃತ್ತ ನೌಕರರಿಗೆ ಪಿಂಚಣಿ ಪರಿಷ್ಕರಣೆ,ತುಟ್ಟಿಭತ್ತೆ ಮಂಜೂರಿಗೆ ಒತ್ತಾಯಿಸಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು:ನಿವೃತ್ತ ನೌಕರರಿಗೆ ಪಿಂಚಣಿ ಯೋಜನೆಯನ್ನು ಪರಿಷ್ಕರಣೆ ಮಾಡಬೇಕು ಹಾಗೂ ತುಟ್ಟಿಭತ್ತೆಯನ್ನು ಮಂಜೂರಿ ಮಾಡಬೇಕು ಎಂದು ಒತ್ತಾಯಿಸಿ ಪ್ರಧಾನಮಂತ್ರಿಗಳಿಗೆ ಬರೆದ ಮನವಿಯನ್ನು ಸಹಾಯಕ ಆಯುಕ್ತರ ಮೂಲಕ ನಿವೃತ್ತ ನೌಕರರ ಸಂಘದ ತಾಲೂಕಾಧ್ಯಕ್ಷರಾದ ಅಮರೇಶಪ್ಪ ಹೂನೂರು ನೇತೃತ್ವದಲ್ಲಿ ಮನವಿ ಸಲ್ಲಿಸಿ ಕ್ರಮಕ್ಕೆ ಒತ್ತಾಯಿಸಿದರು

ಈ ಮೊದಲು ಪಟ್ಟಣದ ಈಶ್ವರ ದೇವಸ್ಥಾನದಲ್ಲಿ ಸಭೆ ಸೇರಿದ ನಿವೃತ್ತ ನೌಕರರು ಮೊದಲು ಸಹಿ ಸಂಗ್ರಹ ಮಾಡಿದರು ನಂತರ ಸಹಾಯಕ ಆಯುಕ್ತರ ಕಾರ್ಯಾಲಯಕ್ಕೆ ತೆರಳಿ ಪ್ರಧಾನಿಗೆ ಬರೆದ ಮನವಿಯನ್ನು ಸಲ್ಲಿಸಿ ನಿವೃತ್ತರಿಗೆ ಪಿಂಚಣಿಯಲ್ಲಿ ಅನ್ಯಾಯವಾಗಿದ್ದು ಸರಿಪಡಿಸಬೇಕು ತುಟ್ಟಿಭತ್ತೆಯನ್ನು ಮಂಜೂರಿ ಮಾಡಬೇಕು ಎಂದು ಒತ್ತಾಯಿಸಿದರು

ಅವರು ಮಾತನಾಡುತ್ತ ಕೇಂದ್ರ ಸರ್ಕಾರದಿಂದ 2004 ರಲ್ಲಿ ಹೊಸ ಪಿಂಚಣಿಯನ್ನು ಜಾರಿಗೆ ತರಲಾಯಿತು. ಅದೇ




ರೀತಿ ದೇಶದ ಎಲ್ಲಾ ರಾಜ್ಯಗಳು ಕೇಂದ್ರ ಸರ್ಕಾರದ ಮಾದರಿಯಲ್ಲಿ ಹೊಸದಾಗಿ ಸರ್ಕಾರಿ ಸೇವೆಗೆ ನೇಮಕಗೊಳ್ಳುವ ನೌಕರರಿಗೆ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೆ ತರಲಾಗಿದೆ.

ಇದರಿಂದ ಸರ್ಕಾರಿ ನೌಕರರು, ನಿವೃತ್ತಿ ಹೊಂದುವ ಸಂದರ್ಭದಲ್ಲಿ ಬರಬೇಕಾದ ಆರ್ಥಿಕ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರಬೇಕೆಂದು ಸಾಕಷ್ಟು ಹೋರಾಟಗಳನ್ನು ಮಾಡಿದರೂ ಸರ್ಕಾರ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತಂದಿರುವುದಿಲ್ಲ. ಮುಂದಿನ ದಿನಗಳಲ್ಲಿ ಸರ್ಕಾರಿ ಸೇವೆಯಿಂದ ನೌಕರರು ನಿವೃತ್ತಿ ಹೊಂದಿದಾಗ ಅವರಿಗೆ ಹಳೆ ಪಿಂಚಣಿಯ ಆರ್ಥಿಕ ಸೌಲಭ್ಯಗಳು ದೊರೆಯುವುದಿಲ್ಲ. ನಿವೃತ್ತಿಯಾದ ಸರ್ಕಾರಿ ನೌಕರರಿಗೆ ಮತ್ತು ಕುಟುಂಬ ಪಿಂಚಣಿದಾರರಿಗೆ ಆರ್ಥಿಕ ಸಂಕಷ್ಟವುಂಟಾಗದಂತೆ ಹಳೆ ಪಿಂಚಣಿ ಜಾರಿಯಾದರೆ ಹೆಚ್ಚು ಅನುಕೂಲವಾಗುತ್ತದೆ ಎಂದರು .ಈ ಸಂದರ್ಭದಲ್ಲಿ ಸರ್ಕಾರಿ ನಿವೃತ್ತ ನೌಕರರ ಸಂಘದ ಉಪಾಧ್ಯಕ್ಷ ಹಾಜಿಮಲಂಗ ಬಾಬಾ, ಹನುಮಂತಪ್ಪ ಮೇಟಿ, ಶರಣಬಸವರಾಜ ನಾಡಗೌಡ, ಸಹಕಾರಿ ಸಂಘದ ಅಧ್ಯಕ್ಷರು ಎಂ ಜಿ ಹಿರೇಮಠ, ಸುರೇಶ್ ಕುಲಕರ್ಣಿ ಜೈಸಿಂಗ್, ಮೆಹಿಬೂದ ಬೇಗಂ, ಯಲ್ಲಪ್ಪ, ಭೀಮಣ್ಣನಾಯ, ಹಾಗೂ ಎಲ್ಲಾ ಪದಾಧಿಕಾರಿಗಳು ಸದಸ್ಯರು ಸೇರಿದಂತೆ ಇದ್ದರು.

# ತಾಲೂಕು ಆಸ್ಪತ್ರೆ 200 ಹಾಸಿಗೆಗಳ ಜಿಲ್ಲಾಸ್ಪತ್ರೆ ಮಂಜೂರು ಮಾಡಲು ಒತ್ತಾಯ – ಕರುವೇ ಸ್ವಾಭಿಮಾನಿ ಸೇನೆ ಮನವಿ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು, ಜುಲೈ 11:ಲಿಂಗಸುಗೂರು ತಾಲೂಕಿನ ಜನತೆಗೆ ಅತ್ಯಂತ ಅಗತ್ಯವಾದ 200 ಹಾಸಿಗೆಗಳ ಸಾಮರ್ಥ್ಯದ ಜಿಲ್ಲಾಸ್ಪತ್ರೆಯನ್ನು ಮಂಜೂರು ಮಾಡುವಂತೆ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ (ರಿ) ಲಿಂಗಸುಗೂರು ತಾಲೂಕು ಘಟಕದ ವತಿಯಿಂದ ಮಾನ್ಯ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಹಿಂದೆ ಲಿಂಗಸುಗೂರಿಗೆ ಮಂಜೂರಾದ 200 ಹಾಸಿಗೆಗಳ ಜಿಲ್ಲಾಸ್ಪತ್ರೆ ಯೋಜನೆಯನ್ನು ಸಿಂಧನೂರಿಗೆ ವರ್ಗಾಯಿಸಿದ ಸರ್ಕಾರದ ನಿರ್ಧಾರವನ್ನು ಸಂಘಟನೆ ಖಂಡಿಸಿದ್ದು, ತಾಲ್ಲೂಕಿನ ಜನತೆಗೆ ಸಮರ್ಪಕ ವೈದ್ಯಕೀಯ ಸೌಲಭ್ಯ ಖಾತರಿಪಡಿಸಲು ಮೂಲ ಸ್ಥಳದಲ್ಲಿಯೇ ಆಸ್ಪತ್ರೆ ಸ್ಥಾಪನೆ ಅಗತ್ಯವಿದೆ ಎಂದು ಒತ್ತಾಯಿಸಿದೆ.

ಸರ್ಕಾರವು ತಾತ್ಕಾಲಿಕವಾಗಿ 50 ಹಾಸಿಗೆಗಳ ಕ್ರಿಟಿಕಲ್ ಕೇರ್ ಯುನಿಟ್ (Critical Care Unit) ಮಂಜೂರು ಮಾಡಿದ ವಿಚಾರವನ್ನು ಸ್ವಾಗತಿಸಿದ್ದು, ಆದರೆ ಇದನ್ನು ಮೂಲ 200 ಹಾಸಿಗೆಗಳ ಪ್ರಸ್ತಾವನೆಯ ಬದಲಿ ಎಂದು ಪರಿಗಣಿಸಬಾರದು ಎಂದು ಮನವಿಯಲ್ಲಿ ಹೇಳಲಾಗಿದೆ.

ಕ್ರಿಟಿಕಲ್ ಕೇರ್ ಘಟಕವನ್ನು ಪಟ್ಟಣದ ಹೊರಭಾಗದಲ್ಲಿ ಸ್ಥಾಪಿಸುವ ಪ್ರಸ್ತಾವದ ಬದಲಾಗಿ, ಲಿಂಗಸುಗೂರು ಪಟ್ಟಣದ ಪ್ರವಾಸಿ ಮಂದಿರ ಆವರಣದಲ್ಲಿ ಸ್ಥಾಪನೆ ಮಾಡಬೇಕು ಹಾಗೂ ಪ್ರವಾಸಿ ಮಂದಿರವನ್ನು ಪಟ್ಟಣದ ಹೊರಭಾಗಕ್ಕೆ ಸ್ಥಳಾಂತರಿಸಬೇಕು ಎಂಬ ಆಗ್ರಹವನ್ನೂ ಮನವಿಯಲ್ಲಿ ಸೂಚಿಸಲಾಗಿದೆ.

ಇಲ್ಲವಾದಲ್ಲಿ ತಾಲ್ಲೂಕು ಜನತೆ ಮತ್ತೊಮ್ಮೆ ಉಗ್ರ ಹೋರಾಟಕ್ಕೆ ಮುಂದಾಗಬೇಕಾಗುತ್ತದೆ" ಎಂದು ಕರುವೇ ಸ್ವಾಭಿಮಾನಿ ಸೇನೆಯ ಲಿಂಗಸುಗೂರು ತಾಲೂಕು ಅಧ್ಯಕ್ಷ ಜಿಲಾನಿ ಪಾಷಾ ಎಚ್ಚರಿಸಿದರು. ಈ ಸಂದರ್ಭದಲ್ಲಿ ತಿಮ್ಮನ ಗೌಡ ಪೊಲೀಸ್ ಪಾಟೀಲ್ ಪರಮಣ್ಣ ನನ್ನೆಸಾಬ ಅಲ್ಲಾಭಕ್ಷ ಮನಿಯಾರ ಅಜೀಮ್ ಕರವೇ ಕಾರ್ಯ ಕರ್ತರು ಇದ್ದರು.

ಖ್ಯಾತ ಸಂಖ್ಯಾಶಾಸ್ತ್ರಜ್ಞ ಮಹಾಲ್ ನೋಬಿಸ್ ಜನ್ಮದಿನಾಚರಣೆ ಅಂಗವಾಗಿ ಸಾಂಖ್ಯಿಕ ದಿನಾಚರಣೆ

# ದೇಶದ ಪ್ರಗತಿಯಲ್ಲಿ ಅಂಕಿ ಅಂಶಗಳು ಬಹುಮುಖ್ಯ: ನೈಜ ಅಂಕಿ ಅಂಶಗಳನ್ನು ಸಂಗ್ರಹಿಸಿ ನೆರವಾಗಿ

ಯಾದಗಿರಿ:ಜು:11- ಖ್ಯಾತ ಸಂಖ್ಯಾಶಾಸ್ತ್ರಜ್ಞ ಶ್ರೀ ಪ್ರಶಾಂತ ಚಂದ್ರಮಹಾಲ್ ನೋಬಿಸ್ ಅವರ ಜನ್ಮ ದಿನಾಚರಣೆ ಅಂಗವಾಗಿ ಸಾಂಖ್ಯಿಕ ದಿನಾಚರಣೆಯನ್ನು ನಗರದ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು ಹಾಗೂ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿ ಇವರ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಲಾಗಿದ್ದ ಕಾರ್ಯಕ್ರಮದಲ್ಲಿ ಪ್ರಶಾಂತ ಚಂದ್ರಮಹಾಲ್ನೋಬಿಸ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಅರ್ಪಿಸಲಾಯಿತು. ಕಾರ್ಯಕ್ರಮದ ಅಂಗವಾಗಿ ನಿವೃತ್ತ ಹಿರಿಯ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಸತ್ಕರಿಸುವ ಮೂಲಕ ಅರ್ಥಪೂರ್ಣವಾಗಿ ಈ ದಿನಾಚರಣೆ ಆಚರಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಜಿ.ಪಂ.ಮುಖ್ಯ ಯೋಜನಾಧಿಕಾರಿ ಕೆ.ಕುಮುಲಯ್ಯ ಅವರು,,ಆಡಳಿತ ಮತ್ತು ಅಭಿವೃದ್ಧಿಯಲ್ಲಿ ದೇಶವನ್ನು ಮುಂಚೂಣಿಗೆ ತರಲು

ಅಂಕಿ ಅಂಶಗಳು ಪ್ರಮುಖ ಪಾತ್ರ ವಹಿಸುತ್ತವೆ. ಕೃಷಿ, ನೀರಾವರಿ, ಜನಗಣತಿ, ಕೈಗಾರಿಕಾ ಸಮೀಕ್ಷೆ ಹೀಗೆ ವಿವಿಧ ಅಂಕಿ ಅಂಶಗಳ ನೈಜ ಸಂಗ್ರಹಣೆ ಮುಖ್ಯ.ಅದರಂತೆ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ಆಯವ್ಯಯ ಮತ್ತು ಕೇಂದ್ರದಿಂದ ಗ್ರಾಮ ಪಂಚಾಯತ್ ವರೆಗಿನ ಅನುದಾನ ಹಂಚಿಕೆಯಲ್ಲಿ ಅಂಕಿ ಅಂಶಗಳು ಪ್ರಮುಖವಾಗಿವೆ.

ಈ ಹಿನ್ನೆಲೆಯಲ್ಲಿ ಅಂಕಿ ಸಂಖ್ಯೆ ಇಲಾಖೆ ಅಧಿಕಾರಿಗಳು ನೈಜ, ವಾಸ್ತವಿಕ ಅಂಕಿ ಅಂಶಗಳನ್ನು ಸಂಗ್ರಹಿಸಿ ನೀಡಬೇಕು.ತಪ್ಪು ಮಾಹಿತಿಗಳು ಯೋಜನೆಗಳ ತಪ್ಪು ರೂಪುರೇಷೆಗೆ ಕಾರಣವಾಗುತ್ತವೆ ಎಂದು ಹೇಳಿ ಮಹಾಲ್ ನೋಬಿಸ್ ಅವರ ಕೊಡುಗೆ ಸ್ಮರಿಸಿದರು.

ಪದವಿ ಕಾಲೇಜ್ ನ ಅರ್ಥಶಾಸ್ತ್ರ ಉಪನ್ಯಾಸಕರಾದ ಶ್ರೀ ಪ್ರಹ್ಲಾದ ಜೋಶಿ ಅವರು ಸರ್ಕಾರದ ಯೋಜನೆಗಳು, ಸಾಮಾಜಿಕ, ಆರ್ಥಿಕ ನೀತಿ, ನಿಯಮಗಳಿಗೆ ಅಂಕಿ ಅಂಶಗಳು ಬೆನ್ನಲುಬಾಗಿ ನಿಂತಿವೆ.ಸರ್ಕಾರ ಹಾಗೂ ಸಂಸ್ಥೆಗಳಿಗೆ ಹಾಗೂ ಮನೆಯಿಂದ ಅರಮನೆವರೆಗೆ ಅಂಕಿ ಅಂಶಗಳು ಮುಖ್ಯವಾಗಿವೆ ಎಂದು ಹೇಳಿದರು. ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯ ಉದಯಕುಮಾರ್ , ಮಾತನಾಡಿದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರು (ಪ್ರ) ಶ್ರೀ ಸುಲೈಮಾನ್ ನದಾಫ,

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಅಂಬರಾಯ ಸಾಗರ, ಸಹಾಯಕ ನಿರ್ದೇಶಕ ಎಂ.ಪ್ರಶಾಂತಕುಮಾರ್, ಉಪಸ್ಥಿತರಿದ್ದರು.

# ವಸತಿಶಾಲೆಯಲ್ಲಿ ವಿದ್ಯಾರ್ಥಿ ಸಾವು:ಪಾಲಕರ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.11: ಸೇಡಂ ತಾಲೂಕಿನ ಮುಧೋಳ ವಸತಿಶಾಲೆಯಲ್ಲಿ ಪಾಣೆಗಾಂವ ಗ್ರಾಮದ 7 ನೆಯ ತರಗತಿಯ ನಾರಾಯಣ ಎಂಬ ವಿದ್ಯಾರ್ಥಿಯ ಸಾವು ಆತ್ಮಹತ್ಯೆಯಲ್ಲ ಅದು ಕೊಲೆ ಎಂದು ಆರೋಪಿಸಿ ಇಂದು ಮೃತ ವಿದ್ಯಾರ್ಥಿಯ ಪಾಲಕರು ಮತ್ತು ಗ್ರಾಮಸ್ಥರು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಮುಖಂಡ ಪವನಕುಮಾರ ವಳಕೇರಿ ಅವರು ಪ್ರತಿಭಟನೆಯ ನೇತೃತ್ವವಹಿಸಿದ್ದರು. ಇದು ಆತ್ಮಹತ್ಯೆಯಲ್ಲ ಕೊಲೆ. ವಸತಿ ಶಾಲೆಯವರೇ ಕೊಲೆ ಮಾಡಿ ಫ್ಯಾನಿಗೆ ನೇತು ಹಾಕಿ ಆತ್ಮಹತ್ಯೆಯ ಕತೆ ಕಟ್ಟಿದ್ದಾರೆ ಎಂದು ಆರೋಪಿಸಿದರು.

ಮೃತ ಬಾಲಕನ ಕುಟುಂಬಕ್ಕೆ 5 ಲಕ್ಷ ರೂ ಪರಿಹಾರ ನೀಡಿದ್ದು ಅದನ್ನು ಪಾಲಕರು ನಿರಾಕರಿಸಿ, 25 ಲಕ್ಷ ರೂ ಪರಿಹಾರ ನೀಡಬೇಕು. ಹಾಗೂ ಮೃತ ವಿದ್ಯಾರ್ಥಿಯ ತಾಯಿಗೆ ಸರಕಾರಿ ನೌಕರಿ ನೀಡಬೇಕು ಎಂದು ಆಗ್ರಹಿಸಿದ ಅವರು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರಿಗೆ ಮನವಿಯನ್ನು ಸಲ್ಲಿಸಲಾಯಿತು

“ಯುವ ಸೌರಭ” ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಮೇಯರ್ ಮುಲ್ಲಂಗಿ ನಂದೀಶ್ ಕರೆ

# ವಿದ್ಯಾರ್ಥಿಗಳು ಕಲಾಸಕ್ತಿ ಬೆಳೆಸಿಕೊಳ್ಳಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.11–ಓದಿನ ಜೊತೆಯಲ್ಲಿ ವಿದ್ಯಾರ್ಥಿಗಳು ಕಲಾಸಕ್ತಿ ಬೆಳೆಸಿಕೊಳ್ಳಬೇಕು ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಕರೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ ವಿಶ್ರೀಕೃ ವಿವಿಯ ಡಾ.ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಿದ್ದ “ಯುವ ಸೌರಭ” ಸಾಂಸ್ಕೃತಿಕ ಕಾರ್ಯಕ್ರಮವನ್ನು ನಗಾರಿ ಬಾರಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಕಲೆಯನ್ನು ಆಸ್ವಾದಿಸುವ ಮನಸ್ಥಿತಿ ಬಹಳ ಮುಖ್ಯ. ವಿದ್ಯಾರ್ಥಿಗಳು ಕೇವಲ ವಿದ್ಯಾಭ್ಯಾಸಕ್ಕೆ ಸೀಮಿತವಾಗಿರಬಾರದು. ತಮ್ಮಲ್ಲಿನ ಕಲಾಪ್ರತಿಭೆಗಳನ್ನು ಹೊರಹಾಕಬೇಕು. ಸಾಂಸ್ಕೃತಿಕವಾಗಿ ದೇಶಕ್ಕೆ ಕೊಡುಗೆ ನೀಡಬೇಕು ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಶಿಕ್ಷಣ ಎಂದರೆ ಕೇವಲ ವಿದ್ಯಾಭಾಸವಲ್ಲ, ಬದಲಾಗಿ ವಿದ್ಯಾರ್ಥಿಗಳು ಕಲೆ, ಕವನ, ಕವಿತೆ, ಸಾಹಿತ್ಯ ಬರವಣಿಗೆ, ವಿದ್ಯೆ–ವಿನಯ ಅಳವಡಿಸಿಕೊಂಡರೆ ದೇಶದ ಸಂಸ್ಕೃತಿ ಸಮೃದ್ಧಿಗೆ ಬೆಳಕಾಗುತ್ತದೆ ಎಂದರು.

ಯುವಕರು ಒಳ್ಳೆಯ ಹವ್ಯಾಸಗಳನ್ನು ಬೆಳೆಸಿಕೊಳ್ಳಬೇಕು. ಯುವಕರಲ್ಲಿನ ಕಲೆಯನ್ನು ಪ್ರೋತ್ಸಾಹಿಸುವುದಕ್ಕಾಗಿಯೇ ‘ಯುವ ಸೌರಭ’ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದ್ದು, ವೇದಿಕೆ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ‘ಯುವನಿಧಿ’ ಯೋಜನೆಯ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳುವ ಕುರಿತು ವಿವಿಯ ಕುಲಪತಿಯವರೊಂದಿಗೆ ಚರ್ಚಿಸಲಾಗಿದೆ ಎಂದರು.

ವಿವಿಯ ಕುಲಪತಿ ಪ್ರೊ. ಎಂ.ಮುನಿರಾಜು ಅವರು ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಒತ್ತಡ ಜೀವನದಲ್ಲಿ ಕಲೆಯು ನೆಮ್ಮದಿಯ ಪಾಠ ಕಲಿಸುತ್ತದೆ. ಕಲಾಭ್ಯಾಸಕ್ಕೆ ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ ನಾಟಕ ವಿಭಾಗವಿದ್ದು, ವಿದ್ಯಾರ್ಥಿಗಳಿಗೆ ಕಲಾ ಶಿಕ್ಷಣ ಬೋಧನೆ ಮಾಡುವ ಕೆಲಸವಾಗುತ್ತಿದೆ ಎಂದರು.

ವಿವಿಯಲ್ಲಿ ಸುಸಜ್ಜಿತ ಆಡಿಟೋರಿಯಂ ಹಾಲ್ ನಿರ್ಮಾಣ ಕುರಿತಂತೆ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಚರ್ಚಿಸಲಾಗುವುದು. ಗುಣಮಟ್ಟದ ಕಟ್ಟಡ ನಿರ್ಮಾಣಕ್ಕಾಗಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

**ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು:**

ಬಳಿಕ ಕಾರ್ಯಕ್ರಮದಲ್ಲಿ ಕಂಪ್ಲಿ ಎಮ್ಮಿಗನೂರಿನ ಜ್ಞಾನೇಶ್ವರ ತಂಡದಿಂದ ಸುಗಮ ಸಂಗೀತ, ಬಳ್ಳಾರಿಯ ನಟರಾಜ ಕುಚುಪುಡಿ ನೃತ್ಯ–ಸಂಗೀತ ಮತ್ತು ಚಾರಿಟಬಲ್ ಟ್ರಸ್ಟ್ ವತಿಯಿಂದ ಸಮೂಹ ನೃತ್ಯ, ಸಂಡೂರು ತಾಲ್ಲೂಕಿನ ವಿ.ನಾಗಲಾಪುರದ ಶರಣಬಸವ. ಹೆಚ್ ಅವರ ಜಾನಪದ ಗೀತೆ, ಸಿರಿಗೇರಿಯ ಎನ್.ಮಣಿಕಂಠ ಸಂಗಡಿಗರಿಂದ ಬಯಲಾಟ(ಭಾರ್ಗವ ರಾಮ), ಬಳ್ಳಾರಿಯ ಎಂ.ಎಸ್.ಹರ್ಷ ತಂಡದಿಂದ ತಾಷರಂಡೋಲ್, ಸಂಡೂರು ತಾಲ್ಲೂಕಿನ ಎಂ.ಬಸಾಪುರದ ಆರ್.ನಾಗರಾಜ ತಂಡದಿಂದ ಡೊಳ್ಳು ಕುಣಿತ ಸೇರಿದಂತೆ ಇತರೆ ವೈವಿಧಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಭಾಗವಹಿಸಿದ ಎಲ್ಲಾ ತಂಡಗಳಿಗೆ ಪ್ರಮಾಣಪತ್ರ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಕುಲಸಚಿವ(ಮೌಲ್ಯಮಾಪನ) ಪ್ರೊ.ಎನ್.ಎಂ.ಸಾಲಿ, ಕರ್ನಾಟಕ ಬಂಜಾರ ಸಂಸ್ಕೃತಿ ಅಕಾಡೆಮಿಯ ಸದಸ್ಯ ಪ್ರೊ.ಶಾಂತನಾಯ್ಕ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ವಿವಿಯ ವಿವಿಧ ವಿಭಾಗಗಳ ಬೋಧಕ–ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮೋಸ ಮಾಡಿದ ಕಂಪನಿಗಳು ಬಡವರ ಹಣ ಮಾಯ ಮರುಪಾವತಿಗಾಗಿ ಹೋರಾಟಕ್ಕೆ ಬನ್ನಿ : ಶರಣಬಸಪ್ಪ ದಾನಕ್ಕೈ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಯವರ ಕಛೇರಿ ಮುಂಭಾಗದಲ್ಲಿ 2 ತಿಂಗಳ ನಿರಂತವಾಗಿ ಟಿಪಿಜೆಪಿ ಸಂಘಟನೆಯಿಂದ ರಾಜ್ಯದ ಪ್ರತಿಯೊಂದು ಜಿಲ್ಲೇಯ ಅಧ್ಯಕ್ಷರು ಹಾಗು ತಾಲೂಕು ಅಧ್ಯಕ್ಷರು, ಪದಾಧಿಕಾರಿಗಳು, ರೈತ ಮುಖಂಡರು, ವಿವಿಧ ಜನಪರ ಸಂಘಟನೆಗಳ ಮುಖಂಡರ ಸಮ್ಮುಖದಲ್ಲಿ ಅನಿರ್ದಿಷ್ಟ ಹೋರಾಟವನ್ನು ಮಾಡುತ್ತಾ ಹೋರಾಟದ ಹಾದಿಯಲ್ಲಿ ಸಾಗಿ ,ವಿವಿಧ ಜಲ್ಲೆಯಲ್ಲಿ ಹೋರಾಟ ಮಾಡಿ ಈಗ ರಾಜ್ಯ ಮಟ್ಟದ ಸಮಾವೇಶವನ್ನು ಬಾಗಲಕೋಟಿ ಜಿಲ್ಲೆಯ ಹುನಗುಂದ ತಾಲೂಕಿನ ಕುಡಲಸಂಗಮ ಕ್ಷೇತ್ರದ ಸಭಾ ಭವನದಲ್ಲಿ ಜುಲೈ 12 ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ ಸಮಾವೇಶ ಜರುಗುವದು ಎಂದು ಹೋರಾಟ ಸಮಿತಿ ಹಾಗು ರೈತ ಮುಖಂಡ ಶರಣಬಸಪ್ಪ ದಾನಕ್ಕೈ ಅವರು ಸಮಾವೇಶ ಯಶಸ್ವಿಗೋಳಿಸಲು ವಿನಂತಿಸಿದ್ದಾರೆ. ಸಭೆಯಲ್ಲಿ ಮುಖ್ಯ ಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ, ಹಾಗು ಕಂದಾಯ ಸಚಿವರು, ಸಂಸದರು, ಉಸ್ತುವಾರಿ ಸಚಿವರು ಶಾಸಕರು ,ಹಾಗು ಟಿ.ಪಿ.ಜೆ.ಪಿ ಸಂಘಟನೆಯ ರಾಜ್ಯ ಅಧ್ಯಕ್ಷ ಅಪ್ಪಾಸಾಹೇಬ ಬುಗಡೆ ಸೇರಿದಂತೆ ಸಂಘಟೆಯ ರಾಜ್ಯದ ಹೊರಾಟಗಾರರು, ಜಿಲ್ಲಾ ಹಾಗು ತಾಲೂಕಾ ಅಧ್ಯಕ್ಷರು ಪದಾಧಿಕಾರಿಗಳು, ಎಜೆಂಟರು, ಗ್ರಾಹಕರು ಸೇರಿ ಅಂದಾಜು



2 ಲಕ್ಷ ಅಧಿಕವಾಗಿ ಸೇರುವ ನಿರೀಕ್ಷೆ ಇದೆ. ಜನರು ,ವಿವಿಧ ಕಂಪನಿಗಳಾದ ಗ್ರೀನ ಬಡ್ರ ಆಗ್ರೋ ಫಾರಂ.ಲಿಂ. ಸಮೃದ್ಧ ಜೀವನ, ಪಲ್ಸ, ವ್ರಿತ್ರಿ, ಗುರುಟೀಕ್ ಹಿಗೇ ಹಲವಾರು ಕಂಪನಿಗಳಲ್ಲಿ ಮುಂದಿನ ಜೀವನಕ್ಕಾಗಿ, ಮಕ್ಕಳ ವಿಧ್ಯಾಭ್ಯಾಸ, ಮದುವೆ, ಮನೆ ಹೊಲ ಖರೀದಿಗಾಗಿ ಹಿಗೇ ಹಲವಾರು ಕನಸುಗಳನ್ನು ಇಟ್ಟು ಕೊಂಡು ಹಣ ಹೂಡಿಕೆ ಮಾಡಿ ಕಂಗಾಲಾಗಿದ್ದಾರೆ ಆದ್ದರಿಂದ ಹಣ ಕೊಡಿಸಿ ಪ್ರಾಣ ಉಳಿಸಿ ಕಾರ್ಯಕ್ರಮದಲ್ಲಿ ನಮ್ಮ ಹೋರಾಟಕ್ಕೆ ಜೀವ ಕೊಡುವಲ್ಲಿ ರಾಜ್ಯ ಹಾಗು ಕೇಂದ್ರ ಸರ್ಕಾರ ಮುಂದಾಗ ಬೇಕೆಂದು ಹೊರಾಟ ಸಮಿತಿಯ ಸಂಚಾಲಕ ಶರಣಬಸಪ್ಪ ದಾನಕ್ಕೈ ವಿನಂತಿಸಿದ್ದಾರೆ. ನಿರಂತವಾಗಿ ನಮ್ಮ ಸಂಘಟನೆ 2 –3 ವರ್ಷಗಳಿಂದ ಹೋರಾಟದ ಹಾದಿಯಲ್ಲಿ ಸಾಗಿಬಂದಿದೆ ಬಡವರಿಗೆ ಹಣ ಕೊಡಿಸುವದೆ ನಮ್ಮ ಗುರಿ ,ಬಡವರಿಗೆ 10 ವರ್ಷ ಕಳೆದರು ಹಣ ಇದುವರೆಗೂ ಮರುಪಾವತಿಯಾಗಿಲ್ಲ ಆದ್ದ–ರಿಂದ ಪಲ್ಸ, ಸಮೃದ್ಧ ಜೀವನ, ಗ್ರೀನ್ ಬಡ್ಸ ,ವ್ರಿತ್ರಿ, ಗುರುಟೀಕ್ ಹಿಗೇ ವಿವಿಧ ಕಂಪನಿಗಳಲ್ಲಿ ಎಜೇಂಟರು ಗ್ರಾಹಕರು ಮೋಸ ಹೋಗಿದ್ದಾರೆ ನಾವೇಲ್ಲರು ಹೋರಾಟದ ಮೂಲಕ ನಮ್ಮ ನಮ್ಮ ಸಮಸ್ಯೆಯ ಪರಿಹಾರಕ್ಕೆ ಹಗಲು ರಾತ್ರಿ ಚಿಂತನೆ ಮಾಡುತ್ತಿದ್ದೇವೆ ,ಗ್ರಾಹಕರ ಹಣ ಮರುಪಾವತಿಗಾಗಿ ನಾವೇಲ್ಲರೂ ನಮ್ಮ ಸಂಕಲ್ಪ ದೊಂದಿಗೆ ಹೋರಾಡುತ್ತಿದ್ದೇವೆ, ನಮಗೆಲ್ಲರಿಗೂ ನಿರುದ್ಯೋಗ ಸಮಸ್ಸೆಯಿದ್ದರು ಹೋರಾಟದ ಹಾದಿಯನ್ನು ಬಿಟ್ಟಿಲ್ಲ ಕೆಲವು ಏಜೆಂಟರು ಗ್ರಾಹಕರನ್ನು ನಡು ನಿರಿನಲ್ಲಿ ಬಿಟ್ಟು ಹೋಗಿದ್ದಾರೆ , ಈ ರೀತಿ ಮಾಡುವದು ಸಮಂಜಸವಾದುದುದಲ್ಲ, ಬಡ ಗ್ರಾಹಕರು ಯಾವದೇ ಕಂಪನಿಗಳ ಎಂಡಿ ಮುಖವನ್ನು ನೋಡಿ ಹಣ ಕಟ್ಟಿಲ್ಲ ,ನಮ್ಮನ್ನು ನೋಡಿ ಹಣ ಕಟ್ಟಿದ್ದಾರೆ ಆದ್ದರಿಂದ ಎಜೇಂಟರಾದವರು ಗ್ರಾಹಕರ ಋಣ ತೀರಿಸ ಬೇಕಾದರೆ ಹೋರಾಟದ ಹಾದಿಯಲ್ಲಿ ಸಾಗಿದಾಗ ಪ್ರತಿಫಲ ಸಿಕ್ಕೆ ಸಿಗುತ್ತದೆ.

ಒಗ್ಗಟ್ಟಿನಿಂದ ಪ್ರತಿಯೊಬ್ಬರೂ ಹೋರಾಟದಲ್ಲಿ ಕೈಜೋಡಿಸಿದರೆ ಮಾತ್ರ ಯಶಸ್ಸು ಹಾಗೂ ಹಣ ಮರುಪಾವತಿ ಮಾಡಿಸಲು ಸಾಧ್ಯ ಎಂದು ಸಂಘಟನೆಯ ಮುಖಂಡ ಹಾಗು ಕರ್ನಾಟಕ ರಾಜ್ಯ ರೈತ ಸಂಘ ಹಾಗು ಹಸಿರು ಸೇನೆಯ ವಾಸುದೇವ ಮೇಟಿ ಬಣದ ಯಲಬುರ್ಗಾ ತಾಲೂಕ ಅದ್ಯಕ್ಷ ಶರಣಬಸಪ್ಪ ದಾನಕ್ಕೈ ಅವರು ಜುಲೈ 12 ರಂದು ಶನಿವಾರ ಬೆಳಿಗ್ಗೆ 11 ಕ್ಕೆ ಕೂಡಲಸಂಗಮದಲ್ಲಿ ಜರುಗುವ ಸಮಾವೇಶ ಯಶಸ್ವಿಗೋಳಿಸಬೇಕೆಂದು ವಿನಂತಿಸಿದ್ದಾರೆ.

ವಿಶ್ವ ಜನಸಂಖ್ಯಾ ದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದ ಜಾಗೃತಿ ಜಾಥ

# ಚಿಕ್ಕ ಸಂಸಾರ ಆದ್ಯತೆಯಾಗಲಿ: ಡಿಹೆಚ್‌ಓ ಡಾ.ಯಲ್ಲಾ ರಮೇಶಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.11–ಜನಸಂಖ್ಯೆ ನಿಯಂತ್ರಣಕ್ಕಾಗಿ ಪ್ರಸ್ತುತ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ಪುರುಷ ಮತ್ತು ಮಹಿಳೆಯರಿಗೆ ಶಾಶ್ವತ ಶಸ್ತ್ರಚಿಕಿತ್ಸಾ ವಿಧಾನಗಳು ಲಭ್ಯವಿದ್ದು, ಚಿಕ್ಕ ಸಂಸಾರಕ್ಕೆ ಆದ್ಯತೆ ನೀಡಲು ಪ್ರತಿಯೊಬ್ಬರು ಮುಂದೆ ಬರಬೇಕು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾಪಂಚಾಯತ್ ಹಾಗೂ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕುಟುಂಬ ಕಲ್ಯಾಣ ಕಾರ್ಯಕ್ರಮ ವಿಭಾಗ, ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಜನಸಂಖ್ಯಾ ದಿನಾಚರಣೆ ಅಂಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಆವರಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಜನ ಜಾಗೃತಿ ಜಾಥಾಗೆ ಚಾಲನೆ ನೀಡಿ ಮಾತನಾಡಿದರು.

ಹೆಚ್ಚುತ್ತಿರುವ ಜನಸಂಖ್ಯೆಯು ದೇಶದ ಸಾಮಾಜಿಕ, ಆರ್ಥಿಕ ಅಭಿವೃದ್ದಿಯಲ್ಲಿ ಅನೇಕ ತೊಂದರೆಗಳನ್ನು ಉಂಟುಮಾಡುತ್ತದೆ. ಹಾಗಾಗಿ ದಂಪತಿಗಳು ಚಿಕ್ಕ ಸಂಸಾರಕ್ಕೆ ಆದ್ಯತೆ ನೀಡಬೇಕು ಎಂದರು.

ಜಿಲ್ಲೆಯಲ್ಲಿ ಲ್ಯಾಪ್ರೊಸ್ಕೋಪಿಕ್ ಮತ್ತು ಟ್ಯುಬೆಕ್ಟಮಿ ಶಸ್ತ್ರಚಿಕಿತ್ಸೆ ಮೂಲಕ ಇಲ್ಲಿಯವರೆಗೆ 10528 ಮಹಿಳಾ ಫಲಾನುಭವಿಗಳಿಗೆ ಶಸ್ತ್ರಚಿಕಿತ್ಸೆ ಮಾಡಲಾಗಿದೆ. ಗಾಯವಿಲ್ಲದ, ಹೊಲಿಗೆ ಇಲ್ಲದ ನೋ ಸ್ಕಾಲ್‌ಪೇಲ್ ವೆಸಕ್ಟಮಿ ಶಸ್ತ್ರಚಿಕಿತ್ಸೆಯನ್ನು ಇಲ್ಲಿಯವರೆಗೆ 03 ಜನ ಫಲಾನುಭವಿಗಳಿಗೆ ಮಾಡಲಾಗಿದೆ. ಈ ಕುರಿತು ಸಾರ್ವಜನಿಕರಿಗೆ ಹೆಚ್ಚಿನ ಜಾಗೃತಿಯನ್ನು ನೀಡಲಾಗುತ್ತಿದ್ದು, ಕುಟುಂಬದಲ್ಲಿ ಆಪ್ತಸಮಾಲೋಚನೆ ಮೂಲಕ ಶಸ್ತ್ರಚಿಕಿತ್ಸೆ ಕುರಿತು ಪರಿಚಯಿಸಲಾಗುತ್ತಿದೆ ಎಂದು ತಿಳಿಸಿದರು.

ಇತ್ತೀಚೆಗೆ ಬಂದ ಗರ್ಭ ನಿರೋಧಕ ಚುಚ್ಚುಮದ್ದು ಅಂತರ ಇಂಜೆಕ್ಷನ್‌ಅನ್ನು 4389 ಫಲಾನುಭವಿಗಳಿಗೆ ನೀಡಲಾಗಿದ್ದು, ಪ್ರತಿ 3 ತಿಂಗಳಿಗೊಮ್ಮೆ ಚುಚ್ಚುಮದ್ದು ಮೂಲಕ ಪಡೆಯಬಹುದಾದ ಚುಚ್ಚುಮದ್ದು ಇದಾಗಿದೆ. ಇಲ್ಲಿಯವರೆಗೆ 3650 ಮಹಿಳೆಯರಿಗೆ ವಂಕಿ ಅಳವಡಿಸಲಾಗಿದೆ. ನುಂಗುವ ಮಾತ್ರೆಗಳನ್ನು 10614 ಮಹಿಳಾ ಫಲಾನುಭವಿಗಳಿಗೆ ವಿತರಿಸಲಾಗಿದೆ.

ವಿಶೇಷವಾಗಿ ಹೆರಿಗೆಯಾದ ತಕ್ಷಣ 48 ಗಂಟೆ ಒಳಗಡೆ ಬಾಣಂತಿಗೆ ಅಳವಡಿಸುವ ಪಿಪಿಐಯುಸಿಡಿ (ವಂಕಿ) ಅನ್ನು 5585 ಮಹಿಳೆಯರಿಗೆ ಅಳವಡಿಸಲಾಗಿದೆ. ಪುರುಷರಿಗೆ ನಿರೋಧ್ ಲಭ್ಯವಿದ್ದು, 18328 ಫಲಾನುಭವಿಗಳಿಗೆ ನಿರೋಧ್ ವಿತರಿಸಿ ಜಿಲ್ಲೆಯಲ್ಲಿ ಜನಸಂಖ್ಯೆ ನಿಯಂತ್ರಿಸಲು ವ್ಯಾಪಕ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಪ್ರಭಾರಿ ಕುಟುಂಬ ಕಲ್ಯಾಣಾಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ‘ತಾಯಿ ಆಗುವ ವಯಸ್ಸು: ದೇಹ ಮತ್ತು ಮನಸ್ಸಿನ ಸಿದ್ಧತೆ’ ಎಂಬುದು ಈ ವರ್ಷದ ಘೋಷವಾಕ್ಯವಾಗಿದ್ದು, ಮದುವೆ ನಂತರ ಕನಿಷ್ಠ ಮೂರು ವರ್ಷಗಳವರೆಗೆ ಮಕ್ಕಳಾಗುವುದನ್ನು ತಡೆಗಟ್ಟುವುದು, ಎರಡು ಮಕ್ಕಳಿಗೆ ಸಂತಾನ ನಿಯಂತ್ರಿಸುವುದು, ಒಂದು ಮಗುವಿನ ನಂತರ ಕನಿಷ್ಠ ಮೂರು ವರ್ಷ ಅಂತರವಿಡುವುದು. ಕುಟುಂಬ ಕಲ್ಯಾಣ ಪದ್ಧತಿ ಅಳವಡಿಸಿಕೊಳ್ಳುವಂತೆ ಸೂಚಿಸಲಾಗುತ್ತಿದ್ದು, ಎಲ್ಲಾ ರೀತಿಯಿಂದ ಜನಸಂಖ್ಯೆ ಸ್ಥಿರತೆಯನ್ನು ಕಾಪಾಡಿ ದೇಶದ ಸಮಗ್ರ ಅಭಿವೃದ್ದಿಯಲ್ಲಿ ಪಾಲುದಾರರಾಗೋಣ ಎಂದು ತಿಳಿಸಿದರು.

ಜಾಥಾವು ಜಿಲ್ಲಾ ಆಸ್ಪತ್ರೆಯ ಆವರಣದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಿಂದ ಆರಂಭವಾಗಿ ಸಂಗಂ ವೃತ್ತದವರೆಗೆ ಬಂದು ಮರಳಿ ಜಿಲ್ಲಾ ಆಸ್ಪತ್ರೆಯ ಆವರಣಕ್ಕೆ ಕೊನೆಗೊಂಡಿತು. ಜಾಥಾದಲ್ಲಿ ಜಾಗೃತಿ ಫಲಕಗಳಿಂದ ಮತ್ತು ಭಿತ್ತಿಚಿತ್ರಗಳಿಂದ ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು.

ಇದೇ ವೇಳೆ ಕುಟುಂಬ ಕಲ್ಯಾಣ ವಿಧಾನಗಳ ಕುರಿತ ಭಿತ್ತಿಪತ್ರ ಅನಾವರಣಗೊಳಿಸಲಾಯಿತು. ಬಳಿಕ ಪ್ರತಿಜ್ಞಾವಿಧಿ ಸ್ವೀಕರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ.ವಿ., ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಸಿಎಸಿ ಎಫ್‌ಡಬ್ಲ್ಯು ಕಲ್ಸಂಟ್ ದೊಡ್ಡನಗೌಡ, ಡಾ.ಸುರೇಶ ಕುಮಾರ, ಡಾ.ಪ್ರಿಯಾಂಕ, ಎಎಸ್‌ಓ ಮಹಾದೇವಿ, ಗೋಪಾಲ್ ಕೆ.ಹೆಚ್., ಬಿಹೆಚ್‌ಇಓ ಶಾಂತಮ್ಮ, ಬಿಪಿಎಮ್ ಮೇಘರಾಜ್, ಹೆಚ್‌ಐಓ ಮುಸ್ತಾಕ್ ಅಹ್ಮದ್, ಹುಲಿಗೇಶ್, ಹಿರಿಯ ಆರೋಗ್ಯ ಸಂರಕ್ಷಣಾಧಿಕಾರಿ ಗಂಗಮ್ಮ, ಉಷಾರಾಣಿ, ನೇತ್ರಾ, ಸೈನಿಕ ಕಲ್ಯಾಣ ಸಂಘದ ಪ್ರಲ್ಹಾದ್‌ರೆಡ್ಡಿ ಸೇರಿದಂತೆ ಆಶಾ ಕಾರ್ಯಕರ್ತೆ–ಯರು ಹಾಗೂ ಇತರರು ಭಾಗವಹಿಸಿದ್ದರು.

# ಜುಲೈ 20ರಂದು ಕೊಪ್ಪಳದ ಕೋಟ್ಯಧಿಪತಿ ಪ್ರವೇಶ ಪರೀಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಗಣೇಶೋತ್ಸವ ನಿಮಿತ್ತ ನಗರದ ಡಾ.ಸಿಂಪಿ ಲಿಂಗಣ್ಣ ರಸ್ತೆಯ ಶ್ರೀ ಗಜಾನನ ಗೆಳೆಯರ ಬಳಗ 2024ರಿಂದ ಆರಂಭಿಸಿರುವ ಕೊಪ್ಪಳದ ಕೋಟ್ಯಧಿಪತಿ ಕಾರ್ಯಕ್ರಮ ಅಭೂತಪೂರ್ವ ಯಶಸ್ಸು ಕಂಡಿದ್ದು, 2025ರಲ್ಲಿ ಮತ್ತಷ್ಟೂ ಬದಲಾವಣೆಯ, ಹೊಸ ಕನಸುಗಳೊಂದಿಗೆ ಶುರುವಾಗುತ್ತಿದೆ ಎಂದು ಬಳಗದ ಅಧ್ಯಕ್ಷ ಹಾಗೂ ಕ್ವಿಜ್ ಮಾಸ್ಟರ್ ಬಸವರಾಜ ಕರುಗಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು ಕಳೆದ ವರ್ಷ ಹೊಸ ಪ್ರಯೋಗದ ಹೆಸರಿನಲ್ಲಿ ಪ್ರಾರಂಭಿಸಿದ ಕೊಪ್ಪಳದ ಕೋಟ್ಯಧಿಪತಿ ಕಾರ್ಯಕ್ರಮ ಜನರ ಮೆಚ್ಚುಗೆ




ಗಳಿಸಿದೆ. ಈ ವರ್ಷ ಹೊಸ ರೂಪದೊಂದಿಗೆ ಪ್ರತಿಭಾನ್ವಿತರನ್ನು ಪರಿಚಯಿಸುವ, ಬುದ್ಧಿಮತ್ತೆ ಹೆಚ್ಚಿಸುವ, ಮನರಂಜನೆ ಒದಗಿಸುವ ಜೊತೆಗೆ ವಿಜೇತರಿಗೆ ಪುಸ್ತಕ ಹಾಗೂ ನಗದು ಬಹುಮಾನವನ್ನು ನೀಡುವ ಪರಿಕಲ್ಪನೆ ಹೊಂದಿದೆ. ಕೊಪ್ಪಳದ ಕೋಟ್ಯಧಿಪತಿಯ ಆರಂಭಿಕ ಹಂತ ಸಾಮಾನ್ಯ ಜ್ಞಾನ ಕುರಿತ ಪ್ರವೇಶ ಪರೀಕ್ಷೆ ಜುಲೈ 20ರಂದು ಬೆಳಗ್ಗೆ 10–30ಕ್ಕೆ ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ (ಬಿಇಓ ಕಚೇರಿ ಹಿಂದುಗಡೆ, ಅಶೋಕ ಸರ್ಕಲ್ ಹತ್ತಿರ) ನಡೆಯುತ್ತಿದೆ. ಈ ಪ್ರವೇಶ ಪರೀಕ್ಷೆಯು 18 ವರ್ಷದೊಳಗಿನ ಹಾಗೂ 18 ವರ್ಷ ಮೇಲ್ಪಟ್ಟವರಿಗೆ ಎರಡು ವಿಭಾಗಗಳಲ್ಲಿ ನಡೆಯುತ್ತಿದೆ. ಹೆಸರು ನೋಂದಾಯಿಸುವವರು ಪ್ರವೇಶ ಪರೀಕ್ಷೆಯ ದಿನ ಭಾವಚಿತ್ರ ಮತ್ತು ಆಧಾರ್ ಕಾರ್ಡ್ನ ನಕಲು ಪ್ರತಿ ತರಬೇಕು. ಜೊತೆಗೆ ಫೋನ್–ಎ–ಫ್ರೆಂಡ್ ಆಯ್ಕೆಗೆ ಇಬ್ಬರ ಹೆಸರು ಮತ್ತು ಸಂಪರ್ಕ ಸಂಖ್ಯೆ ಆಯ್ಕೆ ಮಾಡಿಕೊಂಡು ಪ್ರವೇಶ ಪರೀಕ್ಷೆಗೆ ಹಾಜರಾಗಬೇಕು. ಈ ಕುರಿತು ಹೆಚ್ಚಿನ ಮಾಹಿತಿಗೆ ಬಸವರಾಜ ಕರುಗಲ್ (ಮೊಬೈಲ್ ಸಂ–ಖ್ಯೆ–9380605892), ವಿನೋದ ಚಿನ್ನಿನಾಯ್ಕರ್ (ಮೊಬೈಲ್ ಸಂ–ಖ್ಯೆ–9742560716) ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

# ಜು.12 ರಂದು ರಾಷ್ಟ್ರೀಯ ಲೋಕ್ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.11–ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಜುಲೈ 12 ರಂದು ನಗರದ ತಾಳೂರು ರಸ್ತೆಯ ಹೊಸ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ನಡೆಸಲಾಗುವುದು.

ಸಾರ್ವಜನಿಕರು ತಮ್ಮ ವ್ಯಾಜ್ಯಪೂರ್ವ, ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಪ್ರಕರಣಗಳನ್ನು ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಒಟ್ಟು 31 ನ್ಯಾಯಾಲಯಗಳಲ್ಲಿ ಜುಲೈ 12 ರಂದು ನಡೆಯುವ ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಶೀಘ್ರವೇ ಇತ್ಯರ್ಥಗೊಳಿಸಿ ಪರಿಹಾರ ಪಡೆದುಕೊಳ್ಳಲು ಸುವರ್ಣ ಅವಕಾಶವಾಗಿದೆ. ಸಾರ್ವಜನಿಕರು ಹಾಗೂ ಕಕ್ಷಿದಾರರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್.ಎನ್ ಹೊಸಮನೆ ಅವರು ತಿಳಿಸಿದ್ದಾರೆ.

# ಜು.12 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.11–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1ರ ವ್ಯಾಪ್ತಿಗೆ ಬರುವ 110/11ಕೆವಿ ಸೌತ್ ವಿದ್ಯುತ್ ವಿತರಣ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಫೀಡರ್‌ಗಳಾದ ಎಫ್–23, ಎಫ್–24, ಎಫ್–25, ಎಫ್–26, ಎಫ್–27, ಎಫ್–29, ಎಫ್–43, ಎಫ್–47, ಮತ್ತು ಎಫ್–48 ರ ತುರ್ತು ನಿರ್ವಹಣಾ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಜು.12 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.

*ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:*

ನಗರದ ಬಂಡಿಮೋಟ್, ಬಾಪೂಜಿ ನಗರ, ಕುರಿಕಮೇಲ, ಕಮೇಲ ರಸ್ತೆ, ಆರ್.ಕೆ ಮಿಲ್ ರೋಡ್, ಬಾಪೂಜಿ ನಗರ, ಬಾಪೂಜಿ ನಗರ ಸರ್ಕಲ್, ರಾಣಿತೋಟ, ಕಣೇಕಲ್ ಬಸ್‌ಸ್ಟಾಂಡ್, ಮಾರ್ಕೆಟ್, ಟೋಪಿಗಲ್ಲಿ, ಮರಿಸ್ವಾಮಿ ಮಠ, ಅಂದ್ರಾಳ್ ರಸ್ತೆ, ಕೊಲ್ಮಿ ಚೌಕ್, ಮಿಲ್ಲರ ಪೇಟೆ, ಅಂಧ್ರಾಳ್, ಮೋತಿ ವೃತ್ತ, ತೇರು ಬೀದಿ, ಜೈನ್ ಮಾರ್ಕೆಟ್, ಕಾಳಮ್ಮ ಸ್ಟ್ರಿಟ್, ಲಾರಿ ಟರ್ಮಿನಲ್, ರಂಗ ಮಂದಿರ, ಹೊಸ ಬಸ್ ನಿಲ್ದಾಣ, ಬಂಡಿಮೋಟ್, ಗೊಲ್ಲರಹಟ್ಟಿ, ಮಾರುತಿ ಕಾಲೋನಿ, ಅಂಧ್ರಾಳ್ ಸಿಟಿ, ಸಿದ್ದಾಪುರ ರೋಡ್ ಇಂಡಸ್ಟ್ರಿಯಲ್, ಎನ್.ಜೆ.ವೈ ಮಿಂಚೇರಿ, ಚರ್ಕುಂಟ, ಮಹೇಶ್ ಪೈಪ್ಸ್ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹಾಗಾಗಿ ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಕಾರ್ಯನಿರ್ವಾಹಕ ಅಭಿಯಂತರರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜು.16 ರಂದು ಸಮಗ್ರ ಮಕ್ಕಳ ರಕ್ಷಣಾ ಯೋಜನೆ ಕುರಿತು ಪ್ರಗತಿ ಪರಿಶೀಲನಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.11–ಜಿಲ್ಲಾ ಮಕ್ಕಳ ರಕ್ಷಣಾ ಘಟಕ ವತಿಯಿಂದ ಜು.16 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇ–ರಿಯ ಸಭಾಂಗಣದಲ್ಲಿ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಬಾಲ್ಯವಿವಾಹ ಕುರಿತು ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ತಿಳಿಸಿದ್ದಾರೆ.

# ಜು.12 ರಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.11–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2 ರ ವ್ಯಾಪ್ತಿಗೆ ಬರುವ 11ಕೆವಿ ಫೀಡರ್ ನ ವಿದ್ಯುತ್ ವಿತರಣ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಫೀಡರ್ ಎಫ್–09 ದ್ವಾರಕ ಆಸ್ಪತ್ರೆಯ ಹತ್ತಿರವಿರುವ ಪರಿವರ್ತಕದ ಬದಲಾವಣೆ ಕಾರ್ಯ ಮತ್ತು ಎಫ್–08 ಹೆಚ್‌ಟಿ ಮತ್ತು ಎಲ್‌ಟಿ ಕಂಬಗಳ ಸ್ಥಳಾಂತರಿಸುವ ಕಾರ್ಯ ಕೈಗೊಳ್ಳುತ್ತಿರುವುರಿಂದ ಜು.12 ರಂದು ಬೆಳಿಗ್ಗೆ 11 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.

*ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:*

ಎಫ್–09 ರ ನೆಹರು ಕಾಲೋನಿ, ಎಸ್.ಎನ್.ಪೇಟೆ 1ನೇ, 2ನೇ, 4ನೇ, 5ನೇ ಮತ್ತು 6ನೇ ಅಡ್ಡರಸ್ತೆ, ಶಂಕರ್ ಕಾಲೋನಿ, ಡಿಎಅ–ರ್‌ಗ್ರೌಂಡ್, ಕೂಲ್‌ಕಾರ್ನರ್, ಡಬಲ್ ರಸ್ತೆ, ಕೋಲಾಚಲಂ ಕಾಂಪೌಂಡ್, ರಾಯಲ್ ಸರ್ಕಲ್, ಗಾಂಧಿ ಭವನ, ಸಿಎಂಸಿ, ಅಂಬಲಿ ಬಾಗ್, ತಾಲ್ಲೂಕ್ ಅಫೀಸ್, ಡಿಸಿ ಅಫೀಸ್, ಸ್ಟೇಷನ್ ರೋಡ್.

ಎಫ್–08 ರ ಬಸವೇಶ್ವರ ನಗರ, ಎಂ.ಅರ್.ವಿ. ಲೇಔಟ್, ಸದ್ಗುರು ಕಾಲೋನಿ, ರೇಣುಕಾಚಾರ್ಯ ನಗರ, ಅಲ್ಲಂ ಲೇಔಟ್, ಬಿ.ಎಂ. ಎಸ್.ಲೇಔಟ್, ತಿರುಮಲ ಲೇಔಟ್, ಹರಿಪ್ರಿಯ ನಗರ, ಸುಷ್ಮಸ್ವರಾಜ್ ಕಾಲೋನಿ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಕಾರ್ಯನಿರ್ವಾಹಕ ಅಭಿಯಂತರರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಗರ ಕೇಂದ್ರ ಗ್ರಂಥಾಲಯದ ಸೇವೆ ತಾತ್ಕಾಲಿಕವಾಗಿ ಸ್ಥಗಿತ

ರಾಯಚೂರು ಜುಲೈ 11– ಇಲ್ಲಿನ ಸ್ಟೇಷನ್ ರೋಡ್, ನಗರ ಉದ್ಯಾನವನ ಪಕ್ಕದ ನಗರ ಕೇಂದ್ರ ಗ್ರಂಥಾಲಯ ಕಟ್ಟಡವನ್ನು ಜುಲೈ 07 ರಿಂದ ಆಧುನೀಕರಣ, ನವೀಕರಣ ಕಾರ್ಯಕ್ಕೈಗೊಂಡ ಪ್ರಯುಕ್ತ ಗ್ರಂಥಾಲಯದ ಸೇವೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ ನಿರ್ಮಲಾ ಹೆಚ್ ಹೊಸೂರು ಅವರು ತಿಳಿಸಿದ್ದಾರೆ.

ಇತ್ತೀಚೆಗೆ ರಾಯಚೂರು ಸಹಾಯಕ ಆಯುಕ್ತರು ಗ್ರಂಥಾಲಯಕ್ಕೆ ಭೇಟಿ ನೀಡಿ ಮೌಖಿಕ ಆದೇಶದ ಮೇರೆಗೆ ಗ್ರಂಥಾಲಯವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಈ ಸೇವೆಯನ್ನು ಜಿಲ್ಲಾ ಕೇಂದ್ರ ಗ್ರಂಥಾಲಯ ಹಾಗೂ ರಾಯಚೂರು ನಗರದಲ್ಲಿ ಇರುವ ಶಾಖಾ ಗ್ರಂಥಾಲಯದಲ್ಲಿ ಸೇವೆಯನ್ನು ಪಡೆದುಕೊಳ್ಳುವಂತೆ ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೊಡೇಕಲ್: ವಿರಕ್ತಮಹಾಮಠದಲ್ಲಿ ಗುರು ವಂದನಾ
## ಗುರು ಶ್ರದ್ಧೆಯೇ ಬದುಕಿನ ಗುರುತ್ವಾಕರ್ಷಣೆ ಶಕ್ತಿ: ಶಿವಕುಮಾರ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಕೊಡೇಕಲ್: ಮಾನವೀಯ ವ್ಯಕ್ತಿತ್ವದಲ್ಲಿ ಸಮಾಜ ಸೇವೆ, ಗುರುಸೇವೆ, ಭಗವದ್ ಸೇವೆ ಹೀಗೆ ಸೇವಾ ಮುಖಗಳಲ್ಲಿ ಸೇವಾ ನಿಷ್ಠತೆಯೇ ಆಧ್ಯಾತ್ಮಿಕ ಪರಂಪರೆಯ ಗುರು ಸೇವಾ, ಗುರು ವಂದನಾ ಧಾರ್ಮಿಕತೆಯಲ್ಲಿ ಸನ್ನಡತೆಯ ವ್ಯಕ್ತಿಯ ಕಾರ್ಯಶಕ್ತಿಯಾಗಿದೆ ಎಂದು ಶ್ರೀ ಗುರು ದುರುದುಂಡೇಶ್ವರ ವಿರಕ್ತಮಹಾಮಠದ ಶ್ರೀ ಶಿವಕುಮಾರ ಮಹಾಸ್ವಾಮಿಜೀ ಶ್ರೀಮಠದ ಭಕ್ತ ವೃಂದದಿಂದ ಗುರು ಪೂರ್ಣಿಮೆಯ ಗುರು ವಂದನಾ ಸ್ವೀಕರಿಸಿ ಆಶೀರ್ವಚಿಸಿದರು.

ಡಾ.ಬಿ.ಬಿ.ಬಿರಾದಾರ, ಸುರೇಶ ದೇವೂರ, ಶಿಕ್ಷಕರಾದ ಗುರುರಾಜ ಜೋಷಿ, ಕೊಟ್ರೇಶ ಕೋಳೂರ ಮಾತನಾಡಿದರು. ಸಿದ್ದಲಿಂಗಯ್ಯಸ್ವಾಮಿ, ತಾಲೂಕಾ ಕರವೇ ಅಧ್ಯಕ್ಷ ರಮೇಶ ಬಿರಾದಾರ, ಬಸಣ್ಣ ಬಂಗಾರಗುಂಡ, ಬಿ.ಬಿ.ಪಡಶೆಟ್ಟಿ, ಮಲ್ಲಣ್ಣ ಆರಲಗಡ್ಡಿ, ಸೋಮನಿಂಗಪ್ಪ ದೊರಿ, ವಿಶಾಲ ಅಂಗಡಿ, ವಿಜಯ ಮದರಿ, ತಿರುಪತಿ ಹಡಪದ, ಯಂಕಣ್ಣ ಹಗರಟಗಿ, ಕುಮಾರ ತೋಳನೂರ, ಶಿವಯ್ಯ ಸ್ವಾಮಿ, ಮುತ್ತು ಪಡಶೆಟ್ಟಿ, ಸಂಗು ಪಾಟೀಲ್, ಶ್ರೀಮಠದ ಮಹಿಳಾ ಭಕ್ತರಿದ್ದರು.

ಪೂರ್ವದಲ್ಲಿ ನಿಜಶರಣ ಹಡಪದ ಅಪ್ಪಣ್ಣನವರ ಭಾವಚಿತ್ರ ಪೂಜಿಸಿ ಜಯಂತಿಯನ್ನು ಬಸಯ್ಯ ಸ್ವಾಮಿ ಹಿರೇಮಠ ಅವರೊಂದಿಗೆ ಗುಂಡಣ್ಣ ನಗನೂರ, ಮಲ್ಲಿಕಾರ್ಜುನ ಹಡಪದ ಭಕ್ತರ ಪರವಾಗಿ ಗುರುವಂದನಾ ಪೂಜೆ ನೆರವೇರಿಸಿದರು. ಚಂದ್ರಶೇಖರ ಐಹೊಳ್ಳಿ ನಿರೂಪಿಸಿದರು, ಹಿರಿಯ ಪತ್ರಕರ್ತ ಬಸವರಾಜ ಬ ಅಂಗಡಿ ಸ್ವಾಗತಿಸಿದರು, ರವಿ ಆರಲಗಡ್ಡಿ ವಂದಿಸಿದರು.

### ಯುವನಿಧಿ ವಿಶೇಷ ನೋಂದಣಿ ಅಭಿಯಾನದಡಿ
## ನಿರುದ್ಯೋಗ ಭತ್ಯೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 11– ರಾಜ್ಯ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಯುವನಿಧಿ ಯೋಜನೆಯಲ್ಲಿ 2023–24 ಮತ್ತು 2024–25ನೆ ಸಾಲಿನಲ್ಲಿ ಸ್ನಾತ್ತಕ ಪದವಿ ಅಥವಾ ಸ್ನಾತ್ತಕೋತ್ತರ ಪದವಿ ಮತ್ತು ಡಿಪ್ಲೋಮ ಪದವಿಯಲ್ಲಿ ತೇರ್ಗಡೆಯಾಗಿ ಉದ್ಯೋಗ ಸಿಗದ ಅಭ್ಯರ್ಥಿಗಳಿಂದ ನಿರುದ್ಯೋಗ ಭತ್ಯೆಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಸೇವಾಸಿಂಧು ವೆಬ್‌ಪೋರ್ಟ್ಲ್ ವಿಳಾಸ: ೀಣಣಠಿ://ಜತಿಘಟಿಜ–ೀಣಾಠ.ಞಚಿಡಿಟಿಚಿಣಚಿಞಚಿ.ರಠತ.ಟಿ ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ದಿನಾಂಕ: 07–07–2025 ರಿಂದ 07–08–2025 ರವರೆಗೆ ವಿಶೇಷ ನೋಂದಾಣಿ ಅಭಿಯಾನವನ್ನು ರಾಯಚೂರಿನ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಅರ್ಹ ಫಲಾನುಭವಿಗಳು ಈ ಸದಾವಕಾಶವನ್ನು ಉಪಯೋಗಿಸಿಕೊಂಡು ಇದರ ಪ್ರಯೋಜನೆಯನ್ನು ಪಡೆದುಕೊಳ್ಳಬಹುದಾಗಿದೆ.

ಅಭ್ಯರ್ಥಿಗಳು ಕರ್ನಾಟಕ ಒನ್/ ಗ್ರಾಮ ಒನ್ ಮತ್ತು ಬಾಪೂಜಿ ಕೇಂದ್ರಗಳಲ್ಲಿ ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಆಧಾರ್ ಸಿಡೆಡ್, ಬ್ಯಾಂಕ್ ಖಾತೆ, ಹಾಗೂ ಆಧಾರ್ ಲಿಂಕ್ಡ್ ಮೊಬೈಲ್ ನಂಬರ್ ಹೊಂದಿರತಕ್ಕದ್ದು, ಅರ್ಜಿ ಸಲ್ಲಿಸಿದ ನಂತರ ಸೇವಾಸಿಂದು ಪೋರ್ಟ್ಲ್‌ನಲ್ಲಿ ತಮ್ಮ ಅರ್ಜಿಯು ಯಾವ ಹಂತದಲ್ಲಿ ಇದೆ ಎಂಬುದನ್ನು ಪರಿಶೀಲಿಸಿಕೊಂಡು, ಒಂದು ವೇಳೆ ಅರ್ಜಿಯು ಅಪ್ರೂವ್ ಅಗಾದ ಸಂದರ್ಭದಲ್ಲಿ ಸೂಚಿಸಲ್ಪಟ್ಟ ಇಲಾಖೆಯ ಕಚೇರಿಗಳಿಗೆ ತಮ್ಮ ಎಲ್ಲಾ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿ ಅಪ್ರೂವ್ ಮಾಡಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ:1800–599–7154 ಅಥವಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ: 08532–231684ಗೆ ಸಂಪರ್ಕಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾರಸುದಾರರ ಪತ್ತೆಗೆ ರೈಲ್ವೇ ಪೊಲೀಸರಿಂದ ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 11– ಹನುಮಾಪುರ ಮತ್ತು ಮಂತ್ರಾಲಯ ರೈಲು ನಿಲ್ದಾಣಗಳ ಮಧ್ಯೆ ಕೀ,ಮೀ ನಂ 538/15–13 ಆಪ್‌ಲೈನ್ ರೈಲು ಹಳಿಯಲ್ಲಿ ಜೂ.26ರಂದು ಸುಮಾರು 50 ವರ್ಷದ ಒಬ್ಬರು ಅಪರಿಚಿತ ಗಂಡಸು 12163 ರೈಲು ಗಾಡಿಗೆ ಅಡ್ಡ ನಿಂತು ಆತ್ಮಹತ್ಯೆ ಮಾಡಿಕೊಂಡು ಮೃತಪಟ್ಟಿದ್ದು, ಈ ಕುರಿತು ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ಯುಡಿಆರ್ ನಂ.41/2025 ಕಲಂ; 194 ಬಿ.ಎನ್.ಎಸ್.ಎಸ್ ರೀತ್ಯಾ ಪ್ರಕರಣ ದಾಖಲಿಸಿಕೊಂಡು ವಾರಸುದಾರರ ಪತ್ತೆಗೆ ಕೋರಲಾಗಿದೆ.

ಮೃತನ ಚಹರೆ ಪಟ್ಟಿ; ವಯಸ್ಸು ಸುಮಾರು 50 ವರ್ಷ, ಎತ್ತರ ಸುಮಾರು 5.2 ಅಡಿ, ಸಾದಾಗೆಂಪು ಮೈಬಣ್ಣ ತಲೆಯಭಾಗವು ಮುಂಡದ ಭಾಗದಿಂದ ಕಟ್ಟಾಗಿ ಒಡೆದು ಮೆದುಳು ಮಾಂಸ ಹೊರಬಂದು ಚೂರುಚೂರುಆಗಿರುವುದರಿಂದ ಸಂಪೂರ್ಣ ಚಹರೆ ಪಟ್ಟಿ ಗುರುತಿಸಲು ಅಸಾಧ್ಯವಾಗಿದೆ, ಒಂದು ಕೆಂಪು ಬಣ್ಣದ ಬಣ್ಣದ ರೆಡಿಮೇಡ್ ಪ್ಯಾಂಟ್, ಒಂದು ಹಳದಿ ಮತ್ತು ಬಿಳಿ ಸಣ್ಣ ಚುಕ್ಕಿಯುಳ್ಳ ರೆಡಿಮೇಡ್ ಶರ್ಟ ಬಟ್ಟೆಯನ್ನು ಧರಿಸಿದ್ದು, ಇದರ ಹೊರೆತು ಬೇರೇನು ಇರುವುದಿಲ್ಲ.

ಈ ಮೃತ ಅಪರಿಚಿತ ಮೃತನ ವಾರಸುದಾರರು ಪತ್ತೆಯಾದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08532– 231716 ಅಥವಾ ಮೊ.ನಂ:9480802111 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080–22871291ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ತನಿಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಯಮಗಳ ಉಲ್ಲಂಘನೆ: ರಸಗೊಬ್ಬರ ಮಾರಾಟ ಮಳಿಗೆ ಪರವಾನಗಿ ಅಮಾನತ್ತುಗೊಳಿಸಿ ಆದೇಶ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ರಸಗೊಬ್ಬರ ನಿಯಂತ್ರಣ ಆದೇಶ 1985 ಹಾಗೂ 1955 ರ ಉಲ್ಲಂಘನೆ ಕಂಡುಬಂದ ಹಿನ್ನೆಲೆಯಲ್ಲಿ ಕೊಪ್ಪಳ ನಗರದ ಶ್ರೀ ನಾಗರಾಜ ಟ್ರೇಡಿಂಗ್ ಕಂಪನಿ ಮಾರಾಟ ಮಳಿಗೆಯ ಮಾರಾಟ ಪರವಾನಿಗೆಯನ್ನು ಅಮಾನತ್ತುಗೊಳಿಸಲಾಗಿದೆ.

ಮಂಜುನಾಥ ಕೆ. ಹಕಾರಿ, ಮೊ.ನಂ : 6364590248 ಎಂಬ ಗ್ರಾಹಕರು ಕೊಪ್ಪಳ ನಗರದ ಎಸ್.ಜಿ. ಗಂಜ್ ನಲ್ಲಿರುವ ಶ್ರೀ ನಾಗರಾಜ ಟ್ರೇಡಿಂಗ್ ಕಂಪನಿಯ ರಸಗೊಬ್ಬರ ಮಾರಾಟಗಾರರು ಯೂರಿಯಾ ರಸಗೊಬ್ಬರವನ್ನು ಹೆಚ್ಚಿನ ದರಕ್ಕೆ ಮತ್ತು ರಸಗೊಬ್ಬರಕ್ಕೆ ಸೆಟ್‌ರೈಟ್ ಲಿಂಕ್ ಮಾಡುತ್ತಿರುವ ಕುರಿತು ದೂರನ್ನು ಹಾಗೂ ಅದಕ್ಕೆ ಸಂಬಂಧಿಸಿದಂತೆ ವಿಡಿಯೋ ಸಂದೇಶವನ್ನು ಸಲ್ಲಿಸಿದ್ದರು. ದೂರಿನನ್ವಯ ಜಂಟಿ ಕೃಷಿ ನಿರ್ದೇಶಕರ ಕಛೇರಿಯ ಸಹಾಯಕ ಕೃಷಿ ನಿರ್ದೇಶಕರಾದ (ಜಾರಿದಳ–1) ಸುನಿಲ್ ಕುಮಾರ್ ಎಂ.ಟಿ, ಕೃಷಿ ಅಧಿಕಾರಿ ಮುತ್ತಣ್ಣ ಈಳಗೇರ ಹಾಗೂ ವಿಶ್ವನಾಥ ಬಗನಾಳ, ಕೊಪ್ಪಳ ರೈತ ಸಂಪರ್ಕ ಕೇಂದ್ರದ ಸಹಾಯಕ ಕೃಷಿ ಅಧಿಕಾರಿ ಸದ್ದಾಂ ಹುಸೇನ್ ಇವರು ಜುಲೈ 08 ರಂದು ಶ್ರೀ ನಾಗರಾಜ ಟ್ರೇಡಿಂಗ್ ಕಂಪನಿ, ಎಸ್.ಜಿ.ಗಂಜ್, ಕೊಪ್ಪಳ ರಸಗೊಬ್ಬರ ಮಾರಾಟ ಮಳಿಗೆಗೆ ಭೇಟಿ ನೀಡಿ ಪರಿಶೀಲಿಸಿದ್ದು, ಪರಿಶೀಲನಾ ಸಮಯದಲ್ಲಿ ರಸಗೊಬ್ಬರ ನಿಯಂತ್ರಣ ಆದೇಶ 1985 ಹಾಗೂ 1955 ರ ವಿವಿಧ ಕ್ಲಾಸುಗಳ ಉಲ್ಲಂಘನೆ ಮಾಡಿರುವುದು ಕಂಡುಬಂದಿರುತ್ತದೆ.

ಮಾರಾಟ ಮಳಿಗೆಯಲ್ಲಿ ನಿಯಮಾನುಸಾರ ರಸಗೊಬ್ಬರ ದಾಸ್ತಾನು ಮತ್ತು ಮಾರಾಟದ ಬೆಲೆಯನ್ನು ನಾಮಫಲಕದಲ್ಲಿ ಸಾರ್ವಜನಿಕರಿಗೆ ಕಾಣುವಂತೆ ಪ್ರದರ್ಶಿಸದೇ ರಸಗೊಬ್ಬರ ನಿಯಂತ್ರಣ ಆದೇಶ 1985 ಕ್ಲಾಸ್ 4ನ್ನು ಉಲ್ಲಂಘಿಸಿರುತ್ತಾರೆ. ರಸಗೊಬ್ಬರ ಕೊಂಡವರಿಗೆ ನಮೂನೆ–ಒ ನಲ್ಲಿ ಬಿಲ್ ನೀಡದೇ ರಸಗೊಬ್ಬರ ನಿಯಂತ್ರಣ ಆದೇಶ 1985 ಕ್ಲಾಸ್ 5ನ್ನು ಉಲ್ಲಂಘಿಸಿರುತ್ತಾರೆ. ವಿವಿಧ ರಸಗೊಬ್ಬರಗಳನ್ನು ಮಾರಾಟ ಮಾಡುತ್ತಿರುವುದು ಕಂಡು ಬಂದಿದ್ದು, ಆ ಕಂಪನಿಗಳ ಫಾರಂ–ಒ ಅನ್ನು ರಸಗೊಬ್ಬರ ಮಾರಾಟದ ಪರವಾನಗಿಯಲ್ಲಿ ಅನುಮತಿ ಪಡೆದಿರುವುದಿಲ್ಲ ಅಥವಾ ಅವಧಿ ಮುಕ್ತಾಯಗೊಂಡಿರುತ್ತವೆ. ಕಾರಣ ರಸಗೊಬ್ಬರ ನಿಯಂತ್ರಣ ಆದೇಶ 1985 ಕ್ಲಾಸ್ 8ನ್ನು ಉಲ್ಲಂಘಿಸಿರುತ್ತಾರೆ. ದೂರುದಾರರು ನೀಡಿದ ಮಾಹಿತಿ ಹಾಗೂ ವಿಡಿಯೋ ಸಂದೇಶದ ಕುರಿತು ಮಾರಾಟಗಾರರನ್ನು ಪ್ರಶ್ನಿಸಿದಾಗ ನಾವು ಯಾವುದೇ ರೀತಿಯಾಗಿ ಯೂರಿಯಾ ಗೊಬ್ಬರವನ್ನು 350 ರೂಪಾಯಿಗೆ ಮಾರಾಟ ಮಾಡಿರುವುದಿಲ್ಲ ಆದರೆ ಆ ವಿಡಿಯೋದಲ್ಲಿರುವ ನಮ್ಮ ಅಂಗಡಿಯ ಸಹಾಯಕರಾದ ವಿಶ್ವನಾಥ ಹಳ್ಳಿಕೇರಿರವರು 350ಕ್ಕೆ ಒಂದು ಚೀಲ ಯೂರಿಯಾ ಎಂದು ಹೇಳಿರುವುದು ಸತ್ಯವಿರುತ್ತದೆ ಎಂದು ಒಪ್ಪಿಕೊಂಡಿರುತ್ತಾರೆ. ಅದು ಗಮನಕ್ಕೆ ಇರುವುದಿಲ್ಲ ಎಂದು ತಿಳಿಸಿರುತ್ತಾರೆ. ಈ ಮೂಲಕ ರಸಗೊಬ್ಬರ ನಿಯಂತ್ರಣ ಆದೇಶ 1985 ಕ್ಲಾಸ್ 3ನ್ನು ಉಲ್ಲಂಘಿಸಿರುತ್ತಾರೆ.

ಸಹಾಯಕ ಕೃಷಿ ನಿರ್ದೇಶಕರು (ಜಾರಿದಳ–1), ಜಂಟಿ ಕೃಷಿ ನಿರ್ದೇಶಕರ ಕಛೇರಿ, ಕೊಪ್ಪಳ ಇವರು ತಮಗೆ ನೀಡಿದ ನೋಟಿಸ್‌ಗೆ ತಾವು ಸಲ್ಲಿಸಿದ ಉತ್ತರವು ಸಮಂಜಸವಾಗಿರುವುದಿಲ್ಲ ಎಂದು ತಿಳಿಸಿರುತ್ತಾರೆ. ರೈತರಿಗೆ ಖರೀದಿ ಸಮಯದಲ್ಲಿ ಬಿಲ್ಲುಗಳನ್ನು ನೀಡದೇ ಅಧಿಕಾರಿಗಳು ಭೇಟಿ ನೀಡಿದ ನಂತರ ನೀಡಿರುತ್ತಾರೆ. ಈ ಹಿನ್ನೆಲೆ ಮಳಿಗೆಯು ರಸಗೊಬ್ಬರ (ಸಾವಯವ, ನಿರವಯವ ಅಥವಾ ಮಿಶ್ರಿತ) ನಿಯಂತ್ರಣ ಆದೇಶ 1985 ಕ್ಲಾಸ್ 3, 4, 5, 8, 35 ಮತ್ತು ಅಗತ್ಯ ವಸ್ತುಗಳ ಕಾನೂನು 1955ರ ಕಲಂ 8 ಮತ್ತು 9 ರ ನಿಯಮಾವಳಿಗಳನ್ನು ಉಲ್ಲಂಘಿಸಿರುತ್ತಾರೆ.

ದೂರುದಾರರ ಲಿಖಿತ ದೂರು ಹಾಗೂ ವಿಡಿಯೋ ಸಂದೇಶದನ್ವಯ ಜಂಟಿ ಕೃಷಿ ನಿರ್ದೇಶಕರು ಹಾಗೂ ಸಹಾಯಕ ಕೃಷಿ ನಿರ್ದೇಶಕರು (ಜಾರಿದಳ–1) ಇವರ ದೂರವಾಣಿ ಆದೇಶದಂತೆ ನಿಯಮಾವಳಿಗಳ ಉಲ್ಲಂಘನೆಗಾಗಿ ಶ್ರೀ ನಾಗರಾಜ ಟ್ರೇಡಿಂಗ್ ಕಂಪನಿ, ಎಸ್.ಜಿ ಗಂಜ್, ಕೊಪ್ಪಳ (ನೋಂದಣಿ ಸಂಖ್ಯೆ: ೦ಙ೦/7/ಈಇ19–2044947/2020–2021 ರಸಗೊಬ್ಬರ ಮಾರಾಟ ಮಳಿಗೆಯ ಪರವಾನಿಗೆ (ಲೈಸನ್ಸ್)ಯನ್ನು ಕ್ಲಾಸ್ 31(2)ರ ಪ್ರಕಾರ ಅಮಾನತ್ತುಗೊಳಿಸಿ ಆದೇಶಿಸಿದೆ ಎಂದು ಕೊಪ್ಪಳ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್‌ಸಿಪಿ, ಟಿಎಸ್‌ಪಿ ಅನುದಾನ ಬಳಸದೇ ನಿರ್ಲಕ್ಷ್ಯ ವಹಿಸಿದಲ್ಲಿ ಕಾನೂನು ಕ್ರಮ: ಜಿಲ್ಲಾಧಿಕಾರಿ ನಿತೀಶ್ ಕೆ. ಎಚ್ಚರಿಕೆ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 11–ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನಸಂಖ್ಯೆ ಹೆಚ್ಚಿನ ಮಟ್ಟದಲ್ಲಿದ್ದು, ಈ ಜನರಿಗೆ ಅನುಕೂಲವಾಗುವನಿಟ್ಟಿನಲ್ಲಿ ಎಸ್‌ಸಿಪಿ, ಟಿಎಸ್‌ಪಿ ಅನುದಾನವನ್ನು ನಿಗದಿತ ಅವಧಿಯೊಳಗೆ ಕಡ್ಡಾಯವಾಗಿ ಸದ್ಬಳಕೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜುಲೈ 09ರ ಗುರುವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆಯಡಿ 2025ರ ಜೂನ್ ಅಂತ್ಯದವರೆಗಿನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಉಪಯೋಜನೆಯಡಿ ಸೌಲಭ್ಯಗಳನ್ನು ಒದಗಿಸಲು ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯನ್ನು ಶೀಘ್ರವೇ ಪೂರ್ಣಗೊಳಿಸಿ ಪಟ್ಟಿ ಮಾಡಬೇಕು. ಅರ್ಜಿಗಳನ್ನು ಆಹ್ವಾನಿಸಿದ್ದಲ್ಲಿ ನಿಗದಿತ ಅವಧಿಯೊಳಗೆ ಪ್ರಕ್ರಿಯೆ ಕೈಗೊಂಡು ಪಟ್ಟಿ ಸಿದ್ಧಪಡಿಸಬೇಕು. ಫಲಾನುಭವಿಗಳಿಗೆ ಆದಷ್ಟು ಶೀಘ್ರವೇ ಸೌಲಭ್ಯಗಳು ತಲುಪುವಂತೆ ನೋಡಿಕೊಳ್ಳಬೇಕು ಎಂದರು.

ಪ್ರತಿ ಇಲಾಖೆಗೆ ಪರಿಶಿಷ್ಟರ ಕಾರ್ಯಕ್ರಮಗಳಿಗಾಗಿ ಪ್ರತ್ಯೇಕವಾಗಿ ಹಣ ನಿಗದಿಯಾಗುತ್ತದೆ. ಫಲಾನುಭವಿಗಳ ಗುರಿಯೂ ನಿರ್ಧಾರವಾಗಿರುತ್ತದೆ. ಆದರೂ ವಿಳಂಬವಾಗಿ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ನಡೆಸುವುದು ಸರಿಯಲ್ಲ. ಆದಷ್ಟು ಮುಂಚಿತವಾಗಿಯೇ ಗುರಿಗೆ ಅನುಸಾರ ಫಲಾನುಭವಿಗಳ ಪಟ್ಟಿ ಸಿದ್ಧಪಡಿಸಿಕೊಳ್ಳಬೇಕು. ಈ ಕಾರ್ಯದಲ್ಲಿ ವಿಳಂಬ ಮಾಡಬಾರದು ಎಂದರು.

ಶೋಷಿತ ಸಮಾಜದ ಮೇಲೆ ಕಾಳಜಿವಹಿಸಿ ಸರ್ಕಾರವು ವಿಶೇಷವಾಗಿ ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಅನುದಾನ ಮೀಸಲಿಡುತ್ತದೆ. ಇದನ್ನು ಅಧಿಕಾರಿಗಳು ಅರಿಯಬೇಕು. ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಜನಾಂಗ ಹೆಚ್ಚಾಗಿದ್ದು, ಅವರಿಗೆ ಈ ಅನುದಾನ ಸಹಾಯಕ್ಕೆ ಬರಬೇಕು. ಎಸಿಪಿ, ಟಿಎಸ್‌ಪಿ ಅನುದಾನವು ಬಳಕೆಯಾಗದೆ ಮರಳಿ ಹೋಗದಂತೆ ಎಚ್ಚರ ವಹಿಸಬೇಕು. ಕಾಮಗಾರಿಗಳನ್ನು ನಿರ್ದಿಷ್ಟಸಮಯದಲ್ಲಿ ಮುಗಿಸಬೇಕು. ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಯುವಜನಾಂಗಕ್ಕೆ ಕ್ರೀಡಾ ಇಲಾಖೆಯಿಂದ ವಾಲಿಬಾಲ್, ಅಥ್ಲೆಟಿಕ್ಸ್ ಸ್ಪರ್ಧೆಗಳನ್ನು ಹಮ್ಮಿಕೊಳ್ಳಬೇಕು. ಸ್ಪರ್ಧೆಯಲ್ಲಿ ವಿಜೇತರಾದ ಅವರಿಗೆ ಉತ್ತಮ ರೀತಿ ತರಬೇತಿ ನೀಡಿ ಅವರಿಗೆ ಪ್ರೋತ್ಸಾಹ ನೀಡಬೇಕು. ಇದಕ್ಕಾಗಿ ಜಿಲ್ಲಾಡಳಿತದಿಂದ ಅಗತ್ಯ ಸಹಕಾರ ನೀಡಲಾಗುತ್ತದೆ. ಯುವಕರು ಮಾದಕ ವಸ್ತುಗಳ ಸೇವನೆಯಿಂದ ಹೊರಬರಲು ಕ್ರೀಡೆ ಬಗ್ಗೆ ಹೆಚ್ಚಿನ ಆಸಕ್ತಿ ಬರುವಂತೆ ಮಾಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಸಮುದಾಯದ ರೈತರಿಗೆ ರೇಷ್ಮೆ ಬೆಳೆ ಬಗ್ಗೆ ಹೆಚ್ಚಿನ ಮಾಹಿತಿ ನೀಡಬೇಕು. ಇಲಾಖೆಯಿಂದ ದೊರೆಯುವ ಸೌಲಭ್ಯಗಳು ಕುರಿತು ಅವರಿಗೆ ಮನವರಿಕೆ ಮಾಡಬೇಕು. ರೇಷ್ಮೆ ಬೆಳೆಯಲ್ಲಿ ಪ್ರಗತಿ ಸಾಧಿಸಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ ಕಾಂದೂ ಅವರು ಮಾತನಾಡಿ, ಸ್ವಸಹಾಯ ಸಂಘಗಳ ಸದಸ್ಯರನ್ನು ಸೇರಿಸಿ ಮೀನುಗಾರಿಕೆ ಇಲಾಖೆ ಸೇರಿದಂತೆ ವಿವಿಧ ಯೋಜನೆಗಳ ಸೌಲಭ್ಯ ಬಗ್ಗೆ ತಿಳಿಸಬೇಕು. ಜಿಲ್ಲೆಯಲ್ಲಿ ಮೀನು ಸಾಗಾಣಿಕೆ ಪ್ರಮಾಣವನ್ನು ಹೆಚ್ಚಿಸಲು ಸಂಬಂಧಿಸಿದ ಅಧಿಕಾರಿಗಳು ಟೆಂಡರ್ ಪ್ರಕ್ರಿಯೆ ನಡೆಸಿ ಅಗತ್ಯ ಕ್ರಮವಹಿಸಬೇಕು ಎಂದು ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂಧೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ್ ಕುಮಾರ್, ಯುವಜನ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ವಿರೇಶ್ ನಾಯಕ, ಪಂಚಾಯತ್ ರಾಜ್ ಇಂಜನಿಯರ ವಿಭಾಗದ ಸಹಾಯಕ ಅಭಿಯಂತರರಾದ ಚಂದ್ರಕಲಾ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಅಧಿಕಾರಿ ರಾಜೇಂದ್ರ ಜಲ್ದಾರ್, ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರವಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿ ಇದ್ದರು.

## ಯೂರಿಯಾ ಗೊಬ್ಬರ ಅನಧಿಕೃತವಾಗಿ ಶೇಖರಿಸಿಟ್ಟವರ ಮೇಲೆ ಕ್ರಮ– ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲೆಯಲ್ಲಿ ಈಗಾಗಲೇ ಯೂರಿಯಾ ಗೊಬ್ಬರ ಕಳೆದ ಭಾರಿಗಿಂತ ಹೆಚ್ಚು ಸರಬರಾಜು ಆಗಿದ್ದು ಇನ್ನೂ ಜಿಲ್ಲೆಯಲ್ಲಿ ಯಾರಾದರೂ ಅನಧಿಕೃತವಾಗಿ ಸ್ಟಾಕ್ ಇಟ್ಟದ್ದು ಕಂಡು ಬಂದರೆ ಅಂತಹವರ ವಿರುದ್ದ ಕ್ರಮ ತೆಗೆದುಕೊಳ್ಳುವುದರ ಜೊತೆಗೆ ಅವರ ಅಂಗಡಿಗಳ ಲೈಸೆನ್ಸಗಳನ್ನು ರದ್ದು ಪಡಿಸಬೇಕೆಂದು ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಅವರು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಛೇರಿಯ ವಿಡಿಯೋ ಕಾನ್ಪರೇನ್ಸ್ ಹಾಲನಲ್ಲಿ ಕೊಪ್ಪಳ ಜಿಲ್ಲೆಯ ಬೆಳೆ ಸಮೀಕ್ಷೆ ಹಾಗೂ ಬೆಳೆವಿಮೆ ಪ್ರಗತಿ ಪರಿಶೀಲನೆ ಕುರಿತು ಕೃಷಿ ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿಗಳು, ಎಸ್.ಬಿ.ಐ ಲೀಡಬ್ಯಾಂಕ್ ಮ್ಯಾನೇಜರ್, ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶಿಲ್ದಾರರು, ಸಹಾಯಕ ಕೃಷಿ ಅಧಿಕಾರಿಗಳು, ರೈತ ಸಂಪರ್ಕ ಅಧಿಕಾರಿಗಳು, ಇನ್ಸೂರೆನ್ಸ್ ಕಂಪನಿಯ ಪ್ರತಿನಿಧಿಗಳು, ಗ್ರಾಮ ಒನ್ ಹಾಗೂ ಸಾಮಾನ್ಯ ಸೇವಾ ಕೇಂದ್ರಗಳ ಪ್ರತಿನಿಧಿಗಳೊಂದಿಗೆ ಗೂಗಲ್ ಮೀಟ್ ಮುಖಾಂತರ ವಿಡಿಯೋ ಸಂವಾದ ನಡೆಸಿ ಮಾತನಾಡಿದರು.

ಕೊಪ್ಪಳ ಜಿಲ್ಲೆಯಲ್ಲಿ ಕೃಷಿ ಅಧಿಕಾರಿಗಳು ಹಾಗೂ ವಿಜಿಲೆನ್ಸ್ ಟೀಂನವರು ಹೆಚ್ಚು ಕ್ರೀಯಾತ್ಮಕವಾಗಿ ಕೆಲಸ ಮಾಡಬೇಕು. ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆ ಕಳೆದ ವರ್ಷ 86 ಸಾವಿರ ರೈತರು ಮಾಡಿಸಿದ್ದು, ಈ ಸಲ ಮಳೆ ಕಡಿಮೆ ಆಗಿರುವುದರಿಂದ ಹೆಚ್ಚಿನ ರೈತರು ಬೆಳೆ ವಿಮೆ ಮಾಡಿಸಲು ಅವರಿಗೆ ಮಾಹಿತಿ ನೀಡಬೇಕು. ಬೆಳೆ ಸಮೀಕ್ಷೆ ಕಾರ್ಯವನ್ನು ಆದಷ್ಟು ಬೇಗನೆ ಜಿಲ್ಲೆಯಲ್ಲಿ ಮಾಡಿಮುಗಿಸಬೇಕೆಂದು ಹೇಳಿದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ರುದ್ರೇಶಪ್ಪ ಟಿ ಅವರು ಮಾತನಾಡಿ ಕಳೆದ ವರ್ಷ 16445 ಮೆಟ್ರಿಕ್ ಟನ್ ರಸಗೊಬ್ಬರ ವಿತರಣೆ ಮಾಡಲಾಗಿತ್ತು ಈ ವರ್ಷ 19799 ಮೆಟ್ರಿಕ್ ಟನ್ ರಸಗೊಬ್ಬರ ವಿತರಣೆ ಮಾಡಲಾಗಿದ್ದು, ಇನ್ನೂ 9 ಸಾವಿರ ಮೆಟ್ರಿಕ್ ಟನ್ ರಸಗೊಬ್ಬರ ಸ್ಟಾಕ್ ಇದ್ದು ಜಿಲ್ಲೆಯಲ್ಲಿ ಯಾವುದೇ ರಸಗೊಬ್ಬರದ ಕೊರತೆ ಇಲ್ಲ. ಕಳ್ಳ ಸಂತೆಯಲ್ಲಿ ಅನಧಿಕೃತ ರಸಗೊಬ್ಬರ ಮಾರಾಟ ಮತ್ತು ದಾಸ್ತಾನು ಕಂಡು ಬಂದಲ್ಲಿ ರೈತರು ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರ ಹಾಗೂ ಕೃಷಿ ಇಲಾಖೆಯ ಜಾಗೃತ ದಳದ ಅಧಿಕಾರಿಗಳಾದ ಸುನಿಲ್ ಕುಮಾರ್ ಪೋನ ನಂಬರ್ 8277932117 ಹಾಗೂ ನಾಗರಾಜ ಪೋನ ನಂಬರ್ 8277932109 ಇವರಿಗೆ ಕರೆ ಮಾಡಿ ದೂರ ನೀಡಬಹುದಾಗಿದ್ದು, ಈ ಸೇವೆ ದಿನದ 24 ಗಂಟೆ ಲಭ್ಯವಿದೆ. ಈಗಾಗಲೇ ಜಿಲ್ಲೆಯಲ್ಲಿ ರಸಗೊಬ್ಬರ ನಿಯಂತ್ರಣ ಕಾಯ್ದೆ ಉಲ್ಲಂಘನೆ ಮಾಡಿದ 2 ರಸಗೊಬ್ಬರಗಳ ಅಂಗಡಿಗಳ ಲೈಸೆನ್ಸ ಅಮಾನತ್ತು ಮಾಡಿದ್ದು ಮತ್ತೆರಡು ಅಂಗಡಿಗಳ ಲೈಸೆನ್ಸಗಳನ್ನು ರದ್ದುಪಡಿಸಲಾಗಿದೆ ಎಂದು ಹೇಳಿದರು.

ಗೂಗಲ್ ಮೀಟ್ ವಿಡಿಯೋ ಸಂವಾದದಲ್ಲಿ ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರಾದ ಕೃಷ್ಣ ಉಕ್ಕುಂದ. ಕೃಷಿ ಇಲಾಖೆಯ ಉಪನಿರ್ದೇಶಕರಾದ ಎಲ್.ಸಿದ್ದೇಶ್ವರ. ಕನಕಗಿರಿ ತಹಶಿಲ್ದಾರ ವಿಶ್ವನಾಥ ಮುರಡಿ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶಿಲ್ದಾರರು. ಸಹಾಯಕ ಕೃಷಿ ಅಧಿಕಾರಿಗಳು. ರೈತ ಸಂಪರ್ಕ ಅಧಿಕಾರಿಗಳು. ಇನ್ಸೂರೆನ್ಸ್ ಕಂಪನಿಯ ಹಾಗೂ ಗ್ರಾಮ ಒನ್ ಕೇಂದ್ರದ ಪ್ರತಿನಿಧಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ವಿಶ್ವ ಜನಸಂಖ್ಯಾ ದಿನಾಚರಣೆ: ರಾಯಚೂರಲ್ಲಿ ಜನ ಜಾಗೃತಿ ಜಾಥಾ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 11–ವಿಶ್ವ ಜನಸಂಖ್ಯಾ ದಿನಾಚರಣೆಯ ಪ್ರಯುಕ್ತ ನಗರದಲ್ಲಿ ಶುಕ್ರವಾರ ಜಾಗೃತಿ ಜಾಥಾಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಚಾಲನೆ ನೀಡಿದರು.

ಮಹಿಳೆಯ ದೈಹಿಕ ಮತ್ತು ಮಾನಸಿಕ ಆರೋಗ್ಯ ಸ್ಥಿರತೆಯು ತಾಯ್ತನಕ್ಕೆ ಸರಿಯಾದ ವಯಸ್ಸು ಎಂಬ ಘೋಷವಾಕ್ಯದೊಡನೆ ಜುಲೈ 10ರ ಶುಕ್ರವಾರ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕುಟುಂಬ ಕಲ್ಯಾಣ ವಿಭಾಗ ರಾಯಚೂರು, ರಿಮ್ಸ್ ಭೋಧಕ ಆಸ್ಪತ್ರೆ, ಎಸ್.ಕೆ.ಇ.ಪ್ಯಾರಾ ಮೆಡಿಕಲ್ ಕಾಲೇಜ್ ರಾಯಚೂರು ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯ ಬಳಿ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸುಖದಿಂದ ಸಂಸಾರ ನಡೆಸಲು ಎರಡು ಮಕ್ಕಳು ಸಾಕು. ಇದರಿಂದ ಗುಣಮಟ್ಟದ ಶಿಕ್ಷಣ, ಆರೋಗ್ಯ, ಪೌಷ್ಟಿಕ ಆಹಾರ ಕೊಡಲು ಸಾಧ್ಯವಾಗುತ್ತದೆ. ಜೊತೆಗೆ ದೇಶದ ಅಭಿವೃದ್ಧಿಗೆ ಪೂರಕವಾಗುತ್ತದೆ ಎಂದರು. ಹೆಚ್ಚುತ್ತಿರುವ ಜನಸಂಖ್ಯೆಯಿಂದ ಆಗುತ್ತಿರುವ ದುಷ್ಪರಿಣಾಮಗಳ ಬಗ್ಗೆ ಜನರಲ್ಲಿ ಜಾಗೃತಿ, ಅರಿವು ಮೂಡಿಸಲು ವಿಶ್ವ ಜನಸಂಖ್ಯಾ ದಿನ ಆಚರಿಸಲಾಗುತ್ತಿದೆ. ಮಹಿಳೆಯ ದೈಹಿಕ ಮತ್ತು ಮಾನಸಿಕ ಆರೋಗ್ಯ ಸ್ಥಿರತೆಯು ತಾಯ್ತನಕ್ಕೆ ಸರಿಯಾದ ವಯಸ್ಸು ಎಂಬುದು ಈ ಸಲದ ದಿನಾಚರಣೆಯ ಘೋಷಣೆಯಾಗಿದೆ ಎಂದು ಅವರು ತಿಳಿಸಿದರು.

ದೇಶದ ಅಭಿವೃದ್ಧಿಗೆ ಜನ ಬೇಕು. ಆದರೆ, ಮಿತಿಮೀರಿದ ಜನಸಂಖ್ಯೆ ಅಭಿವೃದ್ಧಿಗೆ ಮಾರಕವಾಗುತ್ತದೆ. ಸಮಸ್ಯೆಗಳು ಹೆಚ್ಚುತ್ತಾ ಹೋಗುತ್ತವೆ. ಆದ್ದರಿಂದ ಚಿಕ್ಕ ಸಂಸಾರ ಇದ್ದಷ್ಟು ಉತ್ತಮ ಜೀವನ ನಡೆಸಬಹುದು. ಮದುವೆಯಾಗಲು ಗಂಡಿಗೆ 21 ವರ್ಷ, ಹೆಣ್ಣಿಗೆ 18 ತುಂಬಿರಬೇಕು. ಮಕ್ಕಳ ಜನನದ ಅಂತರ ಕನಿಷ್ಠ 3 ವರ್ಷ ಇರಬೇಕು ಎಂದು ಸಲಹೆ ನೀಡಿದರು. ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಸಂಖ್ಯಾ ದರವನ್ನು ಹೊಂದಿದ್ದು, ಇದನ್ನು ಕಡಿಮೆ ಮಾಡಲು ಜನಸಾಮಾನ್ಯರು ಜಿಲ್ಲಾಡಳಿದೊಂದಿಗೆ ಕೈಜೋಡಿಸಬೇಕು. ಜನನದ ಅಂತರವನ್ನು ಹೆಣ್ಣುಮಕ್ಕಳು ಹಾಗೂ ಪುರುಷರು ಪಾಲಿಸಬೇಕು. ಅದಕ್ಕಾಗಿ ಶಸ್ತ್ರ ಚಿಕಿತ್ಸೆಗಳಿವೆ. ಅವುಗಳನ್ನು ಬಳಸಿಕೊಳ್ಳಬೇಕೆಂದರು.

ನಗರದ ಪ್ರಮುಖ ಬೀದಿಗಳಲ್ಲಿ ಜಾಥ: ವಿಶ್ವ ಜನ ಸಂಖ್ಯಾ ದಿನಾಚರಣೆಯ ಅಂಗವಾಗಿ ಆಯೋಜಿಸಿರುವ ಜಾಥಾವು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಿಂದ ಪ್ರಾರಂಭವಾಗಿ ಭಗತ್‌ಸಿಂಗ್ ವೃತ್ತದ ಮಾರ್ಗವಾಗಿ ತಿನ್‌ಕಂದಿಲ್, ಉಸ್ಮಾನಿಯಾ ತರಕಾರಿ ಮಾರುಕಟ್ಟೆ ಮೂಲಕ ಮಹಾವಿರ ವೃತ್ತದವರೆಗೆ ಸಾಗಿತು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ, ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ.ವಿಜಯಶಂಕರ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಶಿವಕುಮಾರ, ರಿಮ್ಸ್ ಕಾಲೇಜಿನ ಪ್ರಾಂಶುಪಾಲರಾದ ಡಾ. ರಾಹುಲ್ ಕೀರ್ತ, ಜಿಲ್ಲಾ ವಿಬಿಡಿಸಿ ಅಧಿಕಾರಿ ಡಾ.ಚಂದ್ರಶೇಖರಯ್ಯ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿಗಳಾದ ಡಾ.ಎಂ.ಡಿ.ಶಾಕೀರ್, ಡಾ.ಗಣೇಶ್, ರಾಯಚೂರು ತಾಲೂಕ ಆರೋಗ್ಯಾಧಿಕಾರಿ ಡಾ.ಪ್ರಜ್ವಲ್ ಸೇರಿದಂತೆ ರಿಮ್ಸ್, ಎಸ್.ಕೆ.ಇ. ಪ್ಯಾರಾ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಆಶಾ ಕಾರ್ಯಕರ್ತರು ಇದ್ದರು.

## ಜುಲೈ 2ನೇ ವಾರದಲ್ಲಿ ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ತರಬೇತಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 11–ಇಲ್ಲಿನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಇಚ್ಚಿಸುವ ಎಲ್ಲಾ ವರ್ಗದ ಪುರುಷರುಗೂ ಮತ್ತು ಮಹಿಳೆಯರುಗಳಿಗೆ 1 ದಿನದ ಉದ್ಯಮಶೀಲತಾ ತಿಳುವಳಿಕೆ ತರಬೇತಿ ಕಾರ್ಯಕ್ರಮವನ್ನು ರಾಯಚೂರಿನಲ್ಲಿ 2025 ಜುಲೈ 2ನೇ ವಾರದಲ್ಲಿ ಹಮ್ಮಿಕೊಳ್ಳಲಾಗಿದೆ.

ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸ್ವಂತ ಉದ್ಯೋಗ ಸ್ಥಾಪಿಸಲು ಸರ್ಕಾರದ ಯೋಜನೆಗಳು, ಬ್ಯಾಂಕಿನ ವ್ಯವಹಾರ ಇತ್ಯಾದಿ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು, ಇದಕ್ಕಾಗಿ ರಾಯಚೂರು ಜಿಲ್ಲೆಯ ಆಸಕ್ತ ಎಲ್ಲಾ ವರ್ಗದ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು 18 ವರ್ಷ ದಿಂದ 40 ವರ್ಷ ವಯಸ್ಸಿನವರಾಗಿರಬೇಕು ಹಾಗೂ ಕನಿಷ್ಟ 8 ನೇ ತರಗತಿ ಪಾಸಾಗಿರಬೇಕು. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತರಿರುವವರು ಜುಲೈ 15ರೊಳಗಾಗಿ ಮೊಬೈಲ್ ಸಂಖ್ಯೆ:9986600631,8073789886 ಗೆ ಸಂಪರ್ಕಿಸಿ ತಮ್ಮ ಹೆಸರಗಳನ್ನು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗೆ ಪ್ರತಿಯೊಬ್ಬ ಅಧಿಕಾರಿಗಳ ಸಹಕಾರ:ಕೃಷ್ಣ ಬಾಜಪೇಯಿ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜು.11: ಕಲ್ಯಾಣ ಕರ್ನಾಟಕಭಾಗದಸಮಗ್ರಅಭಿವೃದ್ಧಿಗೆ ಹಲವಾರು ಕಾರ್ಯಗಳಿಗೆ ಸಹಕಾರ ನೀಡಿದ ಜಿಲ್ಲಾಧಿಕಾರಿಗಳು ಮತ್ತು ಪ್ರತಿಯೊಂದು ಇಲಾಖೆ ಅಧಿಕಾರಿಗಳು ಪರಸ್ಪರ ಸಹಕಾರ ನೀಡಿದ್ದಾರೆ ಎಂದು ಪ್ರಾದೇಶಿಕ ಆಯುಕ್ತರಾದ ಕೃಷ್ಣ ಬಾಜಪೇಯಿ ಅವರು ಹೇಳಿದರು.

ಗುರುವಾರದಂದು ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಪ್ರಾದೇಶಿಕ ಆಯುಕ್ತರ ವತಿಯಿಂದ ಹಾಗೂ ಜಿಲ್ಲಾಡಳಿತ ವತಿಯಿಂದ ಪ್ರಾದೇಶಿಕ ಆಯುಕ್ತರಾಗಿ ಕಾರ್ಯನಿರ್ವಹಿಸಿದ್ದ ಕೃಷ್ಣ ಬಾಜಪೇಯಿ ಬೀಳ್ಕೊಡುಗೆ ಮತ್ತು ಅಭಿನಂದನಾ ಹಾಗೂ ಜಿಲ್ಲೆಗೆ ಪ್ರಾದೇಶಿಕ ಆಯುಕ್ತರಾಗಿ ಆಗಮಿಸಿದ್ದ ಜಹೀರಾ ನಸೀಮ ಅವರಿಗೆ ಆತ್ಮೀಯ ಸ್ವಾಗತ ಸಮಾರಂಭ ಕಾರ್ಯಕ್ರಮದಲ್ಲಿ ಮಾತನಾಡಿದರು.

ಈ ಭಾಗದಲ್ಲಿ ನಾನು ಎರಡು ವರ್ಷ 10 ತಿಂಗಳ ಕಾಲ ಕಾರ್ಯನಿರ್ವಹಿಸಿದ್ದೇನೆ ಎಂದು ಪ್ರತಿಯೊಬ್ಬರು ನೀಡಿದ ಸಹಕಾರ ನನಗೆ ಇನ್ನಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಲು ಪೇರಣೆಯಾಯಿತು. ಕೆಲಸ ನಿರ್ವಹಿಸದ್ದ ಸಮಯದಲ್ಲಿ ಈ ಭಾಗದ ಪ್ರತಿಯೊಂದು ಸಮಸ್ಯೆಗಳಿಗೆ ಸ್ಪಂದಿಸಿ ಅದಕ್ಕೆ ಪರಿಹಾರಗಳನ್ನು ನೀಡಿ ಪ್ರಾಮಾಣಿಕತೆಯಿಂದ ಸರಕಾರದ ಸೇವೆಯನ್ನು ಸಲ್ಲಿಸಿದ್ದೇನೆ ಕಲಬುರಗಿಯಲ್ಲಿ ನಡೆದ ಸಂಪುಟ ಸಭೆ, ಮತ ಏಣಿಕೆ ಕಾರ್ಯ ಸರ್ಕಾರದ ಪ್ರತಿಯೊಂದು ಕಾರ್ಯಕ್ರಮಗಳನ್ನು ತಮ್ಮೆಲ್ಲರ ಸಹಕಾರದಿಂದ ಯಶಸ್ವಿಯಾಗಿ ನಿರ್ವಹಿಸಿದ್ದೇನೆ ಎಂದು ತಿಳಿಸಿದರು. .

ಜಿಲ್ಲಾಧಿಕಾರಿಯವರು ಜಿಲ್ಲೆಯ ಸಮಗ್ರ ಅಭಿವೃದ್ಧಿ ಅವಿರತವಾಗಿ ಶ್ರಮಿಸುತ್ತಿದ್ದಾರೆ ಎಂತಹ ಕ್ಲಿಷ್ಟಕರವಾದ ಸಮಯದಲ್ಲಿಯೂ ಬಹಳಷ್ಟು ತಾಳ್ಮೆಯಿಂದ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡುವುದರ ಮುಖಾಂತರ ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಿದ್ದಾರೆ. ಪೊಲೀಸ್ ಇಲಾಖೆಯಿಂದ ಬಹಳಷ್ಟು ಸಹಕಾರ ನೀಡಿದ್ದಾರೆ ಕಂದಾಯ ಇಲಾಖೆಯಲ್ಲಿಯೂ ಹಕ್ಕು ಪತ್ರ ವಿತರಣೆಯನ್ನು ಮಾಡಿದ್ದೇವೆ ಎಂದರು.

ಪ್ರಾದೇಶಿಕ ಆಯುಕ್ತರಾಗಿ ಆಗಮಿಸಿದ್ದ ಜಹೀರಾ ನಸೀಮ್ ಅವರು ಕಲಬುರಗಿ ಜಿಲ್ಲೆಯವರಾಗಿದ್ದು, ಈ ಭಾಗದ ಕಾರ್ಯನಿರ್ವಹಿಸಿದ್ದ ಕಾರಣ ಅವರಿಗೆ ಬಹಳಷ್ಟು ಅನುಭವ ಇದೆ ಮುಂದೆ ಜಿಲ್ಲಾಡಳಿತ ಸಹಕಾರದಿಂದ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಕಾರ್ಯನಿರ್ವಹಿಸುತ್ತಾರೆ ಎಂದು ಅವರು ಹೇಳಿದರು.

ಕಲಬುರಗಿ ಪ್ರಾದೇಶಿಕ ಅಯುಕ್ತರಾಗಿ ಆಗಮಿಸಿದ ಜಹೀರಾ ನಸೀಮ್ ಅವರು ಮಾತನಾಡಿ, ಕಲಬುರಗಿ ಜಿಲ್ಲೆಯಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳ ಆಗಬೇಕಾದರೆ ತಮ್ಮೆಲ್ಲರ ಸಹಕಾರ ಅಗತ್ಯ ಎಂದು ಹೇಳಿದರು.

ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಎಲ್ಲ ಅಧಿಕಾರಿಗಳು ಜಿಲ್ಲೆಯಲ್ಲಿ ಯಾವುದೇ ಚುನಾವಣೆ, ಸಂಪುಟ ಸಭೆಗಳು, ಮತ ಏಣಿಕೆ ಕಾರ್ಯಗಳು ಯಶಸ್ವಿಯಾಗಿ ನಡೆಯಬೇಕಾದರೆ ಜಿಲ್ಲಾಡಳಿತ ಒಂದು ತಂಡವಾಗಿ ಪ್ರತಿಯೊಬ್ಬರ ಸಹಾಯ ಸಹಕಾರದಿಂದ ಕಾರ್ಯನಿರ್ವಹಿಸಿದ್ದಾರೆ. ಜಿಲ್ಲೆಯ ಪ್ರಾದೇಶಿಕ ಆಯುಕ್ತರಾಗಿ ಅಧಿಕಾರ ವಹಿಸಿಕೊಂಡ ನಾನು ಕೂಡ ನೀಲಿ ನಕ್ಷೆಯನ್ನು ತಯಾರಿಸಿಕೊಂಡು ಈ ಭಾಗದ ಸಮಗ್ರ ಅಭಿವೃದ್ಧಿ ಪ್ರಮಾಣಿಕ ಕಾರ್ಯನಿರ್ವಹಿಸುತ್ತೇನೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ನಳಿನ್ ಅತುಲ್ ಅವರು ಮಾತನಾಡಿ, ಸುಮಾರು 2 ವರ್ಷದ ಹೆಚ್ಚು ಕಾಲ ಜಿಲ್ಲೆಯ ಪ್ರಾದೇಶಿಕ ಆಯುಕ್ತರಾಗಿ ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವ ಮುಖಾಂತರ ಸರಕಾರದ ಕಾರ್ಯಕ್ರಮ ಯಶಸ್ವಿಗೊಳಿಸಲು ಪ್ರಾಮಾಣಿಕ ಸೇವೆ ಸಲ್ಲಿಸಿದ್ದಾರೆ.

ವಿಶೇಷವಾಗಿ ರೈತರಿಗೆ ಮತ್ತು ಕಲ್ಯಾಣ ಕರ್ನಾಟಕ ಭಾಗದ ಬರುವ ಪ್ರತಿಯೊಂದು ಜಿಲ್ಲೆಗಳ ಸಮಸ್ಯೆಗೆ ತ್ವರಿತವಾಗಿ ಸ್ಪಂದಿಸಿ ಅದಕ್ಕೆ ಪರಿಹಾರ ನೀಡುವ ಮುಖಾಂತರ ಪ್ರತಿಯೊಬ್ಬ ಅಧಿಕಾರಿಗೂ ಸೂಕ್ತ ಮಾರ್ಗದರ್ಶನ ನೀಡಿದರು. ಬಿಹಾರ ರಾಜ್ಯದಿಂದ ಬಂದು ಕನ್ನಡ ಭಾಷೆ ಮೇಲೆ ಅಭಿಮಾನದಿಂದ ಬೀಳ್ಕೊಡಗೆ ಸಮಾರಂಭದಲ್ಲಿ ಕನ್ನಡ ಭಾಷೆಯಲ್ಲಿ ಮಾತನಾಡಿದರು ಇವರು ನಿರ್ವಹಿಸಿದ ಕಾರ್ಯ ಪ್ರತಿಯೊಬ್ಬರಿಗೆ ಸ್ಪೂರ್ತಿಯಾಗಬೇಕು ಎಂದರು.

ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ ಮಾತನಾಡಿ, ಪ್ರಾದೇಶಿಕ ಆಯುಕ್ತ ಕೃಷ್ಣ ಬಾಜಪೇಯಿ ಅವರು ಕಲ್ಯಾಣ ಕರ್ನಾಟಕ ಸಮಗ್ರ ಅಭಿವೃದ್ಧಿಗೆ ಯಾವುದೇ ರೀತಿಯ ಪ್ರಚಾರವಿಲ್ಲದೇ ದಕ್ಷತೆ ಪ್ರಾಮಾಣಿಕತೆಯಿಂದ ತಮ್ಮ ಕಾರ್ಯನಿರ್ವಹಿಸಿದ್ದಾರೆ. ಎಂದು ಅವರು ಹೇಳಿದರು.

ವಿಶೇಷವಾಗಿ ಶರಣಬಸವೇಶ್ವರ ಹತ್ತಿರ ಅಪ್ಪಾ ಕೆರೆಯ ಪುನ:ಶ್ಚೇತನ ಜಿಲ್ಲೆಯಲ್ಲಿ ಹಲವಾರು ಕೆರೆಗಳ ಪುನ:ಶ್ಚೇತನಗೊಳಿಸಿ ಕೆರೆಯಲ್ಲಿ ನೀರು ಸಂಗ್ರಹಣೆಯಾಗುವಂತೆ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ ಕಂದಾಯ ಇಲಾಖೆಯಲ್ಲಿ ಹಲವಾರು ಕಾರ್ಯಕ್ರಮಗಳು ಮತ್ತು ಕ್ರೀಡೆಯಲ್ಲಿ ಆಸಕ್ತಿ ವಹಿಸಿ ಭಾಗವಹಿಸಿದ್ದಾರೆ ಎಂದರು. ಲೋಕಸಭೆ, ವಿಧಾನ ಸಭೆ, ಸಂಪುಟ ಸಭೆಗಳ ಕಾರ್ಯಕ್ರಮ ಯಶಸ್ವಿಗೊಳಿಸಲು ನನ್ನೊಂದಿಗೆ ಚರ್ಚಿಸಿ ಸೂಕ್ತ ನಿರ್ಧಾರ ತೆಗೆದುಕೊಂಡು ಕಾರ್ಯಕ್ರಮ ಯಶಸ್ವಿಗೊಳಿಸಲು ಸಹಕರಿಸಿದ್ದಾರೆ. ಜಿಲ್ಲಾಡಳಿತ ಮತ್ತು ಪ್ರಾದೇಶಿಕ ಕಚೇರಿ ಪ್ರತಿಯೊಬ್ಬ ಅಧಿಕಾರಿಗಳು ಪ್ರತಿಯೊಂದು ಕಾರ್ಯಕ್ಕೆ ಸಹಕಾರ ನೀಡುವ ಮುಖಾಂತರ ಜಿಲ್ಲಾಡಳಿತ ಒಂದು ಕುಟುಂಬದಂತೆ ಪರಸ್ಪರ ಸಹಕಾರದಿಂದ ಪ್ರತಿಯೊಂದು ಕಾರ್ಯಕ್ರಮಗಳು ಜನರಿಗೆ ತಲುಪಿಸಲು ಮತ್ತು ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಪ್ರತಿಯೊಬ್ಬ ಸಹಕಾರದಿಂದ ಕಾರ್ಯನಿರ್ವಹಿಸಿದ್ದಾರೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಸಮಿತಿ ಅಧ್ಯಕ್ಷ ಲಕ್ಷ್ಮಣ ದಸ್ತಿ ಮಾತನಾಡಿ, ಜಿಲ್ಲೆಗೆ ಅಧಿಕಾರಿಗಳು ಬರುತ್ತಾ-ರೆ ಮತ್ತು ವರ್ಗಾಣೆಯಾದಗ ಜಿಲ್ಲೆಯಿಂದ ಹೋಗುತ್ತಾರೆ ತಮ್ಮ ಅಧಿಕಾರ ಅವಧಿಯಲ್ಲಿ ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂಧಿಸುವ ಅಧಿಕಾರಿಗಳು ಅವರು ಮಾಡಿದ ಅಭಿವೃದ್ಧಿ ಕಾರ್ಯಗಳನ್ನು ಈ ಭಾಗದ ಜನರು ಶ್ರಮಿಸುತ್ತಾರೆ. ಇತಿಹಾಸ ನಿರ್ಮಿಸಬೇಕಾದರೆ ಒಳ್ಳೆಯ ಕೆಲಸಗಳನ್ನು ಮಾಡಬೇಕು ಬಡವರ ಸಮಸ್ಯೆಗಳಿಗೆ ನಯ ವಿನಯದಿಂದ ತ್ವರಿತವಾಗಿ ಸ್ಪಂಧಿಸಿ ಪರಿಹಾರ ನೀಡಿ ತಮ್ಮ ಕಾರ್ಯನಿರ್ವಹಿಸಿದ್ದಾರೆ ಎಂದು ಅವರು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡುರು ಶ್ರೀನಿವಾಸಲು, ಜೆಸ್ಕಾಂನ ವ್ಯವಸ್ಥಾಪಕ ನಿರ್ದೇಶಕ ರವೀಂದ ಕರಲಿಂಗಣ್ಣವರ್, ಕಲಬುರಗಿ ಸಹಾಯಕ ಆಯುಕ್ತೆ ಸಾಹಿತ್ಯ ಮಾತನಾಡಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸ್ವಾಗತಿಸಿದರು. ವೇದಿಕೆ ನಗರ ಪೋಲಿಸ್ ಆಯುಕ್ತರ ಡಾ. ಶರಣಪ್ಪ ಎಸ್.ಡಿ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಜಿಲ್ಲೆಯ ಜಿಲ್ಲಾಮಟ್ಟದ ಅಧಿಕಾರಿಗಳು ತಹಶೀಲ್ದಾರರು ಪ್ರಾದೇಶಿಕ ಕಚೇರಿ ಅಧಿಕಾರಿಗಳು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಬೆಳೆ ವಿಮೆಗೆ ಕೃಷಿ ಇಲಾಖೆಯಿಂದ ಅರಿವು ಮೂಡಿಸಿ:ಸಿದ್ರಾಮಯ್ಯಾ ಸ್ವಾಮಿ




ಬೀದರ. ಜು.11 : ಜಿಲ್ಲೆಯ ರೈತರು ಹೆಚ್ಚಿನ ಪ್ರಮಾಣದಲ್ಲಿ ಬೆಳೆ ವಿಮೆಗೆ ನೋಂದಣಿ ಮಾಡಿಕೊಳ್ಳಲು ಕೃಷಿ ಇಲಾಖೆಯಿಂದ ಗ್ರಾಮ ಮಟ್ಟದಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಮಾಡಬೇಕೆಂದು ಬೀದರ ಜಿಲ್ಲಾ ಕೃಷಿಕ ಸಮಾಜದ ಸಿದ್ರಾಮಯ್ಯಾಸ್ವಾಮಿ ತಿಳಿಸಿದರು. ಅವರು ಇತ್ತೀಚಿಗೆ ಜಂಕೃಷಿ ನಿರ್ದೇಶಕರ ಕಚೇರಿಯಲ್ಲಿ ನಡೆದ ಜಿಲ್ಲೆಯ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕೃಷಿ ಇಲಾಖೆಯ ಎಲ್ಲಾ ಯೋಜನೆಗಳು ರೈತರಿಗೆ ಅನುಕೂಲವಾಗುವ ರೀತಿಯಲ್ಲಿ ಅನುಷ್ಠಾನವಾಗಬೇಕು. ರೈತರು ಕೇವಲ ಸೋಯಾ ಅವರೆ ಬೆಳೆ ಬೆಳೆಯದೆ ಮಿಶ್ರಬೆಳೆ ಪದ್ಧತಿ ಅಸನುಸರಿಸಬೇಕೆಂದರು. ಸಿರಿಧಾನ್ಯ ಬೆಳೆಯುವ ರೈತರಿಗೆ ಸರಕಾರದ ಸಹಾಯಧನ ಇರುವುದರಿಂದ ಹೆಚ್ಚಿನ ರೈತರು ಇದರ ಸದುಪಯೋಗಪಡೆಯಬೇಕು. ರೈತರು ಡಿ.ಎ.ಪಿ ಗೊಬ್ಬರಕ್ಕೆ ಪರ್ಯಾಯ ಸಂಯುಕ್ತ ಗೊಬ್ಬರ ಬಳಕೆ ಹಾಗೂ ಯೂರಿಯಾ ಗೊಬ್ಬರಕ್ಕೆ ಪರ್ಯಾಯವಾಗಿ ನ್ಯಾನೂ ಯರಿಯಾ ಬಳಸುವುದು ಸೂಕ್ತ. ಈ ದಿಸೆಯಲ್ಲಿ ಕೃಷಿ ಇಲಾಖೆಯಿಂದ ಹಾಗೂ ತಾಲ್ಲೂಕು ಕೃಷಿಕ ಸಮಾಜದ ಘಟಕದಿಂದ ವ್ಯಾಪಕ ಪ್ರಚಾರ ಕೈಗೊಂಡು ರೈತರಿಗೆ ಸಂಯುಕ್ತ ಗೊಬ್ಬರ ಬಳಕೆ ಹಾಗೂ ನ್ಯಾನೂ ಯುರಿಯಾ ಬಳಸಲು ಪ್ರೋತ್ಸಾಹಿಸಬೇಕೆಂದರು. ಈ ಸಭೆಯಲ್ಲಿ ಬೀದರ ಜಂಟಿ ಕೃಷಿ ನಿರ್ದೇಶಕರಾದ ದೇವಿಕಾ ಆರ್, ಕೃಷಿ ಅಧಿಕಾರಿ ಕೈಲಾಸನಾಥ, ಜಿಲ್ಲಾ ಕೃಷಿಕ ಸಮಾಜದ ಉಪಾಧ್ಯಕ್ಷ ಉಮಾಕಾಂತ, ಖಜಾಂಚಿ ಗೋವಿಂದರೆಡ್ಡಿ, ಪ್ರಧಾನ ಕಾರ್ಯದರ್ಶಿ ಸಂಗಮೇಶವಾಲೆ, ರಾಜ್ಯ ಪ್ರತಿನಿಧಿ ಹಾಗೂ ಸದಸ್ಯರಾದ ವಿಶ್ವನಾಥ ಪಾಟೀಲ, ಜನವಾಡ ಕೃಷಿ ವಿಜ್ಞಾನ ಕೇಮದ್ರದ ಹಿರಿಯ ವಿಜ್ಞಾನಿ ಡಾ. ಉಮೇಶ, ಡಾ. ಭವಾನಿ, ಕ.ರಾ.ಸ. ಮಂ. ವ್ಯವಸ್ಥಾಪಕ ಮಲ್ಲಿಕಾರ್ಜುನ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಸುಕ್ಷೇತ್ರ ಯಲ್ಲಮ್ಮ ದೇವಸ್ಥಾನ ಶಿವಪೂರ ನೂತನ ಆಡಳಿತ ಮಂಡಳಿಯ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಪಟ್ಟಣದ ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಹುಮನಾಬಾದ ನಗರದ ಐತಿಹಾಸಿಕ ಹಾಗೂ ಭಕ್ತರಿಗೆ ಬೇಡಿದ ವರ ನೀಡುವ ಸುಕ್ಷೇತ್ರ ಶ್ರೀ ಯಲ್ಲಮ್ಮ ದೇವಸ್ಥಾನದ ನೂತನ ಅಡಳಿತ ಮಂಡಳಿಯನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ. ದೇವಸ್ಥಾನದ ಅಧ್ಯಕ್ಷರಾಗಿ ರಮೇಶರೆಡ್ಡಿ ಉಸ್ತೇಲಿ, ಉಪಾಧ್ಯಕ್ಷರಾಗಿ ಸಿದ್ಧಾರೆಡ್ಡಿ ಮುಡಬಿ, ಕಾರ್ಯದರ್ಶಿಯಾಗಿ ಬ್ಯಾಂಕ್-ರೆಡ್ಡಿ ಮುಡಬಿ, ಖಾಜಾಂಚಿಯಾಗಿ ರಾಮರೆಡ್ಡಿ ಕಂಚೆಟ್ಟಿ, ನಿರ್ದೇಶಕರಾಗಿ ಮಾಣಿಕರೆಡ್ಡಿ ಕರ್ಣಿ, ಶಿವಾರೆಡ್ಡಿ ಮುಡಬಿ, ಮೊಹನರೆಡ್ಡಿ ಮುಡಬಿ, ಖೇಮರೆಡ್ಡಿ ಮುಡಬಿ, ವೀರಾ-ರೆಡ್ಡಿ ಪೇದ್ಮಲ್, ತಿರುಮಲಾರೆಡ್ಡಿ ಮಂಡಾ, ಜಗನಾಥರಾವ ಧುಮಾಳೆ, ಚಂದ್ರಕಾಂತರೆಡ್ಡಿ ಮಂಡಾ, ರಾಜರೆಡ್ಡಿ ಕರ್ಣಿ, ಹಣಮಂತರೆಡ್ಡಿ ಯನಪುಸು, ಬ್ರಹ್ಮಾರೆಡ್ಡಿ ಮುಡಬಿ, ಶರಣರೆಡ್ಡಿ ಕನಕಟಕರ್, ಪುರುಷೋತ್ತಮ್‌ರೆಡ್ಡಿ, ನಾಗೇಂದ್ರ ಜಾಧವ, ನಿಂಗಾರೆಡ್ಡಿ ಮುಡಬಿ, ರಾಜರೆಡ್ಡಿ ಸಂಕಟಿ, ಇದೇ ಸಂದರ್ಭದಲ್ಲಿ ಇದ್ದರು.

# ಶೂರರ" ನಾಡಿನಲ್ಲಿ ಜನರ ಮನಸ್ಸು ಗೆಲ್ಲುತ್ತಿರುವ ಸಮಾಜ ಸೇವಕ "ರಮೇಶ್ ದೊರೆ ..!

ಮಲ್ಲಮ್ಮ ನುಡಿ ವಾರ್ತೆ

ಸುರಪುರ: ತಾಲೂಕಿನ ಆಲ್ದಾಳ ಗ್ರಾಮದಲ್ಲಿ ಜನಿಸಿದ ಇವರು ಹಾಗೂ ಇದೀಗ ಜನರ ಮನಸ್ಸು ಗೆಲ್ಲುತ್ತಿರುವ ಸೂರರನಾಡಿನ ಸಮಾಜ ಸೇವಕ ರಮೇಶ್ ದೊರೆ ಅವರು, ತಮ್ಮ ರಾಜಕೀಯ ಗುರು ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕನವರನ್ನು ಸ್ಮರಿಸಿದರು.



ಮಲ್ಲಮ್ಮ ನುಡಿ ಪತ್ರಿಕೆ ಜೊತೆ ಮಾತನಾಡಿದ ಸಂದರ್ಭದಲ್ಲಿ, "ನನ್ನ ರಾಜಕೀಯ ಹಾಗೂ ಸಾಮಾಜಿಕ ಬದುಕಿಗೆ ದಿಕ್ಕು ನೀಡಿದವರು ನನ್ನ ಗುರು ಮಾಜಿ ಶಾಸಕರು ರಾಜಾ ವೆಂಕಟಪ್ಪ ನಾಯಕ. ಅವರ ಮಾರ್ಗದರ್ಶನದಿಂದಲೇ ನಾನು ಇಂದು ಈ ಸ್ಥಾನಕ್ಕಾಗಿದ್ದೇನೆ. ಅವರು ಒಂದು ಪ್ರೇರಣಾ ಶಕ್ತಿ," ಎಂದು ಭಾವುಕರಾಗಿ ಹೇಳಿದರು.

ತಮ್ಮ ಜೀವನದ ಸಾಧನೆಗಳ ಹಿಂದೆ ಗುರುಗಳ ಪಾತ ಹಾಗೂ ಮಾರ್ಗದರ್ಶನವಿದೆ ಎಂದವರು, "ನಾನು ಯಾವಷ್ಟೇ ಬೆಳವಣಿಗೆಯ ಹಾದಿಯಲ್ಲಿ ಸಾಗುತ್ತಿದ್ದರೂ, ನನ್ನನ್ನು ರೂಪಿಸಿದ ಗುರುಗಳನ್ನು ಎಂದಿಗೂ ಮರೆಯಲಾರೆ," ಎಂದು ಹೇಳಿದರು..!

# ಗುಣಮಟ್ಟದ ಆರೋಗ್ಯ ಕಾಪಾಡಲು ಪ್ಲಾಸ್ಟಿಕ್ ಮುಕ್ತ ಮಾಡಿ : ಸಿಇಓ ಬದೋಲೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ನಮ್ಮ ಪರಿಸರಕ್ಕೆ ಹಾನಿಕಾರಕವಾದ ಪ್ಲಾಸ್ಟಿಕ್ ಯಿಂದ ನಾವೆಲ್ಲರೂ ದೂರ ಉಳಿಯಬೇಕು, ಪರಿಶುದ್ಧ ಬೆಳಕು, ಗಾಳಿ, ನೀರು ಮತ್ತು ಆಹಾರದಿಂದ ಮಾತ್ರ ಗುಣಮಟ್ಟದ ಆರೋಗ್ಯ ಕಾಪಾಡಲು ಸಾಧ್ಯ. ಹೀಗಾಗಿ ನಾವುಗಳು ಪ್ಲಾಸ್ಟಿಕ್ ಮುಕ್ತ ಗ್ರಾಮಗಳನ್ನಾಗಿ ಮಾಡಬೇಕು ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ದಿಲೀಪ್ ಬದೋಲೆ ತಿಳಿಸಿದ್ದರು.

ಶುಕ್ರವಾರ ತಾಲ್ಲೂಕಿನ ಧೂಮ್ಮನಸೂರು ಗ್ರಾಮದಲ್ಲಿ

ಪ್ಲಾಸ್ಟಿಕ್ ಬೇಡ ಪ್ರಕೃತಿ ಬೇಕು ಎಂಬ ಅಭಿಯಾನವನ್ನು ಉದ್ದೇಶ ಅವರು ಮಾತನಾಡಿದರು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ಕಾಲ್ನಡಿಗೆ ಮುಖಾಂತರ ಜಾತ ಹಮ್ಮಿಕೊಂಡು ಪ್ಲಾಸ್ಟಿಕ್ ಮುಕ್ತ ಎಂಬ ಅರಿವು ಮೂಡಿಸಲಾಯಿತು.

ದಿನನಿತ್ಯ ಆಹಾರ ಪದಾರ್ಥಗಳನ್ನು ಸಲುವಾಗಿ ನಾವು ಪ್ಲಾಸ್ಟಿಕ್ ಯನ್ನು ಉಪಯೋಗಿಸುತ್ತಿದ್ದು ಪ್ಲಾಸ್ಟಿಕ್ ನಲ್ಲಿ ಇರುವ ಕೆಲವೊಂದು ಬ್ಯಾಕ್ಟರಿಯಾಗಳು ನಾವುಗಳು ತಿನ್ನುವ ಆಹಾರದಲ್ಲಿ ಮಿಶ್ರಣಗೊಂಡು ಹಲವಾರು ರೋಗಗಳಿಗೆ ನಾವು ತುತ್ತಾಗುತ್ತಿದ್ದೇವೆ ಜೊತೆಗೆ ಜಲಮೂಲಗಳನ್ನು ಪ್ಲಾಸ್ಟಿಕ್ ಹಾವಳಿಯಿಂದ ರಕ್ಷಣೆ ಮಾಡುವುದು ಮತ್ತು ನಮ್ಮ ದನ ಕರುಗಳು ಸಹ ಪ್ಲಾಸ್ಟಿಕ್ ಸೇವನೆಯಿಂದ ಅಪಾಯಕಾರಿಯಾಗಿರುತ್ತದೆ ಎಂದು ಜನರಲ್ಲಿ ಅರಿವು ಮೂಡಿಸುವುದು ಅಭಿಯಾನದ ಪ್ರಮುಖ ಹೆಜ್ಜೆಯಾಗಿದೆ.

ಪ್ರತಿಯೊಬ್ಬರು ಮನೆಯಲ್ಲಿ ಅಡುಗೆ ಮಾಡುವಾಗ ಪ್ಲಾಸ್ಟಿಕ್ ಸುಡುವುದನ್ನು ತ್ಯಜಿಸಬೇಕು. ಅದರಿಂದ ಹೊರಬರುವ ವಿಷ ಅನಿಲದಿಂದ ಮನುಷ್ಯನ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತದೆ. ಆದ್ದರಿಂದ ಇದರ ಮಹತ್ವ ಅರಿತು ಸ್ವಚ್ಛತೆ ಕುರಿತು ನಾವೆಲ್ಲರು ಕೆಜೋಡಿಸಬೇಕು ಎಂದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ದೀಪಿಕಾ ಬಿ ನಾಯ್ಕರ ಅವರು ಮಾತನಾಡಿ, ಸಮಾಜದಲ್ಲಿ ಪ್ಲಾಸ್ಟಿಕ್ ಬಳಕೆ ತೀವ್ರವಾಗಿ ಬೆಳೆಯುತ್ತಿದೆ ಮತ್ತು ಪ್ಲಾಸ್ಟಿಕ್ ಅನ್ನು ನಿಷೇಧಿಸಬೇಕು ರಾಸಾಯನಿಕ ಬಿಡುಗಡೆ ಮಾಡುವ ವಸ್ತುವನ್ನು ನಿಷೇಧಿಸುವ ಮಹತ್ವವನ್ನು ವಿವರಿಸುತ್ತದೆ.

ತಾ.ಪಂ ಎಡಿ ಜಗನ್ನಾಥ್ (ಉಖಾ), ಗ್ರಾಮ ಪಂಚಾಯಿತಿ ಅಧ್ಯಕ್ಷ ವೀರಪ್ಪಾ ಭೋತಳೆ, ಉಪಾಧ್ಯಕ್ಷರು ಲಕ್ಷ್ಮಿ ಸಂಗುಳಗೀ, ಗ್ರಾ.ಪಂ ಸದ್ಯಸರು, ಸಂಜುಕುಮಾರ್ ಕಿಣಿ, ಗ್ರಾಮದ ಪ್ರಮುಖರುಗಳಾದ ಜ್ಞಾನದೇವ ಜಾಜಿ, ಜಾಫರ್, ಶ್ರೀಮಂತ ಮಾಸ್ಟರ್, ಸಂಗೀತ ನಿಂಬುರೆ, ಬಸವರಾಜ ಬೋರಳಿ ಮತ್ತು ಗ್ರಾಮ ಪಂಚಾಯತ ಪಿಡಿಓ ಮಲ್ಲಿಕಾರ್ಜುನ್ ಸಗಾರ್, ಗ್ರಾಮಪಂಚಾಯತ ಸಿಬ್ಬಂದಿಗಳಾದ ತುಕಾರಾಮ, ಓಂಕಾರ, ಗಂಗೂಶ್ರೀ, ವೈಜಿನಾಥ, ಬ್ರಹ್ಮಾನಂದ ಹಾಗೂ ಇನ್ನಿತರರು ಭಾಗಿಯಾಗಿದ್ದರು.

# ಅಭಿವೃದ್ಧಿಗೆ ರಸ್ತೆಗಳು ಪೂರಕ:ಸಂಸದ ಸಾಗರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.11: ತಾಲೂಕಿನಲ್ಲಿ ವಿವಿಧೆಡೆ ಪಿಎಂಜಿಎಸ್‌ವೈ ಯೋಜನೆಯಡಿ 6.45 ಕೋಟಿ ರೂ ಅನುದಾನದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಸಂಸದ ಸಾಗರ ಖಂಡ್ರೆ ಚಾಲನೆ ನೀಡಿದರು. ಮಳಚಾಪೂರ ಗ್ರಾಮದಲ್ಲಿ 2.65 ಕೋಟಿ ರೂ ಅನುದಾನದಲ್ಲಿ ಆಣದೂರ ವರೆಗಿನ ರಸ್ತೆ ಮತ್ತು 3.80 ಕೋಟಿ ರೂ ಅನುದಾನದಲ್ಲಿ ಧನ್ನೂರಾ(ಎಚ್) ದಿಂದ ಹಾಲೇಹಿಪ್ಪರಗಾ ವರೆಗಿನ ರಸ್ತೆ ಕಾಮಗಾರಿಗೆ ಶುಕ್ರವಾರ ಸಂಸದರು ಶಂಕು ಸ್ಥಾಪನೆ ನೆರವೇರಿದರು.

ನಂತರ ಮಾತನಾಡಿದ ಅವರು, ಗ್ರಾಮೀಣ ಭಾಗದ ಅಭಿವೃದ್ಧಿಗೆ ರಸ್ತೆಗಳು ಪೂರಕವಾಗಿವೆ. ಗ್ರಾಮೀಣ ಭಾಗದ ರಸ್ತೆಗಳು ಅಭಿವೃದ್ಧಿ ಕಂಡರೆ ಮಾತ್ರ ಕ್ಷೇತ್ರ ಪ್ರಗತಿ ಹೊಂದಲು ಸಾಧ್ಯವಾಗುತ್ತದೆ. ಆ ನಿಟ್ಟಿನಲ್ಲಿ ಗ್ರಾಮೀಣ ಭಾಗದಲ್ಲಿ ಹಾಳಾದ ರಸ್ತೆಗಳನ್ನು ಗುರುತಿಸಿ ಅಭಿವೃದ್ಧಿ ಪಡಿಸುವ ಪ್ರಯತ್ನ ಮಾಡಲಾಗುತ್ತಿದೆ ಎಂದರು. ಕ್ಷೇತ್ರದಲ್ಲಿ ಕಳೆದೊಂದು ವರ್ಷದಿಂದ ರಸ್ತೆ ಅಭಿವೃದ್ಧಿ, ಶಿಕ್ಷಣ, ಆರೋಗ್ಯ, ಕೃಷಿ ಕ್ಷೇತ್ರ ಅಭಿವೃದ್ಧಿ ಪಡಿಸಿ ಜನತೆಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕೆಲಸ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಸದ್ರುಪಾನಂದ ಸ್ವಾಮೀಜಿ ನೇತೃತ್ವ ವಹಿಸಿದ್ದರು. ಗ್ರಾಪಂ ಅಧ್ಯಕ್ಷೆ ಲಕ್ಷ್ಮಿ ??ಬಾಯಿ ಪಾಟೀಲ್ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಪ್ರಥಮ ದರ್ಜೆ ಗುತ್ತಿಗೆದಾರ ಅಶೋಕರಾವ ಸೋನಜಿ, ಜಿಪಂ ಮಾಜಿ ಅಧ್ಯಕ್ಷ

> ಗ್ರಾಮೀಣ ಭಾಗದ ಜನತೆ ಅಭಿವೃದ್ಧಿಯಾಗಬೇಕಾದರೆ ಉತ್ತಮ ರಸ್ತೆ ಸಂಪರ್ಕ ಅವಶ್ಯಕ. ಇದು ಕೇವಲ ಸಂಚಾರ ಸುಲಭಗೊಳಿಸುವುದಿಲ್ಲ. ಗ್ರಾಮೀಣ ಭಾಗದ ಆರ್ಥಿಕತೆ-ಯ ಪುನರಜೀವನಕ್ಕೂ ದಾರಿ ಮಾಡಿಕೊಡುತ್ತದೆ.
>
> -ಸಾಗರ ಖಂಡ್ರೆ ಸಂಸದರು ಬೀದರ್

ಶಿವರಾಜ ಹಾಸನಕರ್, ಗ್ರಾಪಂ ಉಪಾಧ್ಯಕ್ಷೆ ಜಗದೇವಿ ರಾಜನಾಳೆ, ಸದಸ್ಯರಾದ ಪ್ರವೀಣಕುಮಾರ ಪಾಟೀಲ್, ತುಕಾರಾಮ ಏಣ-ಕೂರೆ, ಸೈಯದ ಹಾಜಿ, ಫಾಳೆಪ್ಪ ಮೈಲೂರೆ, ಪಿಕೆಪಿಎಸ್ ಅಧ್ಯಕ್ಷ ಪ್ರಭು ಪಾಟೀಲ್, ಯುವ ಮುಖಂಡ ರಾಜಕುಮಾರ ಪಾಟೀಲ್ ಖಾನಾಪೂರ, ಪ್ರಮುಖರಾದ ವಿಶ್ವನಾಥ ಗುಮ್ಮೆ, ಸಿದ್ದು ಗುಮ್ಮೆ, ಶಾಮರಾವ ಪಾಟೀಲ್, ಬಸವರಾಜ ಪಾಟೀಲ್, ರಾಮಯ್ಯ ಸ್ವಾಮಿ, ಸಾಯಿನಾಥ ಪಾಟೀಲ್, ಶಿವಪುತ್ರ ಜೋಳೆ ಸೇರಿದಂತೆ ಹಲವರು ಇದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.